₹ 4 | ಪುಟ: 4 | ಸಂಪುಟ: 4 | ಸಂಚಿಕೆ 70 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 | Issue: 70 | Sunday, 30, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಈ ಬಾರಿ ಬಹುಮತದ ಬಿಜೆಪಿ ಸರ್ಕಾರ: ಮೋದಿ ವಿಶ್ವಾಸ

ಕೋಳಿಗುಡ್ಡ (ಬೆಳಗಾವಿ ಜಿಲ್ಲೆ): 'ಈ ಬಾರಿ ಜನರ ನಿರ್ಧಾರ, ಬಹುಮತದ ಬಿಜೆಪಿ ಸರ್ಕಾರ' ಎಂದು ಘೋಷಣೆ ಮೊಳಗಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಕಾರ್ಯಕರ್ತರಲ್ಲಿ ಹುಮ್ಮಸ್ಸು ತುಂಬಿದರು.

ರಾಯಬಾಗ ತಾಲ್ಲೂಕಿನ ಕೋಳಿಗುಡ್ಡ ಗ್ರಾಮದಲ್ಲಿ ಶನಿವಾರ ಎಂಟು ವಿಧಾನಸಭಾ ಕ್ಷೇತ್ರಗಳ ಪ್ರಚಾರ ಸಭೆಯಲ್ಲಿ ಬೃಹತ್ ಜನಸ್ತೋಮಕ್ಕೆ ಅವರು, ಪ್ರಸಕ್ತ ಚುನಾವಣೆಗೆ ಉತ್ತೇಜನ ನೀಡಲು ಹೊಸ ಘೋಷಣೆ ಮೊಳಗಿಸಿದರು.

39 ನಿಮಿಷದ ಭಾಷಣದಲ್ಲಿ ಆರು ಬಾರಿ ಇದೇ ಘೋಷಣೆ ಮೊಳಗಿಸಿದ ಅವರು, 'ಕರ್ನಾಟಕದ ಸಮಸ್ತ ಜನರು ಈ ಬಾರಿ ಸಶಕ್ತ ಮತ್ತು ಸುಸ್ಥಿರ ಸರ್ಕಾರ ರಚನೆ ಮಾಡಲು ನಿರ್ಧರಿಸಿದ್ದಾರೆ. ನನಗೆ ಕಾಣಿಸುತ್ತಿದೆ; ಬಿಜೆಪಿಯನ್ನು ಗೆಲ್ಲಿಸಿ ಮತ್ತೊಮ್ಮೆ ಡಬಲ್ ಎಂಜಿನ್ ಸರ್ಕಾರ ರಚಿಸಿಕೊಳ್ಳುತ್ತಾರೆ' ಎಂದೂ ವಿಶ್ವಾಸ ವ್ಯಕ್ತಪಡಿಸಿದರು.

ನನಗೆ ಕರ್ನಾಟಕದ ತಾಯಂದಿರ, ಸಹೋದರಿಯರ ಆಶೀರ್ವಾದ ಸಿಗುತ್ತದೆಯೇ? ನನಗೆ ಯುವ ಸಮೂಹದ ಬೆಂಬಲ ಸಿಗುತ್ತದೆಯೇ? ಭದ್ರ ಸರ್ಕಾರ ರಚಿಸಿ ತೋರಿಸುತ್ತೀರಾ...' ಎಂದು ಪ್ರಶ್ನಿಸಿದಾಗ, ಜನಸ್ತೋಮದಿಂದ ಹಾಂ... ಹಾಂ.. ಎಂಬ ಪ್ರತಿಕ್ರಿಯೆ ಬಂತು.





ನೀವು ನನ್ನ ಇನ್ನೊಂದು ಕೆಲಸ ಮಾಡಬೇಕು. ಖಂಡಿತವಾಗಿಯೂ ಮಾಡುತ್ತೀರಾ? ಪ್ರಾಮಿಸ್ ಮಾಡಿ' ಎಂದಾಗ ಮತ್ತೆ ಜನಸ್ತೋಮದಿಂದ ಹಾಂ... ಎಂಬ ಉತ್ತರ ಬಂತು.

ರಾಜ್ಯದ ಪ್ರತಿಯೊಂದು ಮನೆಗೂ ಹೋಗಿ. ನರೇಂದ್ರ ಮೋದಿಯ ನಮಸ್ಕಾರವನ್ನು ಪ್ರತಿಯೊಬ್ಬರಿಗೂ ಮುಟ್ಟಿಸಿ. ಮೋದಿ ನಿಮ್ಮ ಆಶೀರ್ವಾದ ಬೇಡಿದ್ದಾರೆಂದು ಹೇಳಿ' ಎಂದೂ ಅವರು ಕೋರಿದರು.

ಆಗ ಪ್ರೇಕ್ಷಕರ ಗ್ಯಾಲರಿಂದ ಕರದಾಡನ, ಘೋಷಣೆಗಳು ನಿರಂತರ ಮೊಳಗಿದವು.

ಅಥಣಿ, ರಾಯಬಾಗ, ಚಿಕ್ಕೋಡಿ–ಸದಲಗಾ, ಕುಡಚಿ, ಕಾಗವಾಡ, ಹುಕ್ಕೇರಿ, ಬಾಗಲಕೋಟೆ ಜಿಲ್ಲೆಯ ತೇರದಾಳ, ಜಮಖಂಡಿ ವಿಧಾನ ಸಭಾ ಕ್ಷೇತ್ರಗಳ ಅಪಾರ ಸಂಖ್ಯೆ ಕಾರ್ಯಕರ್ಯರು ಸೇ–ರಿದ್ದರು.

ರಾಜ್ಯ ಹೆದ್ದಾರಿಯಲ್ಲಿ ಸಾಲುಸಾಲು ವಾಹನಗಳು ನಿಂತಿದ್ದರಿಂದ ನಾಲ್ಕು ತಾಸು ಸಂಚಾರ ದಟ್ಟಣೆ ಉಂಟಾಯಿತು. ಜನರ ದೂರದಲ್ಲಿ ವಾಹನ ನಿಲ್ಲಿಸಿ ಹೊಲಗಳ ಮಧ್ಯೆಯೇ ಅಡ್ಡದಾರಿಯಲ್ಲಿ ನಡೆದು ಸಭಾಂಗಣ ಸೇರಿದರು.

**ಅಂಬೇಡ್ಕರ್ ಅವರನ್ನೇ ಅಸುರ ಎಂದ ಕಾಂಗ್ರೆಸ್**

ಬಾಬಾಸಾಹೇಬ ಅಂಬೇಡ್ಕರ್ ಅವರನ್ನು ಕಾಂಗ್ರೆಸ್ಸಿಗರು ಅಸುರ, ದೇಶದ್ರೋಹಿ, ಬ್ರಿಟಿಷರ ಕೈಗೊಂಬೆ ಎಂದೆಲ್ಲ ಇದೇ ಬೆಳಗಾವಿ ನೆಲದಲ್ಲಿ ಬೈದಿದ್ದರು. ಈಗ ನರೇಂದ್ರ ಮೋದಿಯನ್ನು ಬೈಯ್ಯುತ್ತಿದ್ದಾರೆ. ಜನಕಲ್ಯಾಣ ಕೆಲಸ ಮಾಡುವವರನ್ನು ಬೈಯ್ಯುವುದೇ ಕಾಂಗ್ರೆಸ್ಸಿಗರ ಕೆಲಸ' ಎಂದು ಪ್ರಧಾನಿ ಹೇಳಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬಳಸಿದ 'ವಿಷ ಸರ್ಪ' ಪದಕ್ಕೆ ಪ್ರತಿಯಾಗಿ ಮಾತನಾಡಿದ ಅವರು, 'ದೇಶಕ್ಕಾಗಿ ಕೆಲಸ ಮಾಡುವವರನ್ನು ಕಾಂಗ್ರೆಸ್ಸಿಗರು ಆಗಲೂ ಬೈಯ್ಯುತ್ತಿದ್ದರು, ಈಗಲೂ ಬೈಯ್ಯುತ್ತಿದ್ದಾರೆ. ಅವರ ಬಾಯಲ್ಲಿ ಬರುವ ಬೈಗುಳದ ಪದಗಳು ಯಾವ ಶಬ್ದಕೋಶದಲ್ಲೂ ಉಳಿದಿಲ್ಲ' ಎಂದೂ ಟೀಕಿಸಿದರು.

ಕರ್ನಾಟಕದ ಬಗ್ಗೆ ನನಗೆ ಅಪಾರ ಹೆಮ್ಮೆ ಇದೆ. ಇಡೀ ದೇಶದಲ್ಲಿ ನನಗೆ ಅತ್ಯಂತ ಇಷ್ಟವಾಗುವ ರಾಜ್ಯವಿದು. ಬಸವಣ್ಣ ಸಮಾನತೆ ಸಾರಿದ ನೆಲ, ಭಕ್ತ ಕನಕದಾಸರು ಸಹಬಾಳ್ವೆ ನೀಡಿದ ನೆಲ, ರಾಷ್ಟ್ರಕವಿ ಕುವೆಂಪು ಅವರು ಈ ನಾಡನ್ನು ಸರ್ವಜನಾಂಗದ ಶಾಂತಿಯ ತೋಟ ಎಂದು ಹೊಗಳಿದ್ದಾರೆ. ಒಂದು ರಾಜ್ಯ ಇಷ್ಟವಾಗಲು ಇದಕ್ಕಿಂತ ಇನ್ನೇನೂ ಬೇಕಿಲ್ಲ. ದುರಂತವೆಂದರೆ; ಇದೇ ರಾಜ್ಯದಲ್ಲಿ ಹುಟ್ಟಿದ ಕಾಂಗ್ರೆಸ್ಸಿಗರು ಕಟ್ಟ ಬೈಗುಳ ಕಲಿತಿದ್ದಾರೆ' ಎಂದೂ ಅವರು ಕನ್ನಡದಲ್ಲಿ ತಿರುಗೇಟು ನೀಡಿದರು.

ಕಾಂಗ್ರೆಸ್ಸಿನದು ಭ್ರಷ್ಟಾಚಾರದ ಕಾಲ, ಬಿಜೆಪಿಯದ್ದು ಅಮೃತ ಘಳಿಗೆ. ಮೋದಿ ಜನರ ಕೆಲಸ ಮಾಡುವವರೆಗೂ ಏನೂ ಮಾಡಿಕೊಳ್ಳಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್‌ಗೆ ಗೊತ್ತಾಗಿದೆ. ಹೀಗಾಗಿ, ನನ್ನ ಸಮಾಧಿ ಮಾಡಲು ಜಾಗ ಹುಡುಕಾಡುತ್ತಿದ್ದಾರೆ. ಆದರೆ, ದೇಶದ ತಾಯಂದಿರು, ಸಹೋದರಿಯರು ಎಲ್ಲ ಕಡೆ ಕಮಲ ಅರಳಿಸಿ ನನಗೆ ಆಶೀರ್ವಾದ ಮಾಡುತ್ತಿದ್ದಾರೆ' ಎಂದೂ ಹೇಳಿದರು.

ಕೃಷಿ ಹಾಗೂ ಸಹಕಾರ ಕ್ಷೇತ್ರಗಳು ಈ ಜಿಲ್ಲೆಯ ಜೀವನಾಡಿ. ಕಾಂಗ್ರೆಸ್ಸಿಗರು ಎರಡೂ ಕ್ಷೇತ್ರಗಳನ್ನು ಭ್ರಷ್ಟಾಚಾರಕ್ಕೆ ಬಳಸಿಕೊಂಡು, ತಮ್ಮ ಆಸ್ತಿ ಬೆಳೆಸಿಕೊಂಡರು. ಕಬ್ಬು ಬೆಳೆಗಾರರಿಗೆ ಉತ್ತಮ ದರ ನೀಡುವುದು, ಸಕ್ಕರೆಯ ಜತೆಗೆ ಹೆಚ್ಚು ಎಥೆನಾಲ್ ಉತ್ಪಾದನೆ ಮಾಡುವುದು ಸೇರಿದಂತೆ ರೈತರ ಅಭಿವೃದ್ಧಿಗೆ ಬೇಕಾದ ಕೆಲಸವನ್ನು ಬಿಜೆಪಿ ಸರ್ಕಾರ ಮಾಡಿದೆ. ಹೀಗಾಗಿ, ಈ ಬಾರಿ ಬಹುಮತದ ಸರ್ಕಾರ ನಿರ್ಧಾರವಾಗಿದೆ' ಎಂದೂ ಹೇಳಿದರು.

ಬಂಜಾರ ಸಮುದಾಯದವರಿಗೆ ಹಕ್ಕುಪತ್ರ ನೀಡುವ ಮೂಲಕ ಹೊಸ ಶಕೆ ಆರಂಭಿಸಿದ್ದು ಬಿಜೆಪಿ ಸರ್ಕಾರ. ಇಷ್ಟು ವರ್ಷ ಕಾಂಗ್ರೆಸ್ಸಿಗರು ಪರಿಶಿಷ್ಟರು, ಹಿಂದುಳಿದ ಹಾಗೂ ಬಡವರನ್ನು ತುಳಿಯುತ್ತಲೇ ಬಂದಿದ್ದರು. ಈ ಜನರ ಸೇವೆ ಮಾಡಲು ನನಗೆ 2014ರಲ್ಲಿ ಅವಕಾಶ ಸಿಕ್ಕಿತು. ಅದೇ ನನ್ನ ಭಾಗ್ಯ' ಎಂದೂ ಹೇಳಿದರು.

ಕರ್ನಾಟಕದಲ್ಲಿ ಈ ಬಾರಿ ಹಿರಿಯರು ಹಾಗೂ ಯುವಕರಿಂದ ಮಜಬೂತಾದ ಸರ್ಕಾರ ರಚಿಸುವ ಉದ್ದೇಶವಿದೆ. ಒಂದೆಡೆ ಕೃಷಿ, ಇನ್ನೊಂದೆಡೆ ತಂತ್ರಜ್ಞಾನ ಎರಡೂ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ್ದು ಈ ರಾಜ್ಯದ ವಿಶೇಷ. ಈ ರಾಜ್ಯವನ್ನು ದೇಶದಲ್ಏ ನಂಬರ್ ಒನ್ ಮಾಡುವುದೇ ನನ್ನ ಕನಸು' ಎಂದರು.

## ಗಾಳಿಗೂ ಜಿಎಸ್‌ಟಿ ಹಾಕುವ ಸರ್ಕಾರ: ಖರ್ಗೆ ಕಿಡಿ



ಅಗತ್ಯ ವಸ್ತುಗಳ ಬೆಲೆ ದಿನ ದಿನಕ್ಕೆ ಗಗನಕ್ಕೆ ಏರುತ್ತಿದ್ದು, ಗಾಳಿಯೊಂದನ್ನು ಬಿಟ್ಟು ಎಲ್ಲ ವಸ್ತುಗಳ ಮೇಲೂ ಜಿಎಸ್‌ಟಿ ವಿಧಿಸುತ್ತಿದ್ದಾರೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.


ಬೆಂಗಳೂರಿನ ಬಸನಗುಡಿಯಲ್ಲಿ ರೋಡ್ ಶೋ ಬಳಿಕ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದ ಖರ್ಗೆ, ಬಸವನಗುಡಿಯ ಜನ ಹೆಚ್ಚು ಆರೋಗ್ಯ ಕಾಳಜಿ ಉಳ್ಳವರಾಗಿದ್ದು, ಬೆಳಗ್ಗೆ ಹಾಗೂ ಸಂಜೆ ವಾಯು ವಿಹಾರ ಮಾಡುತ್ತಾರೆ. ಬಿಜೆಪಿಯವರು ಮುಂದೊಂದು ದಿನ ವಾಕಿಂ–ಗ್ ವೇಳೆ ಉಸಿರಾಡುವ ಆಮ್ಲಜನಕಕ್ಕೂ ಜಿಎಸ್‌ಟಿ ವಿಧಿಸುವ ಕಾಲ ದೂರವಿಲ್ಲ ಎಂದರು.

ಈಗಾಗಲೇ ಮಕ್ಕಳು ಬಳಸುವ ವಸ್ತುಗಳು, ಹಾಲು–ಮೊಸ–ರಿನ ಮೇಲೂ ಜಿಎಸ್ಟಿ ಹಾಕಿದ್ದಾರೆ. ಮುಂದೆ ಗಾಳಿಗೂ ಜಿಎಸ್‌ಟಿ ವಿಧಿಸಬಹುದು. ಹೀಗಾಗಿ ಅಭಿವೃದ್ಧಿ ಪರ ಇರುವ ಕಾಂಗ್ರೆಸ್ ಮತ ನೀಡಿ ಎಂದು ಖರ್ಗೆ ಮನವಿ ಮಾಡಿದರು.

ದೇಶದ ಸರ್ವತೋಮುಖ ಅಭಿವೃದ್ಧಿಗೆ ಹಲವಾರು ಜನಪರ ಕಾರ್ಯಕ್ರಮಗಳನ್ನು ಕೊಟ್ಟ ಹೆಗ್ಗಳಿಕೆ ಕಾಂಗ್ರೆಸ್‌ನದ್ದು. ಬಿಜೆಪಿಯವರು ಕೇವಲ ಸುಳ್ಳು ಹೇಳಿಕೊಂಡು ಬಂದಿದ್ದಾರೆ. ಕೊಟ್ಟ ಯಾವ ಭರವಸೆಯನ್ನೂ ಈಡೇರಿಸಿಲ್ಲ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ರಾಜ್ಯದಲ್ಲಿ ಭ್ರಷ್ಟಾಚಾರ ನಡೆಸುವ ಮೂಲಕ ಜಾಗತಿ–ಕ ಮಟ್ಟದಲ್ಲಿ ರಾಜ್ಯದ ಮಾನ ಹರಾಜು ಹಾಕಿದೆ. 40 ಪರ್ಸೆಂಟ್ ಭ್ರಷ್ಟಾಚಾರದ ಸರ್ಕಾರಕ್ಕೆ ಜನತೆ ತಕ್ಕ ಪಾಠ ಕಲಿಸಲು ಸಿದ್ಧರಾಗಿದ್ದಾರೆ. ನೀವೆಲ್ಲರೂ ಈ ಭ್ರಷ್ಟಸರ್ಕಾರವನ್ನು ಕಿತ್ತೊಗೆದು ಭ್ರಷ್ಟಾಚಾರ ರಹಿತ, ಪಾರದರ್ಶಕ ಹಾಗೂ ಅಭಿವೃದ್ಧಿ ಪರ ಆಡಳಿತ ನೀಡುವ ಕಾಂಗ್ರೆಸ್‌ನ್ನು ಅಧಿಕಾರಕ್ಕೆ ತರಬೇಕು ಎಂದು ಕರೆ ನೀಡಿದರು.

## ಡ್ರೋನ್ ದಾಳಿ: 22 ಉಕ್ರೇನಿಗರ ಸಾವು



ಕೀವ್: ಉಕ್ರೇನ್ ಮೇಲೆ ನಸುಕಿನಲ್ಲಿ ರಷ್ಯಾ ಸೇನೆಯು 20ಕ್ಕೂ ಹೆಚ್ಚು ಕ್ರೂಸ್ ಕ್ಷಿಪಣಿಗಳು ಮತ್ತು ಎರಡು ಡ್ರೋನ್‌ಗಳ ದಾಳಿ ನಡೆಸಿದ್ದು, ಮೂವರು ಮಕ್ಕಳು ಸೇರಿ 22 ನಾಗರಿಕರು ಮೃತಪಟ್ಟಿದ್ದಾರೆ.

ರಷ್ಯಾ ಉಡಾಯಿಸಿರುವ ಕ್ಷಿಪಣಿಗಳ ಪೈಕಿ ಎರಡು ಕ್ಷಿಪಣಿಗಳು ಉಕ್ರೇನ್ ಕೇಂದ್ರ ಭಾಗದಲ್ಲಿರುವ ರಾಜಧಾನಿ ಕೀವ್‌ನ ದಕ್ಷಿಣ ಉಮಾನ್ ನಗರದ ಒಂಬತ್ತು ಮಹಡಿಗಳ ವಸತಿ ಸಮುಚ್ಚಯದ ಮೇಲೆ ಅಪ್ಪಳಿಸಿದ್ದು, ಸಾವು–ನೋವು, ಆಸ್ತಿ ಹಾನಿ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯಲ್ಲಿ 17 ನಾಗರಿಕರು ಗಾಯಗೊಂಡಿದ್ದಾರೆ. ಕಟ್ಟಡಗಳ ಅವಶೇಷಗಳಡಿ ಸಿಲುಕಿದ್ದ ಮೂವರು ಮಕ್ಕಳನ್ನು ರಕ್ಷಿಸಲಾಗಿದೆ ಎಂದು ಉಕ್ರೇನ್ ಗೃಹ ಸಚಿವ ಐಹೊರ್ ಕ್ಲಿಮೆಂಕೊ ತಿಳಿಸಿದ್ದಾರೆ.

ದಾಳಿಗೆ ಗೊತ್ತುಪಡಿಸಲಾಗಿದ್ದ ಸ್ಥಳದ ಎಲ್ಲ ಪ್ರಮುಖ ಸೌಲಭ್ಯಗಳನ್ನು ಧ್ವಂಸಗೊಳಿಸಲಾಗಿದೆ' ಎಂದು ರಷ್ಯಾ ರಕ್ಷಣಾ ಸಚಿವಾಲಯದ ವಕ್ತಾರ ಲೆಫ್ಟಿನೆಂಟ್ ಜನರಲ್ ಐಗೊರ್ ಕೊನಾಶೆಂಕೊವ್ ಹೇಳಿದ್ದಾರೆ.

ಇದೇ ವೇಳೆ ರಷ್ಯಾ ನಿಯಂತ್ರಿತ ಡೊನೆಟ್‌ಸ್ಕ್ ನಗರದ ಮೇಯರ್ ಅಲೆಕ್ಸಿ ಕುಲಮ್ಜಿನ್, ಉಕ್ರೇನಿನ ಕ್ಷಿಪಣಿ ದಾಳಿಗೆ ನಗರದಲ್ಲಿ ಏಳು ನಾಗರಿಕರು ಶುಕ್ರವಾರ ಸಾವನ್ನಪ್ಪಿದ್ದಾರೆ. ಉಕ್ರೇನ್ ಸೇನೆ ಚಲಿಸುತ್ತಿದ್ದ ಮಿನಿ ಬಸ್ ಗುರಿಯಾಗಿಸಿಕೊಂಡು ದಾಳಿ ನಡೆದಿದೆ ಎಂದು ಹೇಳಿದ್ದಾರೆ.

## ಇಂದು ಪ್ರಿಯಾಂಕ ಗಾಂಧಿ ಬೆಳಗಾವಿಗೆ



ಬೆಳಗಾವಿ: ವಿಧಾನಸಭೆ ಚುನಾವಣೆ ಹಿನ್ನೆಲೆ ಏ. 30ರಂದು ಶಾಸಕಿ ಅಂಜಲಿ ನಿಂಬಾಳಕರ್ ಪರ ಮತಯಾಚನೆ ಮಾಡಲು ಖಾನಾಪುರ ಪಟ್ಟಣಕ್ಕೆ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ್ ಗಾಂಧಿ ವಾದ್ರಾ ಅವರು ಆಗಮಿಸಲಿದ್ದಾರೆ. ಅಲ್ಲದೆ ಬೆಳಗ್ಗೆ 11 ಗಂಟೆಗೆ ಖಾನಾಪುರದ ಮಲಪ್ರಭ ಕ್ರೀಡಾಂಗಣದಲ್ಲಿ ಬಹಿರಂಗ ಸಭೆಯಲ್ಲಿ ಮಾತನಾಡಲಿದ್ದಾರೆ.

## 5 ಕೋಟಿ ರೂ. ನಗದು ಜಪ್ತಿ



ಬಾಗಲಕೋಟೆ : ಬಾಗಲಕೋಟೆ ಜಿಲ್ಲೆಯ ಲೋಕಾಪುರ ಪಟ್ಟಣದ ಲಕ್ಷಾನಟ್ಟಿ ಚೆಕ್ ಪೋಸ್ಟ್‌ನಲ್ಲಿ ಬಳಿ 5 ಕೋಟಿ ರೂಪಾಯಿ ಹಣವನ್ನ ಜಪ್ತಿ ಮಾಡಲಾಗಿದೆ.

ಮುಧೋಳ ಚುನಾವಣಾಧಿಕಾರಿಗಳು, ಫ್ಲೈಯಿಂಗ್ ಸ್ಕ್ವಾಡ್ ಹಾಗೂ ಲೋಕಾಪುರ ಪೊಲೀಸರು ಈ ಕಾರ್ಯಾಚರಣೆ ನಡೆಸಿದ್ದಾರೆ.


ಲಕ್ಷಾನಟ್ಟಿ ಚೆಕ್ ಪೋಸ್ಟ್‌ನಲ್ಲಿ ವಾಹನ ತಪಾಸಣೆ ನಡೆಸಲಾಗ್ತಿತ್ತು. ಹುಬ್ಬಳ್ಳಿಯಿಂದ ಮುಧೋಳ ಮಾರ್ಗವಾಗಿ ಈ ಹಣವನ್ನು ಸಾಗಿಸಲಾಗುತ್ತಿತ್ತು. ಸೂಕ್ತ ದಾಖಲೆಯಿಲ್ಲದ ಹಿನ್ನೆಲೆ ಚುನಾವಣಾಧಿಕಾ–ರಿಗಳು 5 ಕೋಟಿ ರೂಪಾಯಿ ಹಣವನ್ನ ಜಪ್ತಿ ಮಾಡಿದ್ದಾರೆ.

ಬೊಲೆರೋ ವಾಹನದಲ್ಲಿದ್ದವರು ಇದು ಯೂನಿಯನ್ ಬ್ಯಾಂಕ್‌ಗೆ ಸೇರಿದ ಹಣ ಎಂದು ತಿಳಿಸಿದ್ದಾರೆ. ಹುಬ್ಬಳ್ಳಿ ಯೂನಿಯನ್ ಬ್ಯಾಂಕ್‌ನಿಂದ ಮುಧೋಳ ಯೂನಿಯನ್ ಬ್ಯಾಂಕ್‌ಗೆ ಸಾಗಿಸಲಾಗುತ್ತಿತ್ತು ಎನ್ನಲಾಗಿದೆ. ಆದರೆ ಸೂಕ್ತ ದಾಖಲೆ ನೀಡದ ಹಿನ್ನೆಲೆ ಚುನಾವಣಾಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

## ಬೆಳಗಾವಿಯಲ್ಲಿ ಎನ್‌ಐಎ ಕೋರ್ಟ್ ಸ್ಥಾಪಿಸಲು ಶಿಫಾರಸ್ಸು

ಬೆಂಗಳೂರು : ಎನ್ ಐ ಎ ಪ್ರಕರಣಗಳ ವಿಚಾರಣೆ ಹಾಗೂ ವಿಲೇವಾರಿಗೆ ಅನುಕೂಲವಾಗುವಂತೆ ರಾಜ್ಯದ ಕಂದಾಯ ವಿಭಾಗಗಳಾದ ಬೆಳಗಾವಿ, ಕಲಬುರ್ಗಿ ಮತ್ತು ಮೈಸೂರಿನಲ್ಲಿ ಎನ್‌ಐಎ ವಿಶೇಷ ನ್ಯಾಯಾಲಯ ಸ್ಥಾಪಿಸುವಂತೆ ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ.

ವ್ಯಕ್ತಿಯೊಬ್ಬರು ಧರ್ಮವೊಂದಕ್ಕೆ ಅಪಮಾನ ವಾಗುವಂತೆ ಚಿತ್ರವನ್ನು ವಾಟ್ಸಾಪ್ ಸ್ಟೇಟಸ್ ನಲ್ಲಿ ಹಾಕಿಕೊಂಡ ಹಿನ್ನಲೆಯಲ್ಲಿ ವ್ಯಕ್ತಿಯ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ಎದುರು ಜಮಾಯಿಸಿದ ಗಲಭೆ ಪ್ರಕರಣದಲ್ಲಿ



40 ಆರೋಪಿಗಳಿಗೆ ಜಾಮೀನು ನಿರಾಕರಿಸಿ ಹೊರಡಿಸಿದ ಆದ–ೇಶದಲ್ಲಿ ನ್ಯಾ.ಬಿ.ವೀರಪ್ಪ ನೇತೃತ್ವದ ವಿಭಾಗಿಯ ಪೀಠ ಈ ಆದ–ೇಶ ನೀಡಿದೆ. ರಾಜ್ಯದಲ್ಲಿ ಸದ್ಯ ಬೆಂಗಳೂರಿನಲ್ಲಿ ಎನ್‌ಐಎ ವಿಶೇಷ ನ್ಯಾಯಾಲಯ ಇದೆ. ಬೆಳಗಾವಿ, ಮೈಸೂರು, ಕಲಬುರ್ಗಿಯಲ್ಲಿ ಕೋರ್ಟ್ ಸ್ಥಾಪಿಸಲು ಇದು ಸಕಾಲ ಎಂದು ನ್ಯಾಯಾಲಯ ಅಭಿಪ್ರಾಯ ವ್ಯಕ್ತಪಡಿಸಿದೆ. ರಾಷ್ಟ್ರೀಯ ತನಿಖಾ ಸಂಸ್ಥೆ ಕಾಯ್ದೆಯಡಿ ಇಡೀ ರಾಜ್ಯಕ್ಕೆ ಬೆಂಗಳೂರಿನಲ್ಲಿ ಮಾತ್ರ ಒಂದೇ ವಿಶೇಷ ಕೋರ್ಟ್ ಇದೆ. ಎಂಟರಿಂದ ಒಂಬತ್ತು ವರ್ಷ ಹಳೆಯದಾದ ಪ್ರಕರಣಗಳು ಬಾಕಿ ಉಳಿದಿವೆ. ಸದ್ಯ ನ್ಯಾಯಾಲಯಗಳಲ್ಲಿ ಮಾತ್ರ ಜನರಿಗೆ ನಂಬಿಕೆ ಇದೆ. ಎಲ್ಲಾ ಕಡೆಗಳಲ್ಲಿ ನ್ಯಾಯ ಸಿಗದಿದ್ದರೆ ಜನ ಅಂತಿಮವಾಗಿ ನ್ಯಾಯಾಲಯದ ಕದ ತಟ್ಟುತ್ತಾರೆ. ಧರ್ಮ, ಜಾತಿ, ಲಿಂಗ ಅಥವಾ ಜನ್ಮ ಸ್ಥಳ ಲೆಕ್ಕಿಸದೆ ಪ್ರತಿಯೊಬ್ಬರು ಗೌರವಿಸುವ ಸ್ಥಳ ಎಂದರೆ ಅದು ನ್ಯಾಯಾಲಯ. ಆದ್ದರಿಂದ ವಿಶೇಷ ಕೋರ್ಟ್ ಗಳ ರಚನೆ ಸೂಕ್ತ ಎಂದು ನ್ಯಾಯ ಪೀಠ ಅಭಿಪ್ರಾಯ ಪಟ್ಟಿದೆ.

## ಗಾಬರಿಪಡುವಂತದ್ದೇನಿಲ್ಲ, ಗಟ್ಟಿಮುಟ್ಟಾಗಿದ್ದೇನೆ; ಸ್ಪಷ್ಟನೆ ನೀಡಿದ ಸಿದ್ದರಾಮಯ್ಯ



ವಿಜಯಪುರ: ಚುನಾವಣಾ ಪ್ರಚಾರಕ್ಕೆ ತೆರಳಿದ್ದ ವೇಳೆ ವಿಪಕ್ಷ ನಾಯಕ ಸಿದ್ದರಾಮಯ್ಯ ಕಾರಿನ ಡೋರ್ ಬಳಿ ನಿಂತು ಜನರತ್ತ ಕೈ ಬೀಸುತ್ತಿದ್ದ ವೇಳೆ ಇದ್ದಕ್ಕಿದ್ದಂತೆ ಕುಸಿದು ಬಿದ್ದಿದ್ದಾರೆ ಎಂಬ ಸುದ್ದಿಯಾಗಿತ್ತು. ಈ ಬಗ್ಗೆ ಸ್ವತ: ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದು ಗಾಬರಿಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.

ಗಾಬರಿಪಡುವಂತದ್ದೇನಿಲ್ಲ, ಗಟ್ಟಿಮುಟ್ಟಾಗಿದ್ದೇನೆ. ನಿತ್ಯ ಅಡ್ಡಾಡುವ ಕಾರು ಬದಲಾಗಿರುವ ಕಾರಣ ಸೈಡ್ ಸ್ಟೆಪ್ ಇಲ್ಲದ ಕಾರಿನಲ್ಲಿ ಕಾಲು ಜಾರಿ ಹಿಂದಕ್ಕೆ ಮುಗ್ಗರಿಸಿದ್ದೆ. ಈಗ ಆರಾಮವಾಗಿದ್ದೇನೆ ಎಂದು ತಿಳಿಸಿದ್ದಾರೆ.

ಇದನ್ನು ಅತಿರಂಜಿತ ರೀತಿಯಲ್ಲಿ ವರದಿಮಾಡಿ ಜನರನ್ನು ಗಾಬರಿ ಮಾಡಬೇಡಿ ಎಂದು ಸಿದ್ದರಾಮಯ್ಯ ವಿನಂತಿಸಿದ್ದಾರೆ.


## ಮಡಿಕೇರಿಯಲ್ಲಿ ರೋಡ್ ಶೋ ಅರ್ಧಕ್ಕೆ ನಿಲ್ಲಿಸಿದ ಶಾ

ಮಡಿಕೇರಿ: ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ರೋಡ್ ಶೊ ಅರ್ಧಕ್ಕೆ ಮೊಟಕುಗೊಂಡಿತು. ಚೌಡೇಶ್ವರಿ ದೇವಾಲಯದಿಂದ ಜನರಲ್ ತಿಮ್ಮಯ್ಯ ವೃತ್ತದವರೆಗೆ ಬೆಳಿಗ್ಗೆ 10.30 ಕ್ಕೆ ನಿಗದಿಯಾಯಿತು. ಆದರೆ ಅಮಿತ್ ಶಾ ಮಧ್ಯಾಹ್ನ 12.36 ಕ್ಕೆ ರೋಡ್ ಶೊ ಆರಂಭಿಸಿದರು.

ಚೌಕಿಯನ್ನು ದಾಟಿ ಸ್ಕ್ವಾಡನ್ ಲೀಡರ್ ಅಜ್ಜಮಾಡ ಬಿ.ದೇವಯ್ಯ ವೃತ್ತಕ್ಕೆ ಮಧ್ಯಾಹ್ನ 1.20 ಕ್ಕೆ ಬರುತ್ತಿದ್ದಂತೆ ರೋಡ್ ಶೊ ಅನ್ನು ಮೊಟಕುಗೊಳಿಸಿದರು.

ತೆರೆದ ವಾಹನದಿಂದ ಇಳಿದ ಅವರು ಕಾರ್ಯಕರ್ತರತ್ತ ಕೈಬೀಸಿ ತಮ್ಮ ಕಾರನ್ನೇರಿ ಹೊರಟರು. ಸುಮಾರು 3 ಸಾವಿರ ಮಂದಿ ರೋಡ್ ಶೊನಲ್ಲಿ ಭಾಗವಹಿಸಿದ್ದರು.

ನಗರದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ




ಶನಿವಾರ ನಡೆಸಿದ ರೋಡ್ ಶೊನಲ್ಲಿ ಸಾವಿರಾರು ಮಂದಿ ಭಾಗಿಯಾದರು.

ಮಹದೇವಪೇಟೆಯ ಚೌಡೇಶ್ವರಿ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಅವರು ತೆರೆದ ವಾಹನದಲ್ಲಿ ಮೆರವಣಿಗೆ ನಡೆಸಿದರು. ಈ ವೇಳೆ ಸ್ಥಳದಲ್ಲಿ ಜಮಾಯಿಸಿದ್ದ ಸಾವಿರಾರು ಮಂದಿಯತ್ತ ಕೈಬೀಸಿದರು. ಕೇಸರಿ ಬಾವುಟಗಳು ಹಾಗೂ ಬಿಜೆಪಿ ಬಾವುಟಗಳನ್ನು ಹಿಡಿದ ಕಾರ್ಯಕರ್ತರು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದರು.

## ಪ್ರಧಾನಿ ನರೇಂದ್ರ ಮೋದಿ ನನಗೆ ಸ್ಫೂರ್ತಿ: ಡಾ ರವಿ ಪಾಟೀಲ

ಬೆಳಗಾವಿ: ದೇಶದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕೈಗೊಂಡ ಅಭೂತಪೂರ್ವ ಅಭಿವೃದ್ಧಿ ಕಾರ್ಯ ಹಾಗೂ ದೇಶಕ್ಕೆ ಅವರು ನೀಡಿದ ನೇತೃತ್ವ, ದೇಶಪ್ರೀತಿ ನನಗೆ ಮಾದರಿಯಾಗಿದೆ ಎಂದು ಉತ್ತರ ವಿಧಾನಸಭಾ ಕ್ಷೇತ್ರದ ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿ ಡಾ. ರವಿ ಪಾಟೀಲ್ ಅಭಿಪ್ರಾಯ ವ್ಯಕ್ತಪಡಿಸಿದರು.

ಬೆಳಗಾವಿ ನಗರದ ರಾಮನಗರದಲ್ಲಿ ಭರ್ಜರಿ ಪ್ರಚಾರ ಕೈಗೊಂಡ ಡಾ. ರವಿ ಪಾಟೀಲ್ ಬೆಳಗಾವಿ ಉತ್ತರ ಕ್ಷೇತ್ರದಲ್ಲೂ ಅಭಿವೃದ್ಧಿಗೆ ವಿಪುಲ ಅವಕಾಶಗಳಿದ್ದು ಅದನ್ನು ಸಾಕರ್ ಗೊಳಿಸಬೇಕಾಗಿದೆ. ಈ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕೈಗೊಂಡ ಅಭಿವೃದ್ಧಿಯೇ ನನಗೆ ಶ್ರೀರಕ್ಷೆ ಎಂದು ಹೇಳಿದರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವ ದೇಶದ ಪ್ರತಿಯೊಬ್ಬ ಪ್ರಜೆಯ ಮನದಲ್ಲಿ ಮನೆ ಮಾಡಿದೆ ಹೀಗಾಗಿ ಪ್ರಚಾರಕ್ಕೆ ಹೋದೆಲ್ಲಡೆ ಮತದಾರರು ಆತ್ಮೀಯ ಸ್ಪಂದನೆ ನೀಡುತ್ತಿದ್ದಾರೆ. ಸ್ವಯಂಪ್ರದಾಯರಾಗಿ ಮುಂದೆ ಬಂದು ಪ್ರಚಾರ ಕಾರ್ಯದಲ್ಲಿ ತೊಡಗುವ ಮೂಲಕ ತಮ್ಮ ಕುಟುಂಬ ವರ್ಗ, ಅಕ್ಕ ಪಕ್ಕದ ಮನೆಯವರು ಹಾಗೂ ತಮ್ಮ ಬಡಾವಣೆಗಳಲ್ಲಿ ಸ್ವಯಂ ಪ್ರೇ–ರಿತರಾಗಿ ಪ್ರಚಾರ ಮಾಡುತ್ತಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಮಾಜಿ ಉಪ ಮುಖ್ಯಮಂತ್ರಿ ಗೋವಿಂದ್ ಕಾರಜೋಳ್ ಹಾಗೂ ಹಿಂದುಗಳ ಕಣ್ಮಣಿ ಮಾಜಿ ಕೇಂದ್ರ ಸಚಿವರು ಹಾಗು ಶಾಸಕ ಬಸವನಗೌಡ ಯತ್ನಾಳ್ ಕ್ಷೇತ್ರದಲ್ಲಿ ಪ್ರಚಾರ ಕಾರ್ಯ ಕೈಗೊಂಡ ನಂತರ ಮತದಾರ ಬಂಧುಗಳಿಂದ ಅಭೂತಪೂರ್ವ ಸ್ಪಂದನೆ



ದೊರಕಿದ್ದು ಪ್ರಚಾರ ಕಾರ್ಯಕ್ಕೆ ಹೊಸ ಉತ್ಸಾಹ ಚೈತನ್ಯ ತುಂಬಿದೆ.

ಈಗಾಗಲೇ ಒಂದು ಹಂತದ ಪ್ರಚಾರ ಕಾರ್ಯ ಸಂಪೂರ್ಣಗೊಂಡಿದ್ದು ಕ್ಷೇತ್ರದ ಬಹುತೇಕ ಮತದಾರರನ್ನು ಭೇಟಿ ಮಾಡಿ ಪ್ರಚಾರ ಕಾರ್ಯ ಕೈಗೊಳ್ಳಲಾಗಿದೆ.

ಬೆಳಗಾವಿ ಉತ್ತರ ಕ್ಷೇತ್ರದ ಹಾಗೂ ರಾಜ್ಯದ ಎಲ್ಲ ನಾಯಕರಿಂದ ವ್ಯಾಪಕ ಸ್ಪಂದನೆ ದೊರಕಿದ್ದು ಗೆಲುವಿನ ಹಾದಿಯನ್ನು ಸುಗಮಗೊಳಿಸಿದೆ. ಸ್ಥಳೀಯ ನಾಯಕರು ತಾವೇ ಮುಂದಾಳತ್ವ ವಹಿಸಿ ಕ್ಷೇತ್ರದ ಎಲ್ಲ ಬಡಾವಣೆಗಳಲ್ಲಿ ಸ್ವತಂತ್ರವಾಗಿ ತಮ್ಮ ಕಾರ್ಯಕರ್ತರ ಗುಂಪಿನೊಂದಿಗೆ ಪ್ರಚಾರ ಕಾರ್ಯ ಕೈಗೊಂಡಿದ್ದಾರೆ. ಹೀಗಾಗಿ ಮುಂಬರುವ ಮೇ 10 ರ ಚುನಾವಣೆಯ ಕುರಿತು ಸ್ಪಷ್ಟ ಚಿತ್ರಣ ದೊರಕುತ್ತಿದ್ದು ಗೆಲುವು ನಿಶ್ಚಿತ ಎನಿಸಿದೆ.

ನಾನು ಇತರ ಪ್ರತಿಪಕ್ಷಗಳ ಅಭ್ಯರ್ಥಿಗಳು ಯಾವ ರೀತಿ ಮತದಾರರ ಮೇಲೆ ಪ್ರಭಾವ ಬೀರುತ್ತಿದ್ದಾರೆ ಎಂಬುದಕ್ಕಿಂತ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು, ಹಾಗೆಯೇ ರಾಜ್ಯದಲ್ಲಿ ಬಿಎಸ್ ಯಡಿಯೂರಪ್ಪನವರ ನೇತೃತ್ವ, ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಅವರು ಕೈಗೊಂಡ ಅಭಿವೃದ್ಧಿ ಕಾರ್ಯಗಳನ್ನು ಮುಂದೆ ಇಟ್ಟುಕೊಂಡು ಪ್ರಚಾರ ಮಾಡುತ್ತಿದ್ದೇನೆ ಹೊರತು ವಿರೋಧಿಗಳ ಕು–ರಿತು ಚಿಂತಿಸಲು ಸಮಯವಿಲ್ಲ. ವಿರೋಧಿಗಳತಂತ್ರ ಕುತಂತ್ರಗಳಿಗೆ ತಲೆಕೆಡಿಸಿ ಕೊಳ್ಳಬೇಕಿಲ್ಲ. ಭಾರತೀಯ ಜನತಾ ಪಾರ್ಟಿಯ ಪ್ರಚಾರದ ತೀವ್ರತೆಯೇ ಬೇರೆಯಾಗಿದೆ.

ಮತದಾರರನ್ನು ಮನೆಮನೆಗೆ ತೆರಳಿ ಭೇಟಿ ಮಾಡುವುದು ನನ್ನ ಮೂಲ ಉದ್ದೇಶ ಹೀಗಾಗಿ ಪ್ರಚಾರ ಕಾರ್ಯದಲ್ಲಿ ಈ ಕು–ರಿತು ಗಮನಹರಿಸುತ್ತಿದ್ದೇನೆ.

ಭಾರತೀಯ ಜನತಾ ಪಕ್ಷ ಸರ್ಕಾರ ನೀಡಿದ ಸ್ವಚ್ಛ ಆಡಳಿತ ಜನಸಾಮಾನ್ಯನ ಮೆಚ್ಚುಗೆಗೆ ಪಾತ್ರವಾಗಿದೆ ಹೀಗಾಗಿಯೇ ಮತದಾರರಿಂದ ಇಂತಹ ಅಭೂತಪೂರ್ವ ಬೆಂಬಲ ದೊರಕುತ್ತಿದೆ. ಮತದಾರು ತೋ–ರಿಸುತ್ತಿರುವ ಪ್ರೀತಿ ಅಭಿಮಾನ ವಿಶ್ವಾಸಕ್ಕೆ ಚಿರಋಣಿಯಾಗಿದ್ದೇನೆ ಎಂದು ಡಾ. ರವಿ ಪಾಟೀಲ್ ತಿಳಿಸಿದರು.




## ವಾಕರಸಾ ಸಂಸ್ಥೆಯ ಮಾಸಿಕ ಬಸ್ ಪಾಸುಗಳಿಗೆ ಹೆಚ್ಚುವರಿ ಪ್ರಯಾಣ ಅವಧಿ

ಬೆಳಗಾವಿ: ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬೆಳಗಾವಿ ವಿಭಾಗ ವಿಭಾಗದಲ್ಲಿ ಮಾಸಿಕ ಬಸ್ ಪಾಸುಗಳ ಅವಧಿಯನ್ನು ಒಂದು ತಿಂಗಳಿಗೆ 02ದಿನ, ಎರಡು ತಿಂಗಳಿಗೆ 05 ದಿನ, ಮೂರು ತಿಂಗಳಿಗೆ 10 ದಿನಗಳನ್ನು ಹೆಚ್ಚುವರಿಯಾಗಿ ಪ್ರಯಾಣ ಅವಧಿಯನ್ನು ನೀಡಲಾಗಿದೆ.

**ಹೆಚ್ಚುವರಿಯಾದ ಅವಧಿ ದಿನಗಳ ವಿವರ :**

ಮಾಸಿಕ ಬಸ್ ಪಾಸ್ ರಜತ–1, 30 ದಿನಗಳು : ಮಾಸಿಕ ಬಸ್ ಪಾಸ್ 30 ದಿನಗಳ ಬದಲಾಗಿ 32 ದಿನಗಳು ಪ್ರಯಾಣಿಸಲು ಅವಕಾಶದ್ವಿ ಮಾಸಿಕ ಬಸ್ ಪಾಸ ರಜತ–2

ದ್ವಿ ಮಾಸಿಕ ಬಸ್ ಪಾಸ್ ರಜತ–2, 60 ದಿನಗಳು : ದ್ವಿ ಮಾಸಿಕ ಬಸ್ ಪಾಸ್ 60 ದಿನಗಳ ಬದಲಾಗಿ ಬದಲಾಗಿ 65 ದಿನಗಳು ಪ್ರಯಾಣಿಸುವ ಅವಕಾಶ

ತ್ರೈಮಾಸಿಕ ಬಸ್ ಪಾಸ ರಜತ–3, 90 ದಿನಗಳು : ತ್ರೈಮಾಸಿಕ ಬಸ್ ಪಾಸ್ 90 ದಿನಗಳ ಬದಲಾಗಿ 100 ದಿನಗಳು ಪ್ರಯಾಣಿಸುವ ಅವಕಾಶವಿದೆ ಎಂದು ವಾಕರಸಾ ಸಂಸ್ಥೆಯ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಂಗ್ಲ ಮಾಧ್ಯಮ ಮೌಲಾನಾ ಆಜಾದ್ ಮಾದರಿ ಶಾಲೆಗಳ 6ನೇ ತರಗತಿಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಆಂಗ್ಲ ಮಾಧ್ಯಮದ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ 6ನೇ ತರಗತಿಯ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್,ಜೈನ್,ಬೌದ್ಧ, ಪಾರ್ಸಿ ಸಿಖ್ ಹಾಗೂ ಇತರೆ ಸಮುದಾಯದ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಬೆಳಗಾವಿ ಜಿಲ್ಲೆಯ ಬೆಳಗಾವಿ ನಗರ, ಹುಕ್ಕೇರಿ, ಸಂಕೇಶ್ವರ, ಯಮಕನಮರಡಿ, ಚಿಕ್ಕೋಡಿ, ಸದಲಗಾ, ಕುಡಚಿ, ಗೋಕಾಕ, ಮೂಡಲಗಿ, ರಾಮದುರ್ಗ, ಸವದತ್ತಿ ಮತ್ತು ಖಾನಾಪೂರ ಪಟ್ಟಣಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 14 ಮೌಲಾನಾ ಆಜಾದ ಮಾದರಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಸಂಬಂಧಪಟ್ಟ ಮೌಲಾನಾ ಆಜಾದ್ ಮಾದರಿ ಶಾಲೆಗೆ ಅಥವಾ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಕ್ಕೆ ಭೇಟಿ ನೀಡಿ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಪಡೆದು ಸಲ್ಲಿಸಬಹುದು

6ನೇ ತರಗತಿಗೆ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಪಾರ್ಸಿ ಹಾಗೂ ಸಿಖ್ ಸಮುದಾಯದವರೆಗೆ ಶೇ.75 ಹಾಗೂ ಇತರೆ ಸಮುದಾಯದ ವಿದ್ಯಾರ್ಥಿಗಳಿಗೆ ಶೇ.25 ಸ್ಥಾನಗಳ ಅವಕಾಶವಿರುತ್ತದೆ.

ಅಲ್ಪಸಂಖ್ಯಾತ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಕುಟುಂಬದ ವಾರ್ಷಿಕ ಆದಾಯ ರೂ.1 ಲಕ್ಷ ಮಿತಿಯಲ್ಲಿರಬೇಕು. ಮತ್ತು ಪ್ರವರ್ಗ–1 ಮತ್ತು ಪರಿಶಿಷ್ಟ ಜಾತಿ/ವರ್ಗದ ವಿದ್ಯಾರ್ಥಿಗಳ ವಾರ್ಷಿಕ ಆದಾಯ ರೂ.2.50ಲಕ್ಷ ಮಿತಿಯೊಳಗಿರತಕ್ಕದ್ದು.

ಪ್ರವೇಶ ಪರೀಕ್ಷೆ/ಮೇರಿಟ್ ಮತ್ತು ರೋಸ್ಟರ್ ಪದ್ಧತಿ ಅನುಸಾರ ಶಾಲಾ ಹಂತದಲ್ಲಿಯೇ ದಾಖಲಾತಿಪ್ರಕ್ರೀಯೆಯನ್ನು ಕೈಗೊಳ್ಳಲಾಗುವುದು.

ಆಸಕ್ತಿಯುಳ್ಳವರು ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೌಲಾನಾ ಆಜಾದ್ ಅಲ್ಪಸಂಖ್ಯಾತರ ಭವನ ಕೆ.ಎಸ್.ಸಿ.ಎ ಕ್ರೀಕೆಟ್ ಕ್ರೀಡಾಂಗಣ ಎದುರುಗಡೆ, ರಾಮತೀರ್ಥ ನಗರ ಬೆಳಗಾವಿ, ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಹಾಗೂ ಸಂಬಂಧಪಟ್ಟ ಶಾಲೆಗಳಿಂದ ಅರ್ಜಿ ಪಡೆದು ಭರ್ತಿ ಮಾಡಿ ಮೇ.13 2023 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8431895089, 9535937979, 8867479317, 7406277267, 7353759580 ಕ್ಕೆ ಸಂಪರ್ಕಿಸಬಹುದು ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಂಗ್ಲ ಮಾಧ್ಯಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ 6ನೇ ತರಗತಿಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಆಂಗ್ಲ ಮಾಧ್ಯಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ 6ನೇ ತರಗತಿಯ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಪಾರ್ಸಿ, ಸಿಖ್ ಹಾಗೂ ಇತರೆ ಸಮುದಾಯದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

6ನೇ ತರಗತಿಗೆ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಪಾರ್ಸಿ ಹಾಗೂ ಸಿಖ್ ಸಮುದಾಯದವರೆಗೆ ಶೇ.75 ಹಾಗೂ ಇತರೆ ಸಮುದಾಯದ ವಿದ್ಯಾರ್ಥಿಗಳಿಗೆ ಶೇ.25 ಸ್ಥಾನಗಳ ಅವಕಾಶವಿರುತ್ತದೆ.

ಅಲ್ಪಸಂಖ್ಯಾತ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಕುಟುಂಬದ ವಾರ್ಷಿಕ ಆದಾಯ ರೂ.1.00 ಲಕ್ಷ ಮಿತಿಯಲ್ಲಿರಬೇಕು. ಮತ್ತು ಪ್ರವರ್ಗ–1 ಮತ್ತು ಪರಿಶೀಷ್ಟ ಜಾತಿ/ವರ್ಗದ ವಿದ್ಯಾರ್ಥಿಗಳ ವಾರ್ಷಿಕ ಆದಾಯ ರೂ.2.50ಲಕ್ಷ ಮಿತಿಯೊಳಗಿರತಕ್ಕದ್ದು ಹಾಗೂ ಪ್ರವೇಶ ಪರೀಕ್ಷೆ ಮುಖಾಂತರ ವಿದ್ಯಾರ್ಥಿ/ವಿದ್ಯಾರ್ಥಿನಿಯರನ್ನು ಆಯ್ಕೆ ಮಾಡಿಕೊಳ್ಳಲಾಗುವುದು.

**2023–24ನೇ ಸಾಲಿಗೆ ಭರ್ತಿ ಮಾಡಬೇಕಾದ ವಸತಿ ಶಾಲೆಯ ಹೆಸರು ಮತ್ತು ಸೀಟುಗಳ ಸಂಖ್ಯೆಯ ವಿವರ :**

ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಹೂಲಿಕಟ್ಟಿ ತಾ:ಕಿತ್ತೂರು (8296224802) 60 ಸೀಟುಗಳು

ಮೊರಾರ್ಜಿ ದೇಸಾಯಿ ವಸತಿ ಶಾಲೆ, ಚಿಕ್ಕೋಡಿ, (ಹಿರೇಕೋಡಿ) (8147340346) 60 ಸೀಟುಗಳು

ಮೊರಾರ್ಜಿ ದೇಸಾಯಿ ವಸತಿ ಶಾಲೆ, ಬೆಳಗಾವಿ ನಗರ (9620294264) 60ಸೀಟುಗಳು

ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮೂಡಲಗಿ (7411226806) 60ಸೀಟುಗಳು

ಮೊರಾರ್ಜಿ ದೇಸಾಯಿ ವಸತಿ ಶಾಲೆ, ಸಾಲಹಳ್ಳಿ ತಾ:ರಾಮದುರ್ಗ (6360587820) 60ಸೀಟುಗಳು

ಮೊರಾರ್ಜಿ ದೇಸಾಯಿ ವಸತಿ ಶಾಲೆ, ಐನಾಪೂರ ತಾ:ಕಾಗವಾಡ (9886211470) 50ಸೀಟುಗಳು

ಆಸಕ್ತಿಯುಳ್ಳವರು ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೌಲಾನಾ ಆಜಾದ್ ಅಲ್ಪಸಂಖ್ಯಾತರ ಭವನ ಕೆ.ಎಸ್.ಸಿ.ಎ ಕ್ರೀಕೆಟ್ ಕ್ರೀಡಾಂಗಣ ಎದುರುಗಡೆ, ರಾಮತೀರ್ಥ ನಗರ ಬೆಳಗಾವಿ, ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಹಾಗೂ ಸಂಬಂಧಪಟ್ಟ ವಸತಿ ಶಾಲೆಗಳಿಂದ ಮಾಹಿತಿ ಪಡೆದು ಆಸಕ್ತಿಯುಳ್ಳ ವಿದ್ಯಾರ್ಥಿಗಳು ಮತ್ತು ಪಾಲಕರು ಸೇವಾ ಸಿಂಧು ಪೋರ್ಟಲ್ ಲಿಂಕ್ http://sevasindhuserviced.karnataka.gov.in ಮೂಲಕ ಮೇ.13 2023 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದ. ಹೆಚ್ಚಿನ ಮಾಹಿತಿಗಾಗಿ http://dom.karnataka.gov.in OR Helpline No:8277799990 ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವಣ್ಣ ನಮಗೆ ಪ್ರೇರಣೆ: ಪ್ರಧಾನಿ ಮೋದಿ

ವಿಜಯಪುರ: ಸಬ್ ಕಾ ಸಾತ್ ಸಬ್ ಕಾ ವಿಕಾಸ್ಗೆ ಭಗವಾನ್ ಬಸವಣ್ಣನವರೂ ಸ್ಫೂರ್ತಿಯಾಗಿದ್ದು, ಕಾಯಕ, ದಾಸೋಹ ನಮಗೆ ಪ್ರೇರಣೆಯಾಗಿದೆ. ಬಸವೇಶ್ವರ ಹಾದಿಯಲ್ಲಿ ನಾವು ನಡೆಯುತ್ತೇವೆಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಶನಿವಾರ ಹೇಳಿದ್ದಾರೆ.

ವಿಜಯಪುರದ ಸೈನಿಕ ಶಾಲೆ ಆವರಣದಲ್ಲಿ ಆಯೋಜಿಸಲಾಗಿರುವ ಬಿಜೆಪಿ ಸಮಾವೇಶದಲ್ಲಿ ಮಾತನಾಡಿರುವ ಅವರು, ಪಂಚನದಿಗಳ ನಾಡು ವಿಜಯಪುರ ಜನತೆಗೆ ನಮಸ್ಕಾರಗಳು ಎಂದು ಕನ್ನಡದಲ್ಲೇ ಭಾಷಣ ಆರಂಭಿಸಿದರು.


ಜಗಜ್ಯೋತಿ ಬಸವೇಶ್ವರರ ಜನ್ಮಭೂಮಿಗೆ ಬಂದಿದ್ದೇನೆ. 2014ರಲ್ಲಿ ಯುಗಾದಿ ಹಬ್ಬದ ಸಂದರ್ಭದಲ್ಲಿ ನಾನು ಬಂದಿದ್ದೆ. ಹೊಸ ವರ್ಷದ ಜೊತೆಗೆ ನಿಮ್ಮ ಆಶೀರ್ವಾದ ಕೂಡ ಸಿಕ್ಕಿತ್ತು ಎಂದು ಸ್ಮರಿಸಿದರು.

ಇಷ್ಟು ದೊಡ್ಡ ಸಂಖ್ಯೆಯಲ್ಲಿ ನನಗೆ ಆಶೀರ್ವಾದ ಮಾಡಲು ಬಂದಿದ್ದೀರಿ. 'ಈ ಬಾರಿಯ ನಿರ್ಧಾರ ಬಹುಮತದ ಬಿಜೆಪಿ ಸರ್ಕಾರ' ಎಂದು ಕನ್ನಡದಲ್ಲೇ ಹೇಳಿದರು.

ಬಿಜೆಪಿಯ ಡಬಲ್ ಎಂಜಿನ್ ಸರ್ಕಾರದಿಂದ ಅಭಿವೃದ್ಧಿ ಸಾಧ್ಯವಾಗಿದೆ. ಸಬ್ ಕಾ ಸಾತ್ ಸಬ್ ಕಾ ವಿಕಾಸ್ಗೆ ಭಗವಾನ್ ಬಸವಣ್ಣನವರೂ ಸ್ಫೂರ್ತಿಯಾಗಿದ್ದಾರೆ. ಕಾಯಕ ಮತ್ತು ದಾಸೋಹದ ಪ್ರೇರಣೆ ನಮ್ಮ ಅಭಿವೃದ್ಧಿ ಯೋಜನೆಗಳ ಹಿಂದಿದೆ. ಆದಿವಾಸಿ, ಮಹಿಳೆಯರು, ದಲಿತರು ಸೇ–ರಿದಂತೆ ಎಲ್ಲ ವರ್ಷಗಗಳ ಅಭಿವೃದ್ಧಿಗೆ ಬದ್ಧರಾಗಿದ್ದೇವೆ. ಅನ್ನ, ಆಶ್ರಯ್, ಅಕ್ಷರಕ್ಕಾಗಿ ಡಬಲ್ ಎಂಜಿನ್ ಸರ್ಕಾರ ಕೆಲಸ ಮಾಡಿದೆ ಎಂದು ತಿಳಿಸಿದರು.

ಸಾವಿರಾರು ಕುಟುಂಬಗಳಿಗೆ ನಮ್ಮ ಸರ್ಕಾರ ಭೂಮಿ ಹಕ್ಕುಪತ್ರ ವಿತರಣೆ ಮಾಡಿದೆ. ವಂಚಿತರಿಗೆ ಸರ್ಕಾರದ ಸೌಲಭ್ಯ ತಲುಪಿಸುವುದು ನಮ್ಮ ಗುರಿ. ಸಾಮಾಜಿ–ಕ ನ್ಯಾಯ ಒದಗಿಸಲು ಬಿಜೆಪಿಯ ಡಬಲ್ ಎಂಜಿನ್ ಸರ್ಕಾರ ಅನೇಕ ಕೆಲಸ ಮಾಡಿದೆ. ಇದಕ್ಕೆ ಅನೇಕ ಸಾಕ್ಷಿಗಳಿವೆ. ಕಾಂಗ್ರೆಸ್ ಸರ್ಕಾರವು ಬಂಜಾರ, ಲಂಬಾಣಿ ಸಮುದಾಯದವರಿಗೆ ಏನೂ ಮಾಡಿಲ್ಲ. ಕಾಂಗ್ರೆಸ್ ಸರ್ಕಾರವು ಭಗವಾನ್ ಬಸವಣ್ಣರ ತತ್ವಗಳ ಅನುಷ್ಠಾನಕ್ಕೆ ಏನೂ ಮಾಡಿಲ್ಲ ಎಂದು ಆರೋಪಿಸಿದರು.

ಕೇಂದ್ರದಿಂದ 1 ರೂಪಾಯಿ ಬಿಡುಗಡೆ ಮಾಡಿದ್ದರೆ ಫಲಾನುಭವಿಗೆ 15 ಪೈಸೆ ಮಾತ್ರ ದೊರೆಯುತ್ತದೆ ಎಂಬುದನ್ನು ಕಾಂಗ್ರೆಸ್ ಪಕ್ಷದ ಪ್ರಧಾನಮಂತ್ರಿಯವರೇ ಹೇಳಿದ್ದರು. ಪಂಚಾಯತಿಯಿಂದ ಹಿಡಿದು ಸಂಸತ್ತಿನವರೆಗೆ ಕಾಂಗ್ರೆಸ್ ಹಿಡಿತದಲ್ಲಿದ್ದಾಗ ಪರಿಸ್ಥಿತಿ ಹಾಗಿತ್ತು. ಭ್ರಷ್ಟಾಚಾರ ತೊಡೆದುಹಾಕಲು ಏನೂ ಕ್ರಮ ಕೈಗೊಂಡಿರಲಿಲ್ಲ. ಬಡ ಜನ–ರಿಗೆ ಸಲ್ಲಬೇಕಾದ ದುಡ್ಡನ್ನು ಲೂಟಿ ಮಾಡಲಾಗುತ್ತಿತ್ತು. ನೇರ ನಗದು



ವರ್ಗಾವಣೆ ಮೂಲಕ ನಮ್ಮ ಸರ್ಕಾರ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿದೆ. ಈಗ ಎಲ್ಲ ಲಾಭಾಂಶವೂ ಫಲಾನುಭವಿಗಳಿಗೆ ತಲುಪುತ್ತಿದೆ.

ಇಂದು ದೆಹಲಿಯಿಂದ 1 ರೂಪಾಯಿ ಬಿಡುಗಡೆಯಾದರೆ ನೂರಕ್ಕೆ ನೂರರಷ್ಟು ಫಲಾನುಭವಿಗಳಿಗೆ ತಲುಪುತ್ತಿದೆ. ಬಿಜೆಪಿ ಸರ್ಕಾರ ರೈತರ ಖಾತೆಗೆ ಹಣ ನೇರ ಜಮೆ ಮಾಡಿದೆ. ಮಧ್ಯವರ್ತಿಗಳಿಲ್ಲದೇ ರೈತರ ಖಾತೆಗಳಿಗೆ ನೇರವಾಗಿ ಹಣ ಜಮೆ ಮಾಡಿದೆ, ಮಾಡುತ್ತಿದೆ. ಡಬಲ್ ಇಂಜಿನ್ ಸರ್ಕಾರದಿಂದ ಕರ್ನಾಟಕ ಅಭಿವೃದ್ಧಿಯಾಗುತ್ತಿದೆ. ಕರ್ನಾಟಕದಲ್ಲೂ ಬಡವರಿಗೆ ರೇಷನ್ ನೀಡುತ್ತಿದ್ದೇವೆ ಎಂದು ಹೇಳಿದರು.

ಬಿಜೆಪಿ ಸರ್ಕಾರವು ಯೋಜನೆಗಳಲ್ಲಿ ಪಾರದರ್ಶಕತೆ ತಂದಿದೆ. ಎಲ್ಲಾ ಹಣವೂ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆಯಾಗುತ್ತಿದೆ. ಇಡೀ ದೇಶದಲ್ಲಿ ಕಿಸಾನ್ ಸಮ್ಮಾನ್ ನಿಧಿಯ ಹಣ ನೇರವಾಗಿ ರೈತರ ಖಾತೆಗಳಿಗೆ ತಲುಪುತ್ತಿದೆ. ವಿಜಯಪುರದ ರೈತರ ಖಾತೆಗಳಿಗೂ ನೇರ ಹಣ ಜಮೆ ಮಾಡಲಾಗಿದೆ. ಕಾಂಗ್ರೆಸ್ ಸರ್ಕಾರ ಇದ್ದಿದ್ದರೆ ಹಣ ಇಲ್ಲಿವರೆಗೆ ಬರುತ್ತಲೇ ಇರಲಿಲ್ಲ, ಕಾಂಗ್ರೆಸ್ ಯಾವುದೇ ಸಾಲಮನ್ನಾ ಮಾಡಲಿಲ್ಲ. ರೈತರ ಸಾಲಮನ್ನಾ ಮಾಡದೇ ತಮ್ಮ ಜೇಬಿಗೆ ಹಣ ಹಾಕಿಕೊಂಡರು. ಆದರೆ, ಬಿಜೆಪಿಯು ರೈತರ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ.

ಕಳಸಾ ಬಂಡೂರಿ, ಕೃಷ್ಣಾ ಮೇಲ್ದಂಡೆ ಯೋಜನೆಗೆ ಬಜೆಟ್ನಲ್ಲಿ ಅನುದಾನ ನೀಡಿದ್ದೇವೆ. ವಿಜಯಪುರದ ರೈತ–ರಿಗೆ ನೆರವಾಗುವ ಅನೇಕ ಕ್ರಮಗಳನ್ನು ಕೈಗೊಂಡಿದ್ದೇವೆ. ರೇವಣ ಸಿದ್ದೇಶ್ವರ ಏತ ನೀರಾವರಿ ಯೋಜನೆಯ ಕೆಲಸ ಆರಂಭವಾಗಿದೆ. ಇದು ಡಬಲ್ ಎಂಜಿನ್ ಸರ್ಕಾರದ ಕಟಿಬದ್ಧತೆಯಾಗಿದೆ. ಕುಡಿಯುವ ನೀರು ಒದಗಿಸುವ ನಿಟ್ಟಿನಲ್ಲಿಯೂ ಡಬಲ್ ಎಂಜಿನ್ ಸರ್ಕಾರ ಕ್ರಮ ಕೈಗೊಂಡಿದೆ. ಜಲ ಜೀವನ್ ಮಿಷನ್ ಯೋಜನೆ ಅನುಷ್ಠಾನಕ್ಕೂ ಮೊದಲು ಕುಡಿಯುವ ನೀರನ್ನು ಎಲ್ಲಿಂದಲೋ ತರಬೇಕಿತ್ತು. ಈಗ ಮನೆ ಮನೆಗೆ ನೀರು ಬರುತ್ತಿದೆ ಎಂದು ತಿಳಿಸಿದರು.

ಬಿಜೆಪಿಯ ಡಬಲ್ ಎಂಜಿನ್ ಸರ್ಕಾರ ಆಯುಷ್ಮಾನ್ ಭಾರತ್ ಯೋಜನೆ ಜಾರಿಗೆ ತಂದಿತು. ಬಿಜೆಪಿ ಸರ್ಕಾರದ ನೀತಿಯಿಂದ ಇಂದು ನಮ್ಮ ಮಾತೆಯರಿಗೆ, ಸಹೋದ–ರಿಯರಿಗೆ ಹೊಸ ಶಕ್ತಿ ದೊರೆತಿದೆ. ಬಿಜೆಪಿ ಸರ್ಕಾರ ಜನಧನ ಬ್ಯಾಂಕ್ ಖಾತೆ ಮೂಲಕ ಮಹಿಳೆಯರ ಜೀವನ ಬದಲಿಸಿದೆ. ಈ ಖಾತೆಯ ಮೂಲಕ ಸರ್ಕಾರಿ ಯೋಜನೆಗಳ ಹಣ ನೇರ ವರ್ಗಾವಣೆಯಾಗುತ್ತಿದೆ. ಕಾಂಗ್ರೆಸ್ ಸರ್ಕಾರ ಮಹಿಳೆಯರ ಕಲ್ಯಾಣಕ್ಕೆ ಗಂಭೀರ ಯತ್ನವನ್ನೇ ಮಾಡಿಲ್ಲ. ಬಿಜೆಪಿ ಸರ್ಕಾರ ಲಕ್ಷಾಂತರ ರೂಪಾಯಿ ನೀಡಿದೆ. ನಮ್ಮ ಸರ್ಕಾರ ಆಧುನಿಕ ಸಂಪರ್ಕ, ಮೂಲಸೌಕರ್ಯ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡುತ್ತಿದೆ. ವಿಜಯಪುರ–ಸೋಲಾಪುರ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವೇಗವಾಗಿ ನಡೆಯುತ್ತಿದೆ. ಇದರಿಂದ ಉದ್ಯೋಗಾವಕಾಶಗಳೂ ಹೆಚ್ಚು ಸೃಷ್ಟಿಯಾಗಲಿವೆ,

ಬಿಜೆಪಿಯ ಡಬಲ್ ಎಂಜಿನ್ ಸರ್ಕಾರ ವೋಕಲ್ ಫಾರ್ ಲೋಕಲ್ ಆಗಿ ಕಾರ್ಯನಿರ್ವಹಿಸುತ್ತಿದೆ. ಕರ್ನಾಟಕದಲ್ಲಿ ನೇಕಾರ ಸಮ್ಮಾನ್ ಯೋಜನೆ ಜಾರಿಗೆ ತಂದೆವು. ಕೇಂದ್ರ ಸರ್ಕಾರವೂ ಅದಕ್ಕೆ ಬೆಂಬಲ ನೀಡಿದೆ. ವಿಜಯಪುರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡಿದ್ದೇವೆ. ಜಿಲ್ಲೆಗೆ ಹೊಸ ಕೈಗಾರಿಕೆಗಳು ಬರುತ್ತಿವೆ. ಈ ಬಾರಿ ಹೊಸ ಮುಖಗಳಿಗೆ ಟಿಕೆಟ್ ನೀಡಿದ್ದೇವೆ. ಕರ್ನಾಟಕದ ಭವಿಷ್ಯಕ್ಕಾಗಿ ಬಿಜೆಪಿ ಅಭ್ಯರ್ಥಿಗಳನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

## ಪ್ರಧಾನಿ ಮೋದಿ ಆರೋಪಕ್ಕೆ ಸಿದ್ದರಾಮಯ್ಯ ಕೌಂಟರ್: ಬಹಿರಂಗ ಸವಾಲು ಹಾಕಿದ ವಿಪಕ್ಷನಾಯಕ

ಬೆಂಗಳೂರು: ಕಾಂಗ್ರೆಸ್ ಎಂದರೆ ಭ್ರಷ್ಟಾಚಾರದ ಕಾಲ, ಬಿಜೆಪಿ ಎಂದರೆ ಅಮೃತ ಕಾಲ ಎನ್ನುವ ಮೊದಲು ನಿಮ್ಮ ಅಂತರಂಗವನ್ನು ಒಮ್ಮೆ ಇಣುಕಿ ನೋಡಿ, ಅಲ್ಲಿರುವ ಅದಾನಿ, ಅಂಬಾನಿಗಳು ಕಾಣಲಿಲ್ಲವೇ? ನಿಮ್ಮ ಅಕ್ಕಪಕ್ಕದಲ್ಲಿರುವ ಮುಖ್ಯಮಂತ್ರಿಗಳು ಮತ್ತು ಸಚಿವರ ಭ್ರಷ್ಟ ಮುಖಗಳೂ ಕಾಣಲಿಲ್ಲವೇ? ಎಂದು ಪ್ರಧಾನಿ ನರೇಂದ್ರ ಮೋದಿಯವರಿಗೆ ವಿಪಕ್ಷ ನಾಯಕ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ಕಾಂಗ್ರೆಸ್ ವಿರುದ್ಧ ಸುಳ್ಳು ಆರೋಪ ಮಾಡಿರುವ ಪ್ರಧಾನಿ ಮೋದಿ ವಿರುದ್ಧ ಕಿಡಿಕಾರಿರುವ ಸಿದ್ದರಾಮಯ್ಯ, ರಾಜ್ಯದ ಬಿಜೆಪಿ ಸಚಿವರ 40% ಕಮಿಷನ್ ಕಿರುಕಳದ ವಿರುದ್ಧ ಗುತ್ತಿಗೆದಾರರ ಸಂಘದ ಅಧ್ಯಕ್ಷರಾದ ಕೆಂಪಣ್ಣನವರು ನಿಮ್ಮ ಕಾರ್ಯಾಲಯಕ್ಕೆ ಬರೆದ ಪತ್ರವೂ ನಿಮಗೆ ನೆನಪಾಗಲಿಲ್ಲವೇ? ನಿಮ್ಮದೇ ಸಚಿವರ ಕಿರುಕಳದಿಂದ ಬೇಸತ್ತು ಆತ್ಮಹತ್ಯೆ ಮಾಡಿಕೊಂಡ ಸಂತೋಷ್ ಪಾಟೀಲ್ ಕುಟುಂಬದ ನೆನಪೂ ನಿಮಗೆ ಆಗಲಿಲ್ಲವೇ? ಕಳೆದ ಮೂರುವರೆ ವರ್ಷಗಳಲ್ಲಿ ಒಂದು ವರೆ ಲಕ್ಷ ಕೋಟಿ ರೂಪಾಯಿಗಳನ್ನು ಲೂಟಿ ಹೊಡೆದಿರುವ ರಾಜ್ಯದ ಬಿಜೆಪಿ ಸಚಿವರಿಗೆ ಖಂಡಿತ ಇದು ಅಮೃತ ಕಾಲ. ಆದರೆ ನಿಮ್ಮಂತಹ ಭ್ರಷ್ಟರ ಸರ್ಕಾರ ಪಡೆದ ರಾಜ್ಯದ ಜನತೆಗೆ ಇದು ವಿಷಕಾಲ ಎಂದು ವಾಗ್ದಾಳಿ ನಡೆಸಿದ್ದಾರೆ.

ರಾಜ್ಯದ ಲಿಂಗಾಯತ ನಾಯಕರನ್ನು ಬಳಸಿ ಬಿಸಾಡುವ ನಿಮ್ಮ ಕುತಂತ್ರ ಬುದ್ದಿಯನ್ನು ರಾಜ್ಯದ ಲಿಂಗಾಯತರು ಸರಿಯಾಗಿ ಅರ್ಥ–ೀಮಾಡಿಕೊಂಡಿದ್ದಾರೆ. ನಿಮ್ಮ ಇಡೀ ಭಾಷದಲ್ಲಿ ರಾಜ್ಯದಲ್ಲಿ ಬಿಜೆಪಿಯನ್ನು ಕಟ್ಟಿ ಬೆಳೆಸಿದ್ದ ಬಿ.ಎಸ್. ಯಡಿಯೂರಪ್ಪನವರ ಹೆಸರನ್ನು ಒಮ್ಮೆಯೂ ಎತ್ತಲಿಲ್ಲ ಯಾಕೆ? ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಕಾಲದಲ್ಲಿಯೇ ಬಿ.ಎಸ್.ಯಡಿಯೂರಪ್ಪನವರನ್ನು



ಜೈಲಿಗೆ ಕಳಿಸಿದಿರಿ, ಅವರನ್ನು ಎರಡೆರಡು ಬಾರಿ ಮುಖ್ಯಮಂತ್ರಿ ಸ್ಥಾನದಿಂದ ಕೆಳಗೆ ಇಳಿಸಿದಿರಿ, ಅವರ ಮಗನಿಗೆ ಕನಿಷ್ಠ ಶಾಸಕನನ್ನಾಗಿ ಮಾಡಲಿಲ್ಲ, ಸಚಿವರನ್ನಾಗಿ ಮಾಡಲಿಲ್ಲ. ಈಗ ಐಟಿ, ಇಡಿ, ಸಿಬಿಐ ಮೂಲಕ ಬಾಯಿಮುಚ್ಚಿಸಿ ಕೂರಿಸಿರುವವರು ನೀವೇ ಅಲ್ಲವೇ? ಎಂದು ಕೇಳಿದ್ದಾರೆ.

ಲಿಂಗಾಯತ ಸಮುದಾಯದಲ್ಲಿ ಎರಡನೇ ತಲೆಮಾರಿನ ನಾಯಕರೇ ಇರಬಾರದೆಂದು ಜಗದೀಶ್ ಶೆಟ್ಟರ್, ಲಕ್ಷ್ಮಣ ಸವದಿ, ಸಂಜಯ ಪಾಟೀಲ್, ಸೊಗಡು ಶಿವಣ್ಣ ಹೀಗೆ ಸಾಲು ಸಾಲು ನಾಯಕರಿಗೆ ಈ ಬಾರಿ ಟಿಕೆಟ್ ನೀಡದೆ ಅವರ ರಾಜಕೀಯ ಜೀವನವನ್ನೇ ಮುಗಿಸುವ ಹುನ್ನಾರ ಮಾಡಿರುವವರು ನೀವೇ ಅಲ್ಲವೇ? ಎಂದು ಸಾಲು ಸಾಲು ಪ್ರಶ್ನೆ ಮುಂದಿಟ್ಟಿದ್ದಾರೆ.

ರಾಜ್ಯದಲ್ಲಿ ಬಿಜೆಪಿಯನ್ನು ಕಟ್ಟಿ ಬೆಳೆಸಿದ್ದ ಲಿಂಗಾಯತರ ಪ್ರಮುಖ ನಾಯಕ ಜಗದೀಶ್ ಶೆಟ್ಟರ್ ಅವರಿಗೆ ಯಾವ ಕಾರಣಕ್ಕೆ ಈ ಚುನಾವಣೆಯಲ್ಲಿ ಟಿಕೆಟ್ ನಿರಾಕರಿಸಿದಿರಿ? ಅವರ ಮೇಲೆ ಭ್ರಷ್ಟಾಚಾರದ ಆರೋಪಗಳಿತ್ತಾ? ಸಿಡಿ ಹಗರಣ ಇತ್ತೇ? ಅವರು ಒಳ್ಳೆಯ ಆಡಳಿತಗಾರರರಾಗಿರಲಿಲ್ಲವೇ? ಯಾಕೆ ಅವರನ್ನು ಮೂಲೆಗೆ ತಳ್ಳಿದ್ದೀರಿ? ಅವರ ಈ ಪ್ರಶ್ನೆಗಳು ರಾಜ್ಯದ ಲಿಂಗಾಯತರ ಪ್ರಶ್ನೆಯೂ ಹೌದು. ಧಮ್–ತಾಕತ್ ಇದ್ದರೆ ಇದಕ್ಕೆ ಉತ್ತರ ಕೊಡಿ ಎಂದು ಆಗ್ರಹಿಸಿದ್ದಾರೆ.

ಬಂಜಾರ ಸಮುದಾಯ ಮತ್ತು ಕಾಂಗ್ರೆಸ್ ಸಂಬಂಧಕ್ಕೆ ಹುಳಿ ಹಿಂಡುವ ನಿಮ್ಮ ಕುತಂತ್ರ ಫಲ ನೀಡಲಾರದು. ಬಂಜಾರರಿಗೆ ಪರಿಶಿಷ್ಟ ಜಾತಿಯ ಸ್ಥಾನಮಾನ ನೀಡಿದ್ದು ಕಾಂಗ್ರೆಸ್ ಪಕ್ಷ. ಲಂಬಾಣಿ ತಾಂಡಾಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಭೂ ಸುಧಾರಣೆ ಕಾಯ್ದೆಗೆ ಕ್ರಾಂತಿಕಾರಿ ತಿದ್ದುಪಡಿಯನ್ನು ತಂದಿರುವುದು ರಾಜ್ಯದ ಕಾಂಗ್ರೆಸ್ ಸರ್ಕಾರ ಎನ್ನುವುದು ನಿಮಗೆ ತಿಳಿದಿಲ್ಲವೇ?

ನರೇಂದ್ರ ಮೋದಿಯವರೇ ನಿಮ್ಮ ಇಡೀ ರಾಜ–ಕೀಯ ಬದುಕೇ ಒಂದು ಸುಳ್ಳಿನ ಕೋಟೆ. ಅದು ಮುರಿದು ಬೀಳುವ ಕಾಲ ಬಂದಿದೆ. ಕಾಂಗ್ರೆಸ್ ನಿಮ್ಮನ್ನು 91 ಬಾರಿ ನಿಂದಿಸಿದೆ ಎನ್ನುವುದು ನಿಮ್ಮ ಇತ್ತೀಚಿನ ಸುಳ್ಳು. ನಮ್ಮ ಪಕ್ಷದ ನಾಯಕರಾದ ಸೋನಿಯಾಗಾಂಧಿ ಮತ್ತು ರಾಹುಲ್ ಗಾಂಧಿಯವರನ್ನು ನಿಂದಿಸುವುದೇ ನಿಮ್ಮ ಮತ್ತು ನಿಮ್ಮ ಪಕ್ಷದ ನಾಯಕರ ದಿನಚರಿ ಅಲ್ಲವೇ?

ಸೋನಿಯಾಗಾಂಧಿಯವರನ್ನು ಜರ್ಸಿ ಕೌ, ಬಾರ್ ಡಾನ್ಸರ್, ಕಾಂಗ್ರೆಸ್ ಕಿ ವಿಧವಾ ಇನ್ನೂ ಏನೇನೋ ಅಂದವರು ನೀವೇ ಅಲ್ಲವೇ? ನಿಮ್ಮದೇ ಪಕ್ಷದ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಅವರು ನಿನ್ನೆ ತಾನೆ ಸೋನಿಯಾಗಾಂಧಿಯವರನ್ನು ವಿಷಕನ್ಯೆ ಎಂದು ಹೇಳಿಲ್ಲವೇ? ನಿಮ್ಮ ರಕ್ತದ ಕಣ–ಕಣದಲ್ಲಿಯೂ ದ್ವೇಷಾಸೂಯೆಯ ವಿಷ ಇಲ್ಲವೇ?

ರಾಜ್ಯದ ಬಿಜೆಪಿ ಸರ್ಕಾರ 9 ಲಕ್ಷ ಮನೆಗಳನ್ನು ಕಟ್ಟಿದೆ ಎಂಬ ಹಸಿ ಹಸಿ ಸುಳ್ಳು ಹೇಳಿದ್ದಿರಲ್ಲಾ, ನಾವು ಕಟ್ಟಿರುವ ಮನೆಗಳ ಲೆಕ್ಕವನ್ನು ನಿಮಗೆ ಕೊಟ್ಟು ನಿಮ್ಮಿಂದ ಸುಳ್ಳು ಹೇಳಿಸಿದ ವಸತಿ ಸಚಿವರನ್ನು ಒಮ್ಮೆ ಜನರ ಮಧ್ಯೆ ಬಹಿರಂಗ ಚರ್ಚೆಗೆ ಕರೆತನ್ನಿ ಎಂದು ಸವಾಲು ಹಾಕಿದ್ದಾರೆ.

## ಡಾ.ರವಿ ಪಾಟೀಲ ಭರ್ಜರಿ ಪ್ರಚಾರ



ಬೆಳಗಾವಿ: ಚುನಾವಣಾ ಪ್ರಚಾರದಲ್ಲಿ ಕ್ಷೇತ್ರದ ಮತದಾರರಿಂದ ಭಾರಿ ಬೆಂಬಲ ವ್ಯಕ್ತವಾಗುತ್ತಿದೆ.ನಗರದ ಶಿವಬಸವನಗರ,ಮತ್ತುರಾವ ನಗರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಿರುಸಿನ ಪ್ರಚಾರ ನಡೆಸಿದರು. ಬೆಳಗಾವಿ ಉತ್ತರ ಕ್ಷೇತ್ರದ ನಗರದ ವ್ಯಾಪ್ತಿಯ ಮನೆ ಮನೆಗೆ ತೆರಳಿ ಪ್ರಚಾರ ನಡೆಸಿದರು.

ಪ್ರಧಾನಿ ನರೇಂದ್ರ ಮೋದಿ ಹಾಗೂ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಅಭಿವೃದ್ಧಿಯ ವೇಗದಿಂದ ಡಾ.ರವಿ ಪಾಟೀಲ ಅವರನ್ನು ಮತದಾರರು ಪ್ರೀತಿಯಿಂದ ಸ್ವಾಗತಿಸುತ್ತಿದ್ದಾರೆ ಮತ್ತು ಅಭೂತಪೂರ್ವ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಆಯ್ಕೆಯಾದ ಅಭ್ಯರ್ಥಿಯಿಂದ ನಾವು ನಿಜವಾಗಿಯೂ ಸಂತೋಷಪತ್ತಿದ್ದೇವೆ. ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಗೆಲ್ಲುವುದರಲ್ಲಿ ಯಾವುದೇ ಅನುಮಾನವಿಲ್ಲ.ಮತ್ತೆ ಕಮಲ ಅರಳುವುದು ಶತ ಸಿದ್ದ ಎಂದರು. ನಮ್ಮ ಮತ ಮತ್ತು ಪ್ರಾರ್ಥನೆ ಸದಾ ಡಾ ರವಿ ಪಾಟೀಲ ಅವರ ಮೇಲಿದೆ ಎಂದು ಮತದಾರರು ತಿಳಿಸಿದರು.

ಇನ್ನು ಪ್ರಚಾರ ವೇಳೆಯಲ್ಲಿ ಹನುಮಂತ ಕಾಗಲಕರ್, ಮಾದೇವಿ ಹಿರೇಮಠ, ಲಕ್ಷ್ಮೀ ಬಾಚೋಳಕರ್, ಸಂತೋಷ ರಾಠೋಡ, ಶಿಲ್ಪಾ ಬೇಕಲಕರೆ,ದಿಗ್ವಿಜಯ ಸಿದ್ದನಾಳ,ಅಣ್ಣಾಸಾಬ್ ದೇಸಾಯಿ ಸವಿತಾ ಗುಡ್ಡೆದಕರ್ ಮತ್ತು ಮಲ್ಲಿಕಾರ್ಜುನಸ್ವಾಮಿ ಸೇರಿದಂತೆ ಹಲವಾರು ಬೆಂಬಲಿಗರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

## ಹಾಡಹಗಲೇ ನಡುರಸ್ತೆಯಲ್ಲಿ ಬಿಜೆಪಿ ಮುಖಂಡನನ್ನು ಅಟ್ಟಾಡಿಸಿ ಕೊಂದ ದುಷ್ಕರ್ಮಿಗಳು



ತಮಿಳುನಾತಿಣ: ಬಿಜೆಪಿ ಮುಖಂಡನನ್ನು ನಡುರಸ್ತೆಯಲ್ಲೇ ಅಪರಿಚಿತ ಗ್ಯಾಂಗೊಂದು ಮಾರಕಾಸ್ತ್ರಗಳಿಂದ ನಡುರೋಡಲ್ಲೇ ಬರ್ಬರವಾಗಿ ಹತ್ಯೆಗೈದ ಘಟನೆ ತಮಿಳುನಾಡಿನಲ್ಲಿ ನಡೆದಿದೆ.

ಕೊಲೆಯಾದ ಮುಖಂಡ ಪೆರಂಬದೂರಿನ ವರಪುರಂನ ಪಿಪಿಜಿ ಶಂಕರ್ (46) ಎಂದು ವರದಿಯಿಂದ ತಿಳಿದು ಬಂದಿದೆ.

ಈ ಘಟನೆ ಚೆನ್ನೈ ಹೊರವಲಯದ ಪೂನಮಲ್ಲೆ ಬಳಿಯ ನಸರತ್ಪೇಟೈ ಬಳಿ ನಡೆದಿದೆ. ಮೃತ ವ್ಯಕ್ತಿ ವರಪುರಂ ಪಂಚಾಯತ್ ಕೌನ್ಸಿಲ್ ಅಧ್ಯಕ್ಷರಾಗಿ ಮತ್ತು ಬಿಜೆಪಿಯ ಎಸ್ಸಿ ಮತ್ತು ಎಸ್ಟಿ ವಿಭಾಗದ ರಾಜ್ಯ ಖಜಾಂಚಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಈತನ ಮೇಲೂ ಹಲವು ಕ್ರಿಮಿನಲ್ ಪ್ರಕರಣಗಳಿದ್ದವು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ ಎಂದು ವರದಿಯಾಗಿದೆ. ನಸರತ್ಪೇಟ್ ಪೊಲೀಸರು ಶಂಕರ್ ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಚೆನ್ನೈನ ಕಿಲ್ಪಾಕ್ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿದ್ದಾರೆ. ಘಟನೆ ನಡೆದ ಪ್ರದೇಶದಲ್ಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದ್ದು, ಕೊಲೆ ಪ್ರಕರಣ ದಾಖಲಿಸಿ ಹೆಚ್ಚಿನ ತನಿಖೆ ನಡೆಸಲಾಗುತ್ತದೆ ಪೊಲೀಸ್ ಅಧಿಕಾರಿಗಳು ಹೇಳಿದರು.

## ಬಸವಣ್ಣನವರ ತತ್ವ ಮನೆ ಮನಗಳಿಗೆ ಮುಟ್ಟಿಸುವ ಕಾರ್ಯವಾಗಬೇಕಿದೆ: ಡಾ.ಮಹಾಂತ ಸ್ವಾಮಿಗಳು




ಬೆಳಗಾವಿ: ಬಸವಣ್ಣನವರ ತತ್ವ ಮನೆ ಮನಗಳಿಗೆ ಮುಟ್ಟಿಸುವ ಕಾರ್ಯವಾಗಬೇಕಿದೆ ಇಂದು ದೇಶದೆಲ್ಲೇಡೆ ಅನಾಚಾರ ತಾಂಡವವಾದುತ್ತಿದೆ ಎಂದು ಪೂಜ್ಯಶ್ರೀ ಡಾ.ಮಹಾಂತ ಸ್ವಾಮಿಗಳು ಹೇಳಿದರು.

ಜಾಗತಿಕ ಲಿಂಗಾಯತ ಮಹಾಸಭಾ ಹಾಗೂ ರಾಷ್ಟೀಯ ಜಿಲ್ಲಾ ಘಟಕ ಬೆಳಗಾವಿ ಅವರ ಸಹಯೋಗದಲ್ಲಿ ಬಸವ ಜಯಂತಿ ಆಚ–ರಿಸಲಾಯಿತು.

ಇದೆ ವೇಳೆ ಜಿಲ್ಲಾ ಮಟ್ಟದ ವಚನ ನೃತ್ಯೋತ್ಸವವನ್ನು ಏರ್ಪಟಿಸಲಾಗಿ–ತ್ತು.ವಿವಿಧ ನೃತ್ಯ ಕಲಾತಂಡಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದವು.

## ಯತ್ನಾಳ್ ವಿರುದ್ಧ ಎಂ.ಬಿ.ಪಾಟೀಲ್ ವಾಗ್ದಾಳಿ



ವಿಜಯಪುರ: ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕಳೆದ 5 ವರ್ಷಗಳಿಂದ ಧರ್ಮದ ಬಗ್ಗೆ ವಿಷಕಾರುವ ಕೆಲಸ ಮಾಡುತ್ತಿದ್ದಾರೆ. ದೇಶದ ಹಿರಿಯ ಮಹಿಳೆ ಸೋನಿಯಾ ಗಾಂಧಿ ಅವರನ್ನು ನಿಂದಿಸಿರುವ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ವರ್ತನೆ ಖಂಡನಾರ್ಹ ಎಂದು ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ಎಂ.ಬಿ.ಪಾಟೀಲ ವಾಗ್ದಾಳಿ ನಡೆಸಿದರು.

ಶನಿವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಹುಲ್ ಗಾಂಧಿ ಅವರನ್ನು ಹುಚ್ಚ ಎಂದು ನಿಂದಿಸಿರುವ ಯತ್ನಾಳ, ರಾಜ್ಯದ ಜನ ಇವರ ನಡವಳಿಕೆಯಿಂದ ಏನು ಎನ್ನುತ್ತಿದ್ದಾರೆ ಎಂದು ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ತಿರುಗೇಡು ನೀಡಿದ್ದಾರೆ.

ಪ್ರಧಾನಿ ಆಗುವಂಥ ಎರಡು ಬಾರಿ ಅವಕಾಶ ಸಿಕ್ಕರೂ ಅಧಿಕಾರಕ್ಕಾಗಿ ಆಸೆ ಪಡದೇ ಮನಮೋಹನಸಿಂಗ್ ಅವರನ್ನು ಪ್ರಧಾನಿ ಮಾಡಿದ ತ್ಯಾಗಮಯಿ ಸೋನಿಯಾ ಗಾಂಧಿ. ಇಂಥ ನಾಯಕಿಯನ್ನು ಪಾಕಿಸ್ತಾನ ಏಜೆಂಟ್ ಎಂದು ನಿಂದಿಸಿರುವ ಯತ್ನಾಳಗೆ ಚುನಾವಣೆಯಲ್ಲಿ ಜನರು ತಕ್ಕ ಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಸಿದರು.

# ಕಾಂಗ್ರೆಸ್ ಮೊದಲ ಸಂಪುಟ ಸಭೆಯಲ್ಲಿಯೇ ಈ ಯೋಜನೆಗಳು ಜಾರಿ: ಡಿ.ಕೆ.ಶಿ ಭರವಸೆ


ಹಾಸನ: ಸಕಲೇಶಪುರದ ಈ ಬಹಿರಂಗ ಸಭೆ ನೋಡುತ್ತಿದ್ದರೆ, ಕನಕಪುರದ ಬಹಿರಂಗ ಸಭೆಯಂತೆ ಕಾಣುತ್ತಿದೆ. ನನ್ನ ರಾಜಕೀಯ ಜೀವನದಲ್ಲಿ ಸಕಲೇಶಪುರದಲ್ಲಿ ಮಲ್ಲಿಕಾರ್ಜುನ ಖರ್ಗೆ ಅವ–ರಿಗೆ ಬೆಂಬಲ ನೀಡಲು ಇಷ್ಟು ದೊಡ್ಡ ಪ್ರಮಾಣದಲ್ಲಿ ಬಂದಿರುವುದು ಪಕ್ಷಕ್ಕೆ ಶಕ್ತಿ ತಂದಿದೆ. ಕಾಂಗ್ರೆಸ್ ಅಭ್ಯರ್ಥಿ ಮುರಳಿ ಮೋಹನ್ ಅವರನ್ನು ವಿಧಾನಸಭೆಗೆ ಕಳುಹಿಸಿಕೊಡುತ್ತೀರಿ ಎಂಬುದಕ್ಕೆ ಈ ಸಭೆಯೇ ಸಾಕ್ಷಿ ಎಂದು ಕೆಪಿಸಿಸಿ ಅಧ್ಯಕ್ಷ ಡಿ,ಕೆ.ಶಿವಕುಮಾರ್ ತಿಳಿಸಿದ್ದಾರೆ.

ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ, ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲಾ ವರ್ಗ ಅಧಿಕಾರಕ್ಕೆ ಬಂದಂತೆ. ಇಲ್ಲಿ ರೈತರು, ಕಾರ್ಮಿಕರು, ಬಡ ವರ್ಗದ ಜನರು ಬಂದಿದ್ದೀರಿ. ರೈತನಿಗೆ ಸಂಬಳ, ಬಡ್ತಿ, ಪಿಂಚಣಿ, ನಿವೃತ್ತಿ ಲಂಚ ಯಾವುದೂ ಸಿಗುವುದಿಲ್ಲ. ಈ ರೈತನನ್ನು ಬದುಕಿಸಬೇಕು.

1989ರಲ್ಲಿ ವೀರೇಂದ್ರ ಪಾಟೀಲ್ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ, ಬಂಗಾರಪ್ಪ, ದೇವರಾಜ ಅರಸು ಅವರ ಕಾಲದಲ್ಲಿ ಉಳುವವನಿಗೆ ಭೂಮಿ, ಫಾರಂ 53, 57, 58 ನೀಡಿ ರೈತರನ್ನು ಯಾರೂ ಕೂಡ ಒಕ್ಕಲೆಬ್ಬಿಸದಂತೆ ಅನುಕೂಲ ಮಾಡಿಕೊಟ್ಟಿದ್ದು ಕಾಂಗ್ರೆಸ್ ಪಕ್ಷ. ಇದು ಕಾಂಗ್ರೆಸ್ ಬದ್ಧತೆ.

ಕಾಂಗ್ರೆಸ್ ಪಕ್ಷ ಬಡವರಿಗೆ ನಿವೇಶನ, ಮನೆ ನೀಡಿದೆ. ಮಕ್ಕಳಿಗೆ ಮಧ್ಯಾಹ್ನ ಬಿಸಿಯೂಟ, ಮಹಿಳೆಯರಿಗಾಗಿ ಸ್ತ್ರೀಶಕ್ತಿ ಸಂಘಗಳು, ಆಹಾರ ಭದ್ರತಾ ಕಾಯ್ದೆ, ಉದ್ಯೋಗ ಖಾತ್ರಿ ಯೋಜನೆ ನೀಡಿದೆ. ಇಂತಹ ಒಂದು ಯೋಜನೆ ಜೆಡಿ–ಎಸ್ ಅಥವಾ ಬಿಜೆಪಿಯವರು ಕೊಟ್ಟಿಲ್ಲ. ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಬಡವರ ಹೊಟ್ಟೆ ತುಂಬಿಸಲು ಒಂದು ಸಣ್ಣ ಯೋಜನೆಯನ್ನು ನೀಡಿಲ್ಲ. ಬೆಲೆ ಏರಿಕೆ ನಿಯಂತ್ರಣ ಮಾಡಲು, ವಿದ್ಯಾವಂತ ಯುವಕರಿಗೆ ಉದ್ಯೋಗ ನೀಡಲು, ಸಮಾಜದಲ್ಲಿ ಶಾಂತಿ ನಿರ್ಮಿಸಲು ಒಂದು ಯೋಜನೆಯನ್ನು ಕೊಟ್ಟಿಲ್ಲ.

ಇದು ಮಲೆನಾಡು ಪ್ರದೇಶ. ಪ್ರವಾಸೋದ್ಯಮಕ್ಕೆ ಹೆಚ್ಚು ಪ್ರಸಿದ್ಧಿ ಪಡೆದಿರುವ ಪ್ರದೇಶ. ಇತ್ತೀಚೆಗೆ ರಾಜ್ಯದಲ್ಲಿ 10 ಲಕ್ಷ ಕೋಟಿ ಬಂಡವಾಳ ಹೂಡಿಕೆಯಾಗಲಿದೆ ಎಂದು ಸರ್ಕಾರ ಘೋಷಿಸಿತ್ತು. ಇದರಲ್ಲಿ ಮಲೆನಾಡು ಭಾಗದಲ್ಲಿ ಎಷ್ಟು ಬಂಡವಾಳ ಹೂಡಿಕೆಯಾಗುತ್ತಿದೆ? ಈ ಭಾಗದಲ್ಲಿ 50 ಸಾವಿರ ಕೋಟಿ ಅಥವಾ 5 ಸಾವಿರ ಕೋಟಿಯಾದರೂ ಬಂಡವಾಳ ಹೂಡಿಕೆಯಾಗಿದೆಯಾ? ಮೋದಿ ಅವರು ಹೇಳಿದಂತೆ ನಿಮ್ಮ ಖಾತೆಗೆ 15 ಲಕ್ಷ ಹಾಕಿದರಾ? ನಿಮಗೆ ಅಚ್ಛೇದಿನ ಬಂತಾ? ರೈತರ ಆದಾಯ ಡಬಲ್ ಮಾಡುವುದಾಗಿ ಹೇಳಿದ್ದರು ನಿಮ್ಮ ಆದಾಯ ಡಬಲ್



ಆಯಿತಾ? ರೈತರು ಬಳಸುವ ಗೊಬ್ಬರ, ಮೇವುಗಳ ಬೆಲೆ ಏರಿಕೆಯಾಗುತ್ತಿವೆ. ಅಡುಗೆ ಅನಿಲ, ಅಡುಗೆ ಎಣ್ಣೆ, ದಿನಸಿ ವಸ್ತುಗಳು ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದೆ.

ಬಿಜೆಪಿ ಅಧಿಕಾರದಿಂದ ದೂರ ಇಡಲು ಕುಮಾರಸ್ವಾಮಿಗೆ ಬೇಷರತ್ ಬೆಂಬಲ ನೀಡಿದೆವು. ಕುಮಾರಸ್ವಾಮಿ ಅವರಿಗೆ ಅಧಿಕಾರ ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಜೆಡಿಎಸ್ 37 ಜನರಿದ್ದರೂ ನಾವು 80 ಶಆಸಕರಿದ್ದರೂ ನಾವು ಅವರಿಗೆ ಬೆಂಬಲ ನೀಡಿದೆವು. ಸಕಲೇಶಪುರದ ಕುಮಾರಸ್ವಾಮಿ ಅವರು ನಾನು ರಬ್ಬರ್ ಸ್ಟಾಂಪ್ ಆಗಿದ್ದೇನೆ ಎಂದರು ಹೇಳಿದರು. ಕುಮಾರಸ್ವಾಮಿ ಮುಖ್ಯಮಂತ್ರಿ ಹಾಗೂ ರೇವಣ್ಣ ಮಂತ್ರಿ ಆಗಲು ಸಾಧ್ಯವಿದೆಯಾ? ನಾನು ಅವರ ಆಂತರಿಕ ರಾಜಕೀಯ ಮಾತನಾಡುವುದಿಲ್ಲ.

ಬಿಜೆಪಿ 104 ಶಾಸಕರ ಜತೆ ಆಪರೇಷನ್ ಕಮಲ ಮಾಡಿ ಡಬಲ್ ಇಂಜಿನ್ ಸರ್ಕಾರ ಮಾಡಿದರು.

ಈ ಸರ್ಕಾರದಿಂದ ನಿಮಗೆ ಯಾವುದಾದರೂ ಅನುಕೂಲವಾಯಿತಾ? ಹುಡುಗರಿಗೆ ಉದ್ಯೋಗ ಸಿಕ್ಕಿದೆಯಾ? ಬೆಲೆ ಏರಿಕೆ ನಿಯಂತ್ರಣ ಮಾಡಿದರಾ? ಕೊಟ್ಟ ಕುದುರೆ ಏರಲಾಗದೆ ಮತ್ತೊಂದು ಕುದುರೆ ಏರಲು ಬಯಸುವವನು ವೀರನೂ ಅಲ್ಲ, ಶೂರನೂ ಅಲ್ಲ ಎಂದು ಎಂದು ಅಲ್ಲಮ್ಮ ಪ್ರಭುಗಳು ಹೇಳಿದ್ದಾರೆ. ಅದೇ ರೀತಿ ಅಧಿಕಾರ ಇದ್ದಾಗ ಜನರಿಗಾಗಿ ಏನೂ ಮಾಡಲಾಗದವರು ಮುಂದಿನ ಬಾರಿ ಅಧಿಕಾರಕ್ಕೆ ಬಂದರೆ ಮಾಡುತ್ತೇವೆ ಎಂದರೆ ಅದರಲ್ಲಿ ಅರ್ಥವಿರುವುದಿಲ್ಲ.

ರಾಜ್ಯದಲ್ಲಿ ಯಾರೂ ಕತ್ತಲಲ್ಲಿ ಇರಬಾರದು, ಬೆಲೆ ಏರಿಕೆಯಿಂದ ಪರಿಹಾರ ಪಡೆಯಲು ಕಾಂಗ್ರೆಸ್ ಪಕ್ಷ ಐದು ಗ್ಯಾರಂಟಿ ಯೋಜನೆಗಳನ್ನು ಪ್ರಕಟಿಸಿದೆ. ಗೃಹಜ್ಯೋತಿ ಯೋಜನೆ ಮೂಲಕ ಪ್ರತಿ ಮನೆಗೆ 200 ಯೂನಿಟ್ ವಿದ್ಯುತ್ ಉಚಿತ ನೀಡಲಾಗುವುದು. ಆಮೂಲಕ ಪ್ರತಿ ಮನೆಗೆ ಸುಮಾರು 1500 ರೂ. ಉಳಿತಾಯವಾಗಲಿದೆ. ನಾನು ಇಂಧನ ಸಚಿವನಾಗಿದ್ದೆ.

ಈ ಭಾಗದಲ್ಲಿ 200 ಕುಟುಂಬ ಹೊರತಾಗಿ ಉಳಿದವರು ಯಾರೂ ಕರೆಂಟ್ ಬಿಲ್ ಕಟ್ಟುವಂತಿಲ್ಲ. ಗೃಹಲಕ್ಷ್ಮಿ ಯೋಜನೆ ಮೂಲಕ ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು 2 ಸಾವಿರ ಪ್ರೋತ್ಸಾಹ ಧನ ನೀಡಲು ನಿರ್ಧರಿಸಲಾಗಿದೆ. ಇನ್ನು ಅನ್ನಭಾಗ್ಯ ಯೋಜನೆ ಮೂಲಕ ಬಡ ಕುಟುಂಬಗಳ ಪ್ರತಿ ಸದಸ್ಯನಿಗೆ ತಿಂಗಳಿಗೆ ತಲಾ 10 ಕೆ.ಜಿ ಅಕ್ಕಿ ಉಚಿತವಾಗಿ ನೀಡಲಾಗುವುದು. ಇನ್ನು ನಿರುದ್ಯೋಗ ಯುವಕರಿಗಾಗಿ ಪದವೀಧರ–ರಿಗೆ ಪ್ರತಿ ತಿಂಗಳು 3000 ಹಾಗೂ ಡಿಪ್ಲೋಮಾ ಪದವೀಧರರಿಗೆ 1500 ರೂ. ನಿರುದ್ಯೋಗ ಭತ್ಯೆ ನೀಡಲಾಗುವುದು. ಇನ್ನು ಸಾರ್ವಜನಿಕ ಬಸ್ ಗಳಲ್ಲಿ ರಾಜ್ಯದ ಮಹಿಳೆಯರಿಗೆ ಉಚಿತ ಪ್ರಯಾಣ ನೀಡುವ ಯೋಜನೆಗಳನ್ನು ಪ್ರಕಟಿಸಲಾಗಿದೆ. ಮೇ 13ರಂದು ಫಲಿತಾಂಶ ಬಂದ ಮೇಲೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮೊದಲ ಸಚಿವ ಸಂಪುಟ ಸಭೆಯಲ್ಲಿ ಈ ಯೋಜನೆಗಳನ್ನು ಜಾರಿ ಮಾಡಲಾಗುವುದು.

ಕೋಮುಗಲಭೆ, 40% ಕಮಿಷನ್, ಕೋಮುಗಲಭೆ, ಹುದ್ದೆಗಳ ಮಾರಾಟ ಹಾಗೂ ರಾಜ್ಯ ಲೂಟಿ ಬಿಜೆಪಿಯ ಗ್ಯಾರಂಟಿಗಳಾಗಿವೆ. ಹೀಗಾಗಿ ಈ ಕ್ಷೇತ್ರದಲ್ಲಿರುವ ಅಲ್ಪಸಂಖ್ಯಾತರು, ದಲಿತರು, ಒಕ್ಕಲಿಗರು, ಲಿಂಗಾಯತರು, ಹಿಂದುಳಿದವರು 75 ಸಾವಿರ ಜನರಿದ್ದು, ನೀವೆಲ್ಲರೂ ಸೇರಿ ನನ್ನ ಮಿತ್ರ ಮುರಳಿ ಮೋಹನ್ ಅವರನ್ನು ವಿಧಾನಸೌಧಕ್ಕೆ ಆರಿಸಿ ಕಳುಹಿಸುತ್ತೇವೆ ಎಂಬ ಗ್ಯಾರಂ–ಟಿಯನ್ನು ನೀವು ನಮಗೆ ನೀಡಬೇಕು ಎಂದು ಹೇಳಿದರು.

## 263ನೇ ಶಿವಾನುಭವ, ಬಸವ ಜಯಂತಿ ಕಾರ್ಯಕ್ರಮ

ಬೆಳಗಾವಿ: ಶ್ರೀ ಕಾರಂಜಿಮಠದಲ್ಲಿ ಮೇ 1 ರಂದು ಸೋಮವಾರ ಸಾಯಂಕಾಲ 6 ಗಂಟೆಗೆ 263ನೇ ಶಿವಾನುಭವ ಮತ್ತು ಬಸವ ಜಯಂತಿ–ಕಾರ್ಯಕ್ರಮ ಜರುಗುವುದು ಕಾರ್ಯಕ್ರಮದ ಸಾನಿಧ್ಯವನ್ನು ಪೂಜ್ಯ ಶ್ರೀ ಮ. ನಿ .ಪ್ರ .ಗುರುಸಿದ್ಧ ಮಹಾಸ್ವಾಮಿಗಳು ಕಾರಂಜಿ ಮಠದ ಪೂಜ್ಯ ಶ್ರೀ ಡಾ. ಶಿವಯೋಗಿ ದೇವರುಕಾರಂಜಿಮಠಅವರು ನೇತೃತ್ವ ವಹಿಸಿಕೊಳ್ಳುವರು.

ಹಿರಿಯ ಸಾಹಿತಿ ಪ್ರೋ. ಬಿ.ಎಸ್. ಗವಿಮಠಅಧ್ಯಕ್ಷತೆ ವಹಿಸುವರುಡಾ .ಪಿ .ಜಿ. ಕೆಂಪಣ್ಣವರಅವರು ಬಸವಣ್ಣವರು ಪ್ರತಿಪಾದಿಸಿದ ಜೀವನ ಮೌಲ್ಯಗಳು ಎಂಬ ವಿಷಯ ಕುರಿತು ಉಪನ್ಯಾಸ ನೀಡುವರು.ಎಂದು ಪ್ರಕಟಣೆ ತಿಳಿಸಿದ್ದಾರೆ.

## ಮೇ.2 ರಿಂದ 4 ರವರೆಗೆ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ಅವಕಾಶ

ಬೆಳಗಾವಿ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ–2023ರ ಹಿನ್ನೆಲೆಯಲ್ಲಿ ಅಗತ್ಯ ಸೇವೆಗಳು ಎಂದು ಗುರುತಿಸಲಾದ ವಿವಿಧ ಇಲಾಖೆಗಳಿಗೆ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.

ಅಗತ್ಯ ಸೇವೆಗಳ ಇಲಾಖೆಗಳಡಿ ಬರುವ ನಮೂನೆ–12ಡಿ ರಲ್ಲಿ ಕೋರಿಕೆ ಸಲ್ಲಿಸಿದ ಅಧಿಕಾರಿ/ಸಿಬ್ಬಂದಿಗಳು (ಂಗಿಇಖ) ಪೋಸ್ಟಲ್ ವೋಟಿಂಗ್ ಸೆಂಟರ್ (ಕಗಿಅ) ಗಳನ್ನು ಮೇ.2 ರಿಂದ ಮೇ.4 2023 ರವರೆಗೆ ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ತೆರೆಯಲಾಗಿದೆ.

**ಅಗತ್ಯ ಸೇವೆಗಳು ಎಂದು ಗುರುತಿಸಲಾದ ವಿವಿಧ ಇಲಾಖೆಗಳು:**

ಇಲೆಕ್ಟ್ರಿಸಿಟಿ ಇಲಾಖೆ, ಬಿಎಸ್‌ಎನ್‌ಎಲ್, ರೈಲ್ವೆ ಇಲಾಖೆ, ದೂರದರ್ಶನ, ಆಲ್ ಇಂಡಿಯಾ ರೆಡಿಯೋ, ಆರೋಗ್ಯ ಇಲಾಖೆ, ಎವಿಯೆಷನ್, ಸಾರಿಗೆ ಸಂಸ್ಥೆ, ಫೈರ್ ಸರ್ವಿಸಿಸ್, Media Persons authorized bb ECI for poll-day Coverage, ಟ್ರಾಫಿಕ್ ಪೋಲಿಸ್ ಹಾಗೂ ಅಂಬುಲೆನ್ಸ್ ಸೇವೆಗಳು.

**ಪೋಸ್ಟಲ್ ವೋಟಿಂಗ್ ಸೆಂಟರ್ (PVC) ಗಳ ವಿಳಾಸ:**

01 – ನಿಪ್ಪಾಣಿ: ತಹಶೀಲ್ದಾರ ಕಚೇರಿ ಐಬಿ ನಿಪ್ಪಾಣಿ

02–ಚಿಕ್ಕೋಡಿ–ಸದಲಗಾ: ಕೊಠಡಿ ನಂ:7 (ನೆಲ ಮಹಡಿ) ತಹಶೀಲ್ದಾರ ಕಚೇರಿ ಚಿಕ್ಕೋಡಿ

03– ಅಥಣಿ: ತಹಶೀಲ್ದಾರ ಕಚೇರಿ ಅಥಣಿ

04–ಕಾಗವಾಡ: ಚುನಾವಣಾಧಿಕಾರಿಗಳ ಕಚೇರಿ ಶಿವಾನಂದ ಕಾಲೇಜ್, ಕಾಗವಾಡ

05–ಕುಡಚಿ: ಚುನಾವಣಾಧಿಕಾರಿಗಳ ಕಚೇರಿ 05–ಕುಡಚಿ ವಿಧಾನಸಭೆ ಕ್ಷೇತ್ರ, ತಹಶೀಲ್ದಾರ ಕಾರ್ಯಾಲಯ ರಾಯಬಾಗ

06–ರಾಯಬಾಗ: ಚುನಾವಣಾಧಿಕಾರಿಗಳ ಕಚೇರಿ 06–ರಾಯಬಾಗ ವಿಧಾನಸಭೆ ಕ್ಷೇತ್ರ, ತಹಶೀಲ್ದಾರ ಕಾರ್ಯಾಲಯ ರಾಯಬಾಗ

07–ಹುಕ್ಕೇರಿ: ತಹಶೀಲ್ದಾರ ಕಚೇರಿ ಹುಕ್ಕೇರಿ

08–ಅರಭಾಂವಿ: ತಹಶೀಲ್ದಾರ ಕಚೇರಿ, ಮೂಡಲಗಿ

09–ಗೋಕಾಕ: ತಾಲೂಕಾ ಆಡಳಿತ ಸೌಧ ರೂಮ್ ನಂ:23 ತಹಶೀಲ್ದಾರ ಕಚೇರಿ ಗೋಕಾಕ

10–ಯಮಕನಮರಡಿ: ಸಹಾಯಕ ನಿರ್ದೇಶಕರು ಸಾಮಾಜಿಕ ಕಲ್ಯಾಣ ಕಚೇರಿ ಹೊಸ ಕಟ್ಟಡ ನೆಲ ಮಹಡಿ ಹುಕ್ಕೇರಿ

11–ಬೆಳಗಾವಿ ಉತ್ತರ: ಚುನಾವಣಾಧಿಕಾರಿಗಳ ಕಚೇರಿ, 11–ಬೆಳಗಾವಿ ಉತ್ತರ ವಿಧಾನಸಭೆ ಕ್ಷೇತ್ರ, ಮಹಾನಗರ ಪಾಲಿಕೆ ಕಚೇರಿ ಸುಭಾಷ ನಗರ ಬೆಳಗಾವಿ

12–ಬೆಳಗಾವಿ ದಕ್ಷಿಣ: ಚುನಾವಣಾಧಿಕಾರಿಗಳ ಕಚೇರಿ, 11–ಬೆಳಗಾವಿ ದಕ್ಷಿಣ ವಿಧಾನಸಭೆ ಕ್ಷೇತ್ರ, ಮಹಾನಗರ ಪಾಲಿಕೆ ಕಚೇರಿ ಸುಭಾಷ ನಗರ ಬೆಳಗಾವಿ

13–ಬೆಳಗಾವಿ ಗ್ರಾಮೀಣ: ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ, ಕಂಗ್ರಾಳಿ ಕೆ.ಎಚ್

14–ಖಾನಾಪೂರ: ತಹಶೀಲ್ದಾರ ಕಚೇರಿ, ಖಾನಾಪೂರ

15–ಕಿತ್ತೂರ: ರೂಮ್ ನಂ:14 ತಹಶೀಲ್ದಾರ ಕಚೇರಿ ಕಿತ್ತೂರ

16– ಬೈಲಹೊಂಗಲ: ತಹಶೀಲ್ದಾರ ಕಚೇರಿ, ಬೈಲಹೊಂಗಲ

17–ಸವದತ್ತಿ–ಯಲ್ಲಮ್ಮಾ: ಸರ್ವೆ ಸೆಕ್ಷನ್ ತಹಶೀಲ್ದಾರ ಕಚೇರಿ, ಸವದತ್ತಿ

18–ರಾಮದುರ್ಗ: ರೂಮ್ ನಂ.06 ತಹಶೀಲ್ದಾರ ಕಚೇರಿ, ರಾಮದುರ್ಗ

ಮೇಲೆ ವಿವರಿಸಿದ ಇಲಾಖೆಗಳಡಿ ಬರುವ ನಮೂನೆ–12ಡಿ ರಲ್ಲಿ ಕೋರಿಕೆ ಸಲ್ಲಿಸಿದ ಅಧಿಕಾರಿ/ಸಿಬ್ಬಂದಿಗಳು ಪೋಸ್ಟಲ್ ವೋಟಿಂಗ್ ಸೆಂಟರ್ (PVC) ಗಳಿಗೆ ಭೇಟಿ ನೀಡಿ ಮತದಾನ ಮಾಡಬಹುದಾಗಿದೆ. ಮತದಾನ ಮಾಡಲು ತೆರಳಿದ ದಿನಕ್ಕೆ ಮಾತ್ರ ವೇತನ ಸಹಿತ ರಜೆಯನ್ನು ನೀಡಲಾಗುವುದು.

ಕಾರಣ ಅಗತ್ಯ ಸೇವೆಗಳ ಇಲಾಖೆಗಳಡಿ ಬರುವ ಸಂಬಂಧಿಸಿದ ಅಧಿಕಾರಿ/ ಸಿಬ್ಬಂದಿಗಳು ಈ ಸಂದರ್ಭವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.1 ರಿಂದ ಬೆಳಗಾವಿ ಮತ್ತು ಗೋಕಾಕ ನಡುವೆ ಏಕವ್ಯಕ್ತಿ ಸಾರಿಗೆ ಪ್ರಾರಂಭ

ಬೆಳಗಾವಿ: ಬೆಳಗಾವಿ ಮತ್ತು ಚಿಕ್ಕೋಡಿ ವಿಭಾಗಗಳಿಂದ ಜಂಟಿಯಾಗಿ ಬೆಳಗಾವಿ ಮತ್ತು ಗೋಕಾಕ ನಡುವೆ ಅಂಕಲಗಿ ಒಂದು ನಿಲುಗಡೆ ಕಲ್ಪಿಸಿ, ಪ್ರತಿ ದಿನ ಒಟ್ಟು 35 ದುಂಡು ಸುತ್ತುಗಳಿಂದ ಪ್ರತಿ 15 ರಿಂದ 30 ನಿಮೀಷಗಳ ಅಂತರದಲ್ಲಿ ವಿಶೇಶವಾಗಿ ಏಕವ್ಯಕ್ತಿ ಸಾರಿಗೆ ಕಾರ್ಯಾಚರಣೆಯನ್ನು (OneMan operation) ಮೇ.1 2023 ರಿಂದ ಪ್ರಾರಂಭಿಸಲಾಗುತ್ತಿದೆ.

ಸಾರ್ವಜನಿಕ ಪ್ರಯಾಣಿಕರು ಸದರಿ ಸಾರಿಗೆಗಳ ಪ್ರಯೋಜನ ಪಡೆದುಕೊಳ್ಳಲು ವಾಕರಸಾಸಂಸ್ಥೆ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಯಾದ ಗಣೇಶ ರಾಠೋಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆದರಿಕೆಗೆ ಯಾವ ಕಾಲಕ್ಕೂ ಅಂಜಬೇಡಿ; ಕಾರ್ಯಕರ್ತರಿಗೆ ಅಭಯ ನೀಡಿದ ಬಾಲಚಂದ್ರ ಜಾರಕಿಹೊಳಿ



ಮೂಡಲಗಿ : ಯಾರ ಹೆದರಿಕೆಗೂ ಮಣಿಯಬೇಡಿ, ನಿಮ್ಮ ಜೊತೆ ನಾನಿದ್ದೇನೆ. ಯಾರಾದರೂ ನಿಮಗೆ ಈ ಚುನಾವಣೆಯಲ್ಲಿ ಅಂಜಿಕೆ ಹಾಕಿದರೇ ಅವರಿಗೆ ಮುಂದಿನ ದಿನಗಳಲ್ಲಿ ತಕ್ಕ ಉತ್ತರ ನೀಡುವಂತೆ ಅರಭಾವಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಹಾಗೂ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಕಾರ್ಯಕರ್ತರಿಗೆ ಅಭಯ ನೀಡಿದರು.

ಶುಕ್ರವಾರ ಸಂಜೆ ತಾಲೂಕಿನ ಕಲ್ಲೋಳ್ಳಿ ಪಟ್ಟಣದಲ್ಲಿ ಜರುಗಿದ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಕೆಲವರು ಈ ಚುನಾವಣೆಯಲ್ಲಿ ನಮ್ಮ ನಿಷ್ಠಾವಂತ ಕಾರ್ಯಕರ್ತರಿಗೆ ಹೆದರಿಕೆ ಹಾಕುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ಅಂತಹ ಬೆದರಿಕೆಗೆ ಯಾವ ಕಾಲಕ್ಕೂ ಅಂಜಬೇಡಿ ಎಂದು ತಿಳಿಸಿದರು.

ನಮ್ಮ ಕಾರ್ಯಕರ್ತರಿಗೆ ಇಲ್ಲಿನ ಪ್ರಭಾವಿಯೊಬ್ಬರು ಸುಮ್ಮ–ಸುಮ್ಮನೇ ತೊಂದರೆ ನೀಡುತ್ತಿದ್ದಾರೆ. ನನ್ನ ವಿರುದ್ಧ ಷಡ್ಯಂತ್ರ ಹೂಡುತ್ತಿದ್ದಾರೆ.

ನಮ್ಮ ಗುಂಪಿನ ವ್ಯಕ್ತಿ–ವ್ಯಕ್ತಿಗಳ ಮಧ್ಯ ಜಗಳ ಹಚ್ಚುವ ಕೆಲಸ ಮಾಡುತ್ತಿದ್ದಾರೆ. ನಮ್ಮ ಕಾರ್ಯಕರ್ತರನ್ನು ಬೇರ್ಪಡಿಸುವುದೇ ಅವರ ಗುರಿಯಾಗಿದೆ. ಮೊದಲಿನಿಂದಲೂ ನಿಷ್ಠೆಯಿಂದ ಇರುವ ಜನರು ಮುಂದೆಯೂ ಸಹ ನನ್ನೊಂದಿಗೆ ಗುರುತಿಸಿಕೊಳ್ಳುತ್ತಾರೆ. ಗೊಡ್ಡ ಬೆದರಿಕೆಗೆ ಅಂಜಬೇಡಿ, ನಿಮ್ಮನ್ನು ಕಾಪಾಡುವುದು ನನ್ನ ಜವಾಬ್ದಾರಿಯಾಗಿದೆ. ಹಣ, ಆಸ್ತಿ ಇಟ್ಟುಕೊಂಡು ಹೆದರಿಸುತ್ತಿರುವವರಿಗೆ ನೀವೇ ಉತ್ತರಿಸಿ, ಚುನಾವಣೆಯ ಬಳಿಕ ಎಲ್ಲ ಉತ್ತರಗಳನ್ನು ನೀಡೋಣ. ಅಲ್ಲಿಯ ವರೆಗೆ ಶಾಂತ ಚಿತ್ತದಿಂದ ಇರೋಣ ಎಂದು ಕಾರ್ಯಕರ್ತರಿಗೆ ಧೈರ್ಯ ತುಂಬಿದರು.

ಕಲ್ಲೋಳ್ಳಿ ಪಟ್ಟಣ ಪಂಚಾಯತಿ ಚುನಾವಣೆಯ ದ್ವೇಷ ಇಟ್ಟುಕೊಂಡು ನಮ್ಮ ಪಕ್ಷದ ಕಾರ್ಯಕರ್ತರಿಗೆ ಕೆಲವರು ಹಗೆತನ ಸಾಧಿಸುತ್ತಿದ್ದಾರೆ. ಆ ಚುನಾವಣೆಯಲ್ಲಿ ನನ್ನ ಪಾತ್ರವೇನೂ ಇಲ್ಲ. ಇದಕ್ಕೆಲ್ಲಾ ಅವರೇ ಮೂಲ ಸೂತ್ರಧಾರಿಗಳು. ಆ ಚುನಾವಣೆಯಲ್ಲಿ ನಮ್ಮ ಕಾರ್ಯಕರ್ತರಲ್ಲಿಯೇ ವೈಮನಸ್ಸು ಬರುವಂತೆ ಮಾಡಿಕೊಂಡು ನಮ್ಮ ಗುಂಪಿನಿಂದ ಹೊರಗೆ ಬರುವಂತೆ ಮಾಡಿದವರೇ ಅವರು. ಪ್ರವಾಸಿ ಮಂದಿರದಲ್ಲಿ ಸರಣಿ ಸಭೆಗಳನ್ನು ಆಯೋಜಿಸಿ ನಮ್ಮ ವಿರುದ್ಧ ಷಡ್ಯಂತ್ರ ಹೂಡಿದರು. ಆದರೂ ನಮ್ಮ ಕಾರ್ಯಕರ್ತರ ಅದಕ್ಕೆಲ್ಲಾ ಸೊಪ್ಪು ಹಾಕಲಿಲ್ಲ. ಈಗ ಚುನಾವಣೆ ಬಂದಿದ್ದರಿಂದ ಏನೇನೋ ಹೇಳಿಕೊಂಡು ತಿರುಗಾಡುತ್ತಿದ್ದಾರೆ. ಸುಳ್ಳು ಹೇಳುವುದೇ ಅವರ ಕಾಯಕವಾಗಿದೆ ಎಂದು ವಿರೋಧಿಗಳ ಹೆಸರನ್ನು ಪ್ರಸ್ತಾಪಿಸದೇ ಕುಟುಕಿದರು.

ಮೇ–10 ರಂದು ನಡೆಯುವ ಚುನಾವಣೆಯಲ್ಲಿ ನಾನು ಮಾಡಿರುವ ಸಾಧನೆಗಳನ್ನು ಗುರುತಿಸಿ ಸಮಗ್ರ ಅಭಿವೃದ್ಧಿಗಾಗಿ ಅಶೀರ್ವಾದ ಮಾಡಬೇಕು. 2004ರಿಂದ ಇಲ್ಲಿಯ ತನಕ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ. ಆ ಕಾರ್ಯಗಳು ಸಹ ನಿಮ್ಮ ಮುಂದಿವೆ. ಕೆಲವರು ಬಂದು ಆಶ್ವಾಸನೆಗಳನ್ನು ನೀಡಿ ಹೋಗುತ್ತಾರೆ. ಅಂತವರ ಬಗ್ಗೆ ಹೆಚ್ಚಿನ ಮಹತ್ವ ನೀಡಬೇಡಿ.

ಬಿ.ಎಸ್.ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ಅವರ ಜನಪ್ರೀಯ ಯೋಜನೆಗಳು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಕೇಂದ್ರದ ಸಾಧನೆಗಳನ್ನು ಮನಗಂಡು ಈ ಬಾರಿಯೂ ಬಿಜೆಪಿಯನ್ನು ಬೆಂಬಲಿಸಿ ಆಶೀರ್ವದಿಸಬೇಕು. ಮತ್ತೇ ಬಿಜೆಪಿ ಅಧಿಕಾರಕ್ಕೆ ಬರುವ ಎಲ್ಲ ಲಕ್ಷಣಗಳು ಗೋಚರಿಸುತ್ತಿವೆ. ಮತ್ತೋಮ್ಮೆ ಜನರ ಆಶೀರ್ವಾದದಿಂದ ನಮ್ಮ ಪಕ್ಷ ಅಧಿಕಾರಕ್ಕೆ ಬಂದರೇ ಮತ್ತಷ್ಟು ರಾಜ್ಯದಲ್ಲಿ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳ್ಳುತ್ತವೆ. ಸರ್ವಾಂಗೀಣ ಅಭಿವೃದ್ಧಿಯಾಗುತ್ತದೆ. ಬಿಜೆಪಿಯೊಂದೇ ರಾಜ್ಯದ ಜ್ವಲಂತ ಸಮಸ್ಯೆಗಳನ್ನು ಪರಿಹರಿಸುವ ಏಕೈಕ ಪಕ್ಷವಾಗಿದೆ. ಆದ್ದರಿಂದ ಶೇಜ ನಂ 5 ಇದ್ದು ಕಮಲ ಗುರ್ತಿಗೆ ಮತವನ್ನು ಹಾಕಿ ಪ್ರಚಂಡ ಬಹುಮತದಿಂದ ಆಯ್ಕೆ ಮಾಡುವಂತೆ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ಬಸಗೌಡ ಪಾಟೀಲ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ನೀಲಕಂಠ ಕಪ್ಪಲಗುದ್ದಿ, ಸುಭಾಸ ಕುರಬೇಟ, ಮಲ್ಲಪ್ಪ ಹೆಬ್ಬಾಳ, ಮಹಾಂತೇಶ ಕಪ್ಪಲಗುದ್ದಿ, ಅಶೋಕ ಮಕ್ಕಳಗೇರಿ, ವಸಂತ ತಹಶೀಲದಾರ, ದತ್ತು ಕಲಾಲ, ಮಲ್ಲಪ್ಪ ಖಾನಾಪೂರ, ಭಗವಂತ ಪತ್ತಾರ ಅನೇಕ ಮುಖಂಡರು, ಪ.ಪಂ ಸದಸ್ಯರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಪಕ್ಷದಿಂದ ಮಾತ್ರ ಸರ್ವರ ಉದ್ಧಾರ ಸಾಧ್ಯ: ರಾಹುಲ್ ಜಾರಕಿಹೊಳಿ



ಯಮಕನಮರಡಿ: ತಂದೆಯವರು ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿಯವರು ಕ್ಷೇತ್ರದಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಗಳೇ ಮತ್ತೊಮ್ಮೆ ಅವರ ಕೈ ಹಿಡಿಯುವ ವಿಶ್ವಾಸವಿದೆ ಎಂದು ಯುವ ನಾಯಕ ರಾಹುಲ್ ಜಾರಕಿಹೊಳಿ ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಹಾರಣಕೊಳ್ಳ, ರಂಗಧೋಳಿ ಹಾಗೂ ರಾಮಾಪೂರ ಗ್ರಾಮಗಳಲ್ಲಿ ಭರ್ಜರಿ ಮತಯಾಚಿಸಿ ಮಾತನಾಡಿದ ಅವರು, ಸರ್ವ ಸಮಾಜದ ಪ್ರಗತಿ ಬಯಸುವ ಶಾಸಕ ಸತೀಶ್ ಜಾರಕಿಹೊಳಿ ಅವರನ್ನು ಬಹುಮತದಿಂದ ಆಯ್ಕೆ ಮಾಡಬೇಕೆಂದು ಕರೆ ನೀಡಿದರು.

ಯಮಕನಮರಡಿ ಮತಕ್ಷೇತ್ರದ ಜನತೆಗೆ ಶಾಸಕರು ಎಲ್ಲ ರೀತಿಯ ಮೂಲ ಸೌಕರ್ಯಗಳನ್ನು ಕಲ್ಪಿಸಿದ್ದಾರೆ. ಶೈಕ್ಷಣಿಕ ಕ್ರಾಂತಿಗೆ ಮುನ್ನುಡಿ ಬರೆದಿದ್ದಾರೆ.

ಹೀಗಾಗಿ ಇನ್ನಷ್ಟು ಯಮಕನಮರಡಿ ಮತಕ್ಷೇತ್ರವನ್ನು ಅಭಿವೃದ್ಧಿಗೊಳಿಸಲು ಶಾಸಕ ಸತೀಶ್ ಜಾರಕಿಹೊಳಿ ಅವರ ಕೈ ಬಲಪಡಿಸಬೇಕೆಂದು ತಿಳಿಸಿದರು.

ಕಾಂಗ್ರೆಸ್ ಪಕ್ಷವು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದ ಇತಿಹಾಸ ಹೊಂದಿದೆ. ದೇಶದ ಏಳಿಗೆಯಲ್ಲಿ ಮಹತ್ವದ ಪಾತ್ರ ವಹಿಸಿದೆ.

ಕಾಂಗ್ರೆಸ್ ಪಕ್ಷದಿಂದ ಮಾತ್ರ ಬಡವರ, ದೀನ ದಲಿತರ ಉದ್ಧಾರ ಸಾಧ್ಯ.

ಕಾರಣ ಕಾಂಗ್ರೆಸ್ ಪಕ್ಷ ಜಾರಿಗೆ ತಂದಂತಹ ಜನಪರ ಯೋಜನೆಗಳ ಕುರಿತು ಜನರಲ್ಲಿ ಪಕ್ಷದ ಕಾರ್ಯಕರ್ತರು ತಿಳಿವಳಿಕೆ ಮೂಡಿಸಬೇಕು ಎಂದರು.

ಈ ಸಂದರ್ಭದಲ್ಲಿ ಯಮಕನಮರಡಿ ಮತಕ್ಷೇತ್ರದ ಹಾರಣಕೊಳ್ಳ, ರಂಗಧೋಳಿ, ರಾಮಾಪೂರ ಗ್ರಾಮಗಳ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

# ಮರ್ಚೆಂಟ್ ನೆವಿ ಅಧಿಕಾರಿಯ ಕೈ ಹಿಡಿತಾರಾ ಬೆಳಗಾವಿ ಉತ್ತರದ ಜನತೆ




ಬೆಳಗಾವಿ: ಗಾಲಿ ಜನಾರ್ಧನ ರೆಡ್ಡಿ ಕಟ್ಟಿರುವ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ ಬೆಳಗಾವಿ ಪೊಲಿಟಿಕ್ಸಗೆ ಎಂಟ್ರಿ ಕೊಟ್ಟಿರುವ ಪ್ರವೀಣ ಹಿರೇಮಠ ತಮ್ಮ ವಾಕ್ಚತುರ್ಯ ಮತ್ತು ಸರಳ ಜೀವನದ ನಡೆತೆಯಿಂದ ಬೆಳಗಾವಿ ಉತ್ತರದ ಜನ ಮನ ಗೆಲ್ಲಲು ಸಿದ್ದರಾಗಿದ್ದಾರೆ.

ವಿದ್ಯಾಭ್ಯಾಸ ಮುಗಿಸಿ ಮರ್ಚೆಂಟ್ ನೆವಿ ಕೆಲಸಗಿಟ್ಟಿಸಿಕೊಂಡ ಪ್ರವೀಣ 86ದೇಶ ಸುತ್ತಿ ಅಲ್ಲಿನ ಅಭಿವೃದ್ಧಿಗಳನ್ನು ಕಂಡು ಪ್ರೇರಿತರಾಗಿದ್ದಾರೆ,ಅಲ್ಲಿನ ಹೈಟೆಕ್ ಆಸ್ಪತ್ರೆ, ರೋಡ್ ಮತ್ತು ಚರಂಡಿ ವ್ಯವಸ್ಥೆ ಹಾಗು ಸರಕಾರಿ ಶಾಲಾ ಕಾಲೇಜುಗಳ ವ್ಯವಸ್ಥೆ ಕಂಡು ನಮ್ಮ ನಾಡಿನಲ್ಲಿಯೂ ಕೂಡ ಈ ರೀತಿ ಸೌಲಭ್ಯಗಳನ್ನು ಪಡೆಯಬಹುದು ಎಂದು ಮನವರಿಕೆ ಮಾಡಿಕೊಂಡು ರಾಜಕೀಯಕ್ಕೆ ದುಮುಕಿದ್ದಾರೆ ಎಂದು ಹೇಳಿದ್ದಾರೆ.

ಜನ ಸ್ನೇಹಿ ಪ್ರಣಾಳಿಕೆ ಬಿಡುಗಡೆ ಮಾಡಿರುವ ಪ್ರವೀಣ ಅನೇಕ ಹೊಸ ಉಪಾಯ ಹಾಗು ಹೊಸ ತಂತ್ರಜ್ಞಾನದ ಮೂಲಕ ಪರಿಸರ ಸಂರಕ್ಷಣೆ ಮಾಡುವುದಾಗಿ ಹೇಳಿದ್ದಾರೆ ಹಾಗು ಬೆಳಗಾವಿಯಲ್ಲಿ ಐಟಿ,ಬಿಟಿ,ಆಸ್ಪತ್ರೆ ವ್ಯವಸ್ಥೆ ಮತ್ತು ಪರಿಸರ ಸಂರಕ್ಷಣೆಗೆ ಹೆಚ್ಚಿನ ಮಹತ್ವ ನೀಡುವುದಾಗಿ ಅಧಿಕೃತ ಟ್ವಿಟ್ಟರ ಖಾತೆ ಮೂಲಕ ತಿಳಿಸಿದ್ದಾರೆ.

# ಮುಂಬೈನಲ್ಲಿ ಘೋರ ದುರಂತ: ಕಟ್ಟಡ ಅವಶೇಷಗಳಡಿ 15–20 ಜನ ಸಿಲುಕಿರುವ ಶಂಕೆ



ಥಾಣೆ: ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಭಿವಾಂಡಿಂ–ಯ ವಾಲ್ಪಾಡಾ ಪ್ರದೇಶದಲ್ಲಿ ಶನಿವಾರ ಕಟ್ಟಡವೊಂದು ಕುಸಿದಿದ್ದು, ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಜನರನ್ನ ರಕ್ಷಿಸಲಾಗುತ್ತಿದೆ.

ಕಟ್ಟಡದ ಅವಶೇಷಗಳ ಅಡಿಯಲ್ಲಿ ಸುಮಾರು 15 ರಿಂದ 20 ಜನರು ಸಿಲುಕಿರುವ ಶಂಕೆ ಇದ್ದು, ಸ್ಥಳೀಯರು ಅಗ್ನಿಶಾಮಕ ಮತ್ತು ವಿಪತ್ತು ಇಲಾಖೆಗೆ ಕರೆ ಮಾಡಿ ಅಪಘಾತದ ಬಗ್ಗೆ ಮಾಹಿತಿ ನೀಡಿದ್ದಾರೆ.

ಸ್ಥಳೀಯರ ಪ್ರಕಾರ, 15 ರಿಂದ 20 ಜನರು ಅವಶೇಷಗಳ ಅಡಿಯಲ್ಲಿ ಸಿಲುಕಿದ್ದಾರೆ. ಗ್ರೌಂಡ್ ಪ್ಲಸ್ 2 ಅಂತಸ್ತಿನ ಕಟ್ಟಡ ಎಂದು ಹೇಳಲಾಗುತ್ತಿದೆ. ಅಗ್ನಿಶಾಮಕ ದಳ ಮತ್ತು ಎನ್ಡಿಆರ್‌ಎಫ್ ಮತ್ತು ಪೊಲೀಸರ ವಿಪತ್ತು ತಂಡಗಳು ಸ್ಥಳಕ್ಕೆ ತಲುಪಿವೆ. ಸ್ಥಳೀಯರ ಪ್ರಕಾರ, ನಾಲ್ಕು ಕುಟುಂಬಗಳು ಕೆಲವು ಕಾರ್ಮಿಕರು ಅವಶೇಷಗಳ ಅಡಿಯಲ್ಲಿ ಸಿಲುಕಿಕೊಂಡಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇನ್ನು ಥಾಣೆ ಅಗ್ನಿಶಾಮಕ ದಳದ ತಂಡವು ಸ್ಥಳಕ್ಕೆ ತಲುಪುತ್ತಿದೆ.

# ಮಹಿಳಾ ಕುಸ್ತಿಪಟುಗಳ ಹೋರಾಟಕ್ಕೆ ಮೊದಲ ಹಂತದ ಜಯ





ಹೊಸದಿಲ್ಲಿ: ಕಳೆದ ಹಲವು ದಿನಗಳಿಂದ ದೆಹಲಿಯ ಜಂತರ್ ಮಂತರ್ ನಲ್ಲಿ ಬೀದಿಗಿಳಿದು ಹೋರಾಟ ನಡೆಸಿರುವ ಮಹಿಳಾ ಕುಸ್ತಿಪಟುಗಳ ಹೋರಾಟಕ್ಕೆ ಮೊದಲ ಹಂತದ ಜಯ ಸಿಕ್ಕಿದೆ.

ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದ ಬೆನ್ನಲ್ಲೇ ದೆಹಲಿ ಪೊಲೀಸರು ಭಾರತ ಕುಸ್ತಿ ಫೆಡರೇಷನ್ ಅಧ್ಯಕ್ಷ ಬ್ರಿಜ್ ಭೂಷಣ ಶರಣ ಸಿಂಗ್ ವಿರುದ್ಧ ಲೈಂಗಿಕ ಕಿರುಕುಳದ ಎರಡು FIR ದಾಖಲಿಸಿದ್ದಾರೆ.

ಅಪ್ರಾಪ್ತೆ ನೀಡಿದ ದೂರಿನನ್ವಯ ಬ್ರಿಜ್ ಭೂಷಣ ವಿರುದ್ಧ ಪೋಕ್ಸೊ ಕಾಯ್ದೆಯಡಿ ಒಂದು FIR ದಾಖಲಿಸಿದ್ದು, ಉಳಿದ ಮಹಿಳಾ ಕುಸ್ತಿಪಟುಗಳು ನೀಡಿದ ದೂರಿನನ್ವಯ ಇನ್ನೊಂದು ಈಖಐಖ ದಾಖಲಿಸಿದ್ದಾರೆ.

ಬ್ರಿಜ್ ಭೂಷಣ ಅನುಚಿತ ವರ್ತನೆಗಳ ಹಿನ್ನೆಲೆಯಲ್ಲಿ ಅವರನ್ನು ಬಂಧಿಸುವಂತೆ ಆಗ್ರಹಿಸಿ ಹಲವು ದಿನಗಳಿಂದ ಅಂತಾರಾಷ್ಟ್ರೀಯ ಮಟ್ಟದಿಂದ ಹಿಡಿದು ದೇಶದ ಅನೇಕ ಮಹಿಳಾ ಕುಸ್ತಿಪಟುಗಳು ಬೀದಿಗಿಳಿದು ಅನಿರ್ದಿಷ್ಟಾವಧಿ ಪ್ರತಿಭಟನೆ ಆರಂಭಿಸಿದ್ದರು. ಪುರುಷ ಕ್ರೀಡಾಪಟುಗಳೂ ಇದಕ್ಕೆ ಬೆಂಬಲ ವ್ಯಕ್ತಪಡಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಪ್ರತಿಭಟನಾಕಾರರು ನ್ಯಾಯ ಪಡೆಯಲು ಹಗಲು–ರಾತ್ರಿ ಹೋರಾಡುತ್ತಿದ್ದು ರಾತ್ರಿ ಫುಟ್ ಪಾಥ್ ನಲ್ಲೇ ಮಲಗಿದ್ದ ದೃಶ್ಯವೊಂದರ ಚಿತ್ರಗಳನ್ನು ಅಂತಾರಾಷ್ಟ್ರೀಯ ಮಹಿಳಾ ಕುಸ್ತಿಪಟುವೊಬ್ಬರು ಇತ್ತೀಚೆಗೆ ಜಾಲತಾಣದಲ್ಲಿ ಹಂಚಿಕೊಂಡಿದ್ದರು.

ಮಹಿಳಾ ಕುಸ್ತಿಪಟುಗಳ ಈ ಹೋರಾಟಕ್ಕೆ ದೇಶಾದ್ಯಂತ ವ್ಯಾಪಕ ಬೆಂಬಲ ವ್ಯಕ್ತವಾಗಿ–ತ್ತು. ಇದೀಗ ಪೊಲೀಸರು FIR ದಾಖಲಿಸಿದ್ದರೂ ಬ್ರಿಜ್ ಭೂಷಣ ಬಂಧನಕ್ಕೆ ಆಗ್ರಹಿಸಿ ಹೋರಾಟ ಮುಂದುವರಿದಿದೆ. ಹೀಗಾಗಿ ಬ್ರಿಜ್ ಭೂಷಣ ೀಗ ಬಂಧನದ ಭೀತಿ ಎದುರಿಸುತ್ತಿದ್ದಾರೆ.

# ಕರ್ನಾಟಕ ಚುನಾವಣೆ ಬಳಿಕ ವಿಪಕ್ಷಗಳ ನಾಯಕರ ಸಭೆ



ಪಟ್ನಾ: ಕರ್ನಾಟಕ ವಿಧಾನಸಭಾ ಚುನಾವಣೆ ಬಳಿಕ ಪಟ್ನಾದಲ್ಲಿ ವಿರೋಧ ಪಕ್ಷಗಳ ನಾಯಕರ ಸಭೆ ನಡೆಯಬಹುದು ಎಂದು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಸುಳಿವು ನೀಡಿದ್ದಾರೆ.

ಪ್ರತಿಪಕ್ಷಗಳ ಒಗ್ಗಟ್ಟು ರೂಪಿಸುವ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸುವ ನಿರೀಕ್ಷೆಯಿದೆ. 2024 ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಎದುರಿಸಲು ವಿರೋಧ ಪಕ್ಷಗಳ ಮೈತ್ರಿಕೂಟ ರಚನೆಗೆ ಸಂಬಂಧಿಸಿದ ವಿಷಯವನ್ನು ಒಟ್ಟಿಗೆ ಕುಳಿತು ಚರ್ಚಿಸುತ್ತೇವೆ ಎಂದು ಅವರು ಹೇಳಿದರು.

ಪ್ರಸ್ತುತ ಹಲವು ನಾಯಕರು ಕರ್ನಾಟಕ ಚುನಾವಣೆ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದಾರೆ. ಅದು ಮುಗಿದ ಬಳಿಕ ಸಭೆ ನಡೆಯುವ ಸ್ಥಳವನ್ನು ನಿರ್ಧರಿಸಲಾಗುವುದು.

ಪಟ್ನಾದಲ್ಲಿಯೇ ನಡೆಸಲು ಸರ್ವಾನುಮತದ ನಿರ್ಣಯ ಕೈಗೊಂಡರೆ, ಇಲ್ಲಿಯೇ ನಡೆಸಲಾಗುವುದು. ನಾವು ಸಂತೋಷದಿಂದ ಸಭೆ ಆಯೋಜಿಸುತ್ತೇವೆ ಎಂದರು.

ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಏ. 24 ರಂದು ಕೋಲ್ಕತ್ತಾದಲ್ಲಿ ನಿತೀಶ್ ಕುಮಾರ್ ಮತ್ತು ಉಪಮುಖ್ಯಮಂತ್ರಿ ತೇಜಸ್ವಿ ಯಾದವ್ ಅವರನ್ನು ಭೇಟಿಯಾದ ಬಳಿಕ, ಮುಂಬರುವ ಲೋಕಸಭಾ ಚುನಾವಣೆಗೆ ಮುಂಚಿತವಾಗಿ ಪ್ರತಿಪಕ್ಷಗಳ ಒಗ್ಗಟ್ಟಿನ ಬಗ್ಗೆ ಚರ್ಚಿಸಲು ಪಟ್ನಾದಲ್ಲಿ ಬಿಜೆಪಿಯೇತರ ಪಕ್ಷಗಳ ಸಭೆ ಆಯೋಜಿಸುವಂತೆ ಮನವಿ ಮಾಡಿದ್ದರು.

'ನಿತೀಶ್ ಕುಮಾರ್ ಅವರಿಗೆ ಒಂದು ಮನವಿ ಮಾಡಿದ್ದೇನೆ. ಜಯಪ್ರಕಾಶ್ ನಾರಾಯಣ್ ಅವರ ಚಳವಳಿ ಬಿಹಾರದಿಂದ ಪ್ರಾರಂಭವಾಯಿತು.

ಬಿಹಾರದಲ್ಲಿ ಸರ್ವಪಕ್ಷ ಸಭೆ ನಡೆಸಿದರೆ, ನಾವು ಮುಂದೆ ಎಲ್ಲಿಗೆ ಹೋಗಬೇಕು ಎಂಬುದನ್ನು ನಿರ್ಧರಿಸಬಹುದು' ಎಂದು ಬ್ಯಾನರ್ಜಿ ಕೋಲ್ಕತ್ತಾದಲ್ಲಿ ನಿತೀಶ್ ಕುಮಾರ್ ಅವರೊಂದಿಗಿನ ಸಭೆ ಬಳಿಕ ಹೇಳಿದ್ದರು.

'ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ದೇಶದಲ್ಲಿ ಹೆಚ್ಚು ಪಕ್ಷಗಳನ್ನು ಒಗ್ಗೂಡಿಸುವ ಪ್ರಯತ್ನ ಮಾಡುತ್ತಿದ್ದೇವೆ.

ಇತ್ತೀಚೆಗೆ ಹಲವಾರು ವಿರೋಧ ಪಕ್ಷದ ನಾಯಕರನ್ನು ಭೇಟಿಯಾದೆ. ಈಗ ಇತರೆ ಬಿಜೆಪಿಯೇತರ ಪಕ್ಷಗಳೊಂದಿಗೆ ಮಾತನಾಡುತ್ತೇನೆ.

ಸಾರ್ವತ್ರಿಕ ಚುನಾವಣೆಗೆ ಮುನ್ನ ವಿರೋಧ ಪಕ್ಷ ಒಗ್ಗೂಡಿಸುವುದು ನನ್ನ ಗುರಿ' ಎಂದು ನಿತೀಶ್ ಹೇಳಿದರು.



# ಕಾರಿನಿಂದ ಕುಸಿದ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ

ಹೊಸಪೇಟೆ (ವಿಜಯನಗರ) : 'ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯನವರ ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಇಲ್ಲ. ಬಿಸಿಲು ಹೆಚ್ಚಾಗಿರುವುದರಿಂದ ಸ್ವಲ್ಪ ಬಸವಳಿದಿದ್ದರು' ಎಂದು ಕೂಡ್ಲಿಗಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ವೃತ್ತಿಯಿಂದ ವೈದ್ಯರಾಗಿರುವ ಡಾ.ಎನ್.ಟಿ. ಶ್ರೀನಿವಾಸ್ ಹೇಳಿದರು.

ನಾನು ವೈದ್ಯನಾಗಿ ಅವರ ಆರೋಗ್ಯ ವಿಚಾರಿಸಿದ್ದೇನೆ. ಆರೋಗ್ಯವಾಗಿದ್ದೇನೆ ಎಂದು ಹೇಳಿದ್ದಾರೆ. ನಿತ್ಯ ಮೂರ್ನಾಲ್ಕು ಕ್ಷೇತ್ರಗಳಲ್ಲಿ ಬಿಡುವಿಲ್ಲದೆ ಪ್ರಚಾರ ಮಾಡುತ್ತಿದ್ದಾರೆ.

ಅವರ ಕೈಗೆ ಸಣ್ಣ ಇನ್‌ಫೆಕ್ಷನ್ ಆಗಿರುವುದು ಬಿಟ್ಟರೆ ಬೇರೇನೂ ಆಗಿಲ್ಲ' ಎಂದು ಕೂಡ್ಲಿಗಿಯಲ್ಲಿ ಪತ್ರಕರ್ತರಿಗೆ ತಿಳಿಸಿದರು.

# ಅಭಿವೃದ್ಧಿ ಹರಿಕಾರ ಜೆಸಿಎಂಗೆ ಮತ ಹಾಕಿ: ಕೆಎಂಎಲ್ ಕಿರಣ್



ಹುಳಿಯಾರು: ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಹಿಂದೆಂದೂ ಆಗದಷ್ಟು ಅಭಿವೃದ್ಧಿ ಕಾರ್ಯಗಳು ನಡೆದಿದ್ದು ತಾಲೂಕಿನ ಅಭಿವೃದ್ಧಿ ಹರಿಕಾರ ಜೆ.ಸಿ.ಮಾಧುಸ್ವಾಮಿ ಅವರಿಗೆ ಈ ಚುನಾವಣೆಯಲ್ಲಿ ಮತ ಹಾಕಿ ಎಂದು ಹುಳಿಯಾರು ಪಪಂ ಅಧ್ಯಕ್ಷ ಕೆ.ಎಂ.ಎಲ್ ಕಿರಣ್ ಮನವಿ ಮಾಡಿದರು.

ಹುಳಿಯಾರು ಪಟ್ಟಣದಲ್ಲಿ ಜೆ.ಸಿ.ಮಾಧುಸ್ವಾಮಿ ಪರ ಮತಯಾಚನೆ ಮಾಡಿದ ಅವರು ಮಾತನಾಡಿ ಕ್ಷೇತ್ರದ ಜನರ ಬದುಕು ಸುಧಾರಿಸಲು, ನೀರಾವರಿಗಾಗಿ, ವಿದ್ಯುತ್‌ಗಾಗಿ, ರಸ್ತೆ ಅಭಿವೃದ್ಧಿಗಾಗಿ ಸಾವಿರಾರು ಕೋಟಿ ರೂ.ಗಳ ಅಭಿವೃದ್ಧಿ ಕೆಲಸ ಮಾಡಿದ್ದಾರೆ. ರಾಜ್ಯ ಮತ್ತು ಕ್ಷೇತ್ರದ ಸಮಸ್ಯೆ ನಿವಾರಿಸಲು ವಿಧಾನಸಭೆಯಲ್ಲಿ ಅತ್ಯಂತ ಪ್ರಖರವಾಗಿ ದನಿ ಎತ್ತಿ ಸದನಶೂರನೆನ್ನಿಸಿಕೊಂಡಿದ್ದಾರೆ. ಇಂತಹ ಸಮರ್ಥ ನಾಯಕನನ್ನು ಮತ್ತೊಮ್ಮೆ ವಿಧಾನಸಭೆಗೆ ಕಳಿಸುವುದು ಕ್ಷೇತ್ರದ ಜನರ ಹೆಮ್ಮೆಯ ಸಂಗತಿ ಎಂದರು.

**Self Declaration**

Format C-1

Declaration about Criminal Cases

Name of address of Candidate: **Basappa Kumbar**

Name of the Political Party : Karnataka Rashtra Samithi

Karnataka State Legislative Assembly – 2023

Name of Constituency: **Ramdurga**

I, **Basappa Kumbar**, a candidate for the above mentioned election, declare for public information the following details about my criminal antecedents.

(A) Pending criminal cases

| Sl No | Name of Court | Case No. and date | Status of cases(s) | Section of Acts concerned and brief description of offense(s) |
|---|---|---|---|---|
| 1 | JMFC, Savadatti | 34/2020 | Pending | 353, Obstruction to Govt. official |

**From.**
**Basappa kumbar**
**Karnataka state Legislative Assembly**
**Ramduag**

# ಹಿಂದಿನ ಚುನಾವಣೆಯ ಟೆನ್ಶನ್ ನನಗೆ ಈ ಬಾರಿ ಇಲ್ಲ, ನಾನು ಮಾಡಿದ ಕೆಲಸ ನನ್ನ ಕೈ ಹಿಡಿಯಲಿದೆ: ಲಕ್ಷ್ಮೀ ಹೆಬ್ಬಾಳಕರ್ ವಿಶ್ವಾಸ

ಬೆಳಗಾವಿ: ಹಿಂದಿನ ಚುನಾವಣೆಯ ಟೆನ್ಶನ್ ನನಗೆ ಈ ಬಾರಿ ಇಲ್ಲ. ಕಳೆದ 5 ವರ್ಷ ಜನರ ಮಧ್ಯೆ ನಿಂತು ಮಾಡಿದ ಕೆಲಸ ನನ್ನ ಕೈ ಹಿಡಿಯಲಿದೆ ಎಂದು ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಿರಂತರ ಪ್ರಚಾರ ಕಾರ್ಯದ ಮಧ್ಯೆ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಮೊದಲಿನಿಂದಲೂ ಕ್ಷೇತ್ರಾದ್ಯಂತ ಒಳ್ಳೆಯ ರೆಸ್ಪಾನ್ಸ್ ಇದೆ. 5 ವರ್ಷಜನರ ಮಧ್ಯೆ ನಿಂತಿದ್ದೇನೆ, ಅದು ಫಲ ಕೊಡುತ್ತದೆ ಎಂದರು.

ಕ್ಷೇತ್ರದ ಯಾವುದೇ ಭಾಗಕ್ಕೆ ಹೋದರೂ ನಾನು ಮಾಡಿಸಿದ ಒಂದಿಲ್ಲೊಂದು ಅಭಿವೃದ್ಧಿ ಕೆಲಸಗಳು ಕಾಣುತ್ತವೆ. ಪ್ರತಿ ಊರಲ್ಲಿ, ಪ್ರತಿಯೊಬ್ಬರು ನೆನೆಸಿಕೊಳ್ಳುತ್ತಾರೆ, ಅಕ್ಕ ಅದು ನೀವು ಮಾಡಿಸಿಕೊಟ್ಟಿದ್ದು, ಅಕ್ಕ ಇದು ನೀವು ಮಾಡಿಸಿಕೊಟ್ಟಿದ್ದು ಎಂದು ಜನ ನೆನಪಿಸುತ್ತಾರೆ. ಅಕ್ಕ ನಿಮ್ಮಿಂದಾಗಿ ನಮ್ಮೂರಿಗೆ ರಸ್ತೆಯಾಯಿತು. ಎಷ್ಟೋವರ್ಷದಿಂದ ಓಡಾಡಲೂ ಪರದಾಟ ನಡೆಸುತ್ತಿದ್ದೆವು. ನಮ್ಮೂರಲ್ಲಿ ಚರಂಡಿ ಇಲ್ಲದೆ ರಸ್ತೆ ಮೇಲೆಯೇ ಹೊಲಸು ನೀರು ಹರಿಯುತ್ತಿತ್ತು. ನೀವು ಮಾಡಿಸಿಕೊಟ್ಟಿದ್ದರಿಂದ



ನೆಮ್ಮದಿಯಿಂದ ಓಡಾಡುವಂತಾಗಿದೆ ಎಂದು ಜನರು ಸ್ಮರಿಸುತ್ತಾರೆ.

ಕೊರೋನಾ, ಪ್ರವಾಹದಂತಹ ಸಂದರ್ಭದಲ್ಲಿ ಜನರ ಜೊತೆ ನಿಂತಿದ್ದೇನೆ. ನಮ್ಮ ಇಡೀ ಕುಟುಂಬಕ್ಕೆ ಕೊರೋನಾ ಬಂದಿತು. ಆದರೆ ನಮ್ಮ ತೊಂದರೆಯನ್ನು ಜನರಿಗೆ ತೋರ್ಪಡಿಸದೆ ನಮ್ಮ ಇಡೀ ತಂಡವನ್ನು ಜನರ ಸೇವೆಯಲ್ಲಿ ತೊಡಗಿಸಿದ್ದೆವು. ಉಚಿತ ಅಂಬುಲೆನ್ಸ್ ಮೂಲಕ ಹಳ್ಳಿ ಹಳ್ಳಿಯಲ್ಲಿ ರೋಗಿಗಳಿಗೆ ನೆರವಾಗಿದ್ದೇನೆ. ಆಹಾರದ ಕಿಟ್, ಔಷಧದ ಕಿಟ್ ಹಂಚುವ ಮೂಲಕ ಅವರ ಕಷ್ಟದಲ್ಲಿ ಕುಟುಂಬದ ಸದಸ್ಯೆಯಾಗಿ ನಿಂತಿದ್ದೇನೆ. ನಾನು ಆಸ್ಪತ್ರೆಯ ಬೆಡ್ ಮೇಲಿದ್ದ ಸಂದರ್ಭದಲ್ಲೂ ಜನರ ಫೋನ್ ಸ್ವೀಕರಿಸುತ್ತ ಕೊರೋನಾ ಸೋಂಕಿತರಿಗೆ ಬೆಡ್ ವ್ಯವಸ್ಥೆ ಸೇರಿದಂತೆ ಅವರು ಕೇಳಿದ್ದೆಲ್ಲ ವ್ಯವಸ್ಥೆ ಮಾಡಿಸಿದ್ದೇನೆ ಎಂದು ಲಕ್ಷ್ಮೀ ಹೆಬ್ಬಾಳಕರ್ ನೆನಪಿಸಿದರು.

ಪ್ರವಾಹ ಸಂದರ್ಭದಲ್ಲಿ ನಾನೇ ಸ್ವತಃ ಹಳ್ಳಿ ಹಳ್ಳಿಗೆ ಹೋಗಿ ಜನರ ಕಣ್ಣೀರು ಒರೆಸುವ ಕೆಲಸ ಮಾಡಿದ್ದೇನೆ. ಪ್ರತಿ ಮನೆಯ ಸಂಕಷ್ಟಕ್ಕೆ ಸ್ಪಂದಿಸಿದ್ದೇನೆ. ಎಂತಹ ಸಂದರ್ಭದಲ್ಲೂ ಪಲಾಯನ ಮಾಡದೆ ನಿಂತು ಕೆಲಸ ಮಾಡಿದ್ದೇನೆ. ನಾನೊಬ್ಬನೇ ಅಲ್ಲ, ನನ್ನ ಸಹೋದರ, ಮಗ, ನಮ್ಮ ಇಂಡೀ ತಂಡ ಊಟ, ನಿದ್ದೆ ಬಿಟ್ಟು ಜನರೊಂದಿಗೆ ನಿಂತಿದೆ. ರಾತ್ರಿಯಾದರೂ ಸಮಸ್ಯೆ ಪರಿಹರಿಸದೆ ನನಗೆ ಮನೆಗೆ ಬರಲು ಮನಸ್ಸಾಗುತ್ತಿರಲಿಲ್ಲ. ತಮ್ಮ ಕಷ್ಟಕಾಲದಲ್ಲಿ ನಾನು ಮಾಡಿದ ಸೇವೆಗೆ ಜನರೇ ಸಾಕ್ಷಿಯಾಗಿದ್ದಾರೆ. ಇದನ್ನೆಲ್ಲ ನೋಡಿದ ಜನರು ಈಗ ಮನೆ ಮಗಳ ಕೈ ಬಿಡಲು ಸಾಧ್ಯವೇ ಇಲ್ಲ. ಯಾರೋ ಈಗ ಚುನಾವಣೆಯ ಸಂದರ್ಭದಲ್ಲಿ ಬಂದು ಏನೇ ಸುಳ್ಳು ಹೇಳಿದರೂ, ಏನೇ ಸುಳ್ಳು ಭರವಸೆ



ನೀಡಿದರೂ ಅಂತವರ ಮಾತಿಗೆ ಜನರು ಮರುಳಾಗುವುದಿಲ್ಲ. ತಮ್ಮ ಕಷ್ಟ ಕಾಲದಲ್ಲಿ ಕೈ ಹಿಡಿದವರು ಯಾರು ಎಂಬುದು ಗೊತ್ತಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಭಾವುಕರಾಗಿ ನುಡಿದರು.

ಎಂಇಎಸ್ ಅಭ್ಯರ್ಥಿ ಈ ಬಾರಿ ನಿಮಗೆ ಪೈಪೋಟಿ ನೀಡುತ್ತಾರೆಯೇ ಎನ್ನುವ ಪ್ರಶ್ನೆಗೆ ಉತ್ತರಿಸಿದ ಅವರು, ಎಂಇಎಸ್ ಅಭ್ಯರ್ಥಿ ಹಿಂದೆಯೂ ಇದ್ದರು, ಈಗಲೂ ಇದ್ದಾರೆ. ಅದೇನೂ ವ್ಯತ್ಯಸವಾಗಿಲ್ಲ. 2018ರ ಚುನಾವಣೆಯಲ್ಲಿ ನನ್ನ ಜೊತೆ ಇದ್ದ ಮರಾಠಾ ಸಮಾಜದ ಜನರು ಈಗಲೂ ನನ್ನ ಜೊತೆಗೇ ಇದ್ದಾರೆ. ಮರಾಠಾ ಸಮಾಜಕ್ಕೆ ನ್ಯಾಯ ದೊರಕಿಸಿಕೊಡುವ ಕೆಲಸ ಮಾಡಿದ್ದೇನೆ. ಸಮಾಜಕ್ಕೆ ಗೌರವ ಬರುವ ಹಾಗೆ ಸಮಾಜದ ಋಣ ತೀರಿಸುವ ಕೆಲಸ ಮಾಡಿದ್ದೇನೆ. ಯಾರೊಬ್ಬರೂ ಬಿಟ್ಟು ಹೋಗಿಲ್ಲ, ಬದಲಾಗಿ ನನ್ನ ಅಭಿವೃದ್ಧಿ ಕೆಲಸ ನೋಡಿ ಬಹಳಷ್ಟು ಜನರು ಹಿಂದೆ ಅಂತರ ಕಾದುಕೊಂಡಿದ್ದವರೂ ಈಗ ನನ್ನ ಜೊತೆಗೆ ಸೇರಿದ್ದಾರೆ. ಸ್ವಾರ್ಥಕ್ಕೋಸ್ಕರ 4 ತಿಂಗಳು ಬಂದು ರಾಜಕಾರಣ ಮಾಡುವವರ ಬಗ್ಗೆ ಜನರಿಗೆ ಗೊತ್ತಿದೆ. ಹಾಗಾಗಿ ಹಿಂದಿಗಿಂತ ನನ್ನ ಬಲ ಈ ಬಾರಿ ಸಾಕಷ್ಟು ವೃದ್ಧಿಯಾಗಿದೆ ಎಂದು ಹೇಳಿದರು.

ಯಾರನ್ನೂ ನಾನು ವಿರೋಧಿಗಳು ಎಂದು ಪರಿಗಣಿಸುವುದಿಲ್ಲ. ಅವರು ಅವರ ಕೆಲಸ ಮಾಡುತ್ತಿದ್ದಾರೆ. ನಾನು ನನ್ನ ಕೆಲಸ ಮಾಡುತ್ತಿದ್ದೇನೆ. ಬೇರೆ ಪಕ್ಷದವರಾಗಲಿ, ಚುನಾವಣೆಗೆ ಸ್ಪರ್ಧಿಸಿರುವ ಯಾರೇ ಆಗಲಿ ನನ್ನ ವಿರೋಧಿಗಳು ಎಂದುಕೊಳ್ಳುವುದಿಲ್ಲ. ಅನೇಕರು ರಾಜಕೀಯ ಕಾರಣಕ್ಕೆ ನನ್ನನ್ನು ವಿರೋಧಿಸುತ್ತಿರಬಹುದು. ಆದರೆ, ಲಕ್ಷ್ಮೀ ಹೆಬ್ಬಾಳಕರ್ ನಮ್ಮ ಕ್ಷೇತ್ರದಲ್ಲಿ ಹಿಂದೆಂದೂ ಆಗದಷ್ಟು ಕೆಲಸ ಮಾಡಿಸಿದ್ದಾರೆ ಎಂದು ಅವರ ಮನಸ್ಸಾಕ್ಷಿಗೆ ಗೊತ್ತಿದೆ. ಹಾಗಾಗಿ ಪಕ್ಷಾತೀತವಾಗಿ ಈಬಾರಿ ನನ್ನ ಬೆನ್ನಿಗೆ ಜನರು ನಿಂತಿದ್ದಾರೆ. ದಿನದಿಂದ ದಿನಕ್ಕೆ ಬಹಳಷ್ಟು ಜನರು ನನ್ನ ಬೆಂಬಲಕ್ಕೆ ಬರುತ್ತಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರವಾಗಿ ತಿಳಿಸಿದರು.

ರಾಜ್ಯದಲ್ಲಿ ಈ ಬಾರಿ ಕಾಂಗ್ರೆಸ್ ಪಕ್ಷ ಸ್ವಂತ ಬಲದ ಮೇಲೆ ಸರಕಾರ ರಚಿಸಲಿದೆ. ಜನರು ಬೆಲೆ ಏರಿಕೆ, ಭ್ರಷ್ಟಾಚಾರ, ಡಿ ಮೊನಿಟೈಸೇಶನ್, ಕೊರೋನಾ, ಪ್ರವಾಹ, ಪಿಎಸ್ ಐ ಸ್ಕ್ಯಾಮ್, ಶಿಕ್ಷಕರ ನೇಮಕಾತಿ ಸ್ಕ್ಯಾಮ್, ಎಂಜಿನಿಯರ್ಸ್ ನೇಮಕಾತಿ ಸ್ಕ್ಯಾಂ ಎಲ್ಲದರಿಂದ ರೋಸಿ ಹೋಗಿದ್ದಾರೆ. ನಮ್ಮ ಕ್ಷೇತ್ರದಲ್ಲೇ ಸಂತೋಷ ಪಾಟೀಲ ಎನ್ನುವ ಯುವಕ ಭ್ರಷ್ಟಾಚಾರಕ್ಕ ನಲುಗಿ ಆತ್ಮಹತ್ಯೆ ಮಾಡಿಕೊಂಡ. ಎಲ್ಲವೂ ಕ್ಷೇತ್ರದ ಜನರಿಗೆ ಗೊತ್ತಿದೆ. ಹಾಗಾಗಿ ಜನರು ಬಹಳ ಬುದ್ಧಿವಂತರಿದ್ದಾರೆ. ಹಾಗಾಗಿ ಖಂಡಿತ ಕಾಂಗ್ರೆಸ್ ಪಕ್ಷಕ್ಕೆ ಈ ಬಾರಿ ಬಹುಮತವನ್ನು ಕೊಟ್ಟೇ ಕೊಡುತ್ತಾರೆ ಎನ್ನುವ ವಿಶ್ವಾಸವಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

## ಗಂಡನ ಗೆಲುವಿಗೆ ಹೇಗಲು ಕೊಟ್ಟ ಹೆಂಡತಿ

ಅಥಣಿ: ಅಪ ಪ್ರಚಾರದಲ್ಲಿದೆ ವಿರೋಧಿಗಳು ಇದ್ದರೆ ಇತ್ತ ಅಭ್ಯರ್ಥಿಯ ಪತ್ನಿಯು ಬಿರುಸಿನ ಪ್ರಚಾರಕ್ಕೆ ಜನ ಮನ ಸೋಲುತಿದ್ದಾರೆ ಎನ್ನಬಹುದು.

ಅಥಣಿ ವಿಧಾನಸಭಾ ಮತಕ್ಷೇತ್ರದ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಭ್ಯರ್ಥಿಯಾದ ಬಸವರಾಜ ಬಿಸನಕೊಪ್ಪ ಅವರ ಧರ್ಮಪತ್ನಿಯಾದ ಅಶ್ವಿನಿ ಬಸವರಾಜ್ ಬಿಸನಕೊಪ್ಪ ಹಾಗೂ ಅಳಿಯ ಹಾಗೂ ಮುಖಂಡರು. ಅಭಿಮಾನಿಗಳು ಮತ್ತು ಇನ್ನಿತರರು ಸತ್ತಿ ಗ್ರಾಮದ ಮನೆ ಮನೆ ಮನೆಗೆ ತೆರಳಿ ಪ್ರಚಾರದಲ್ಲಿ ತೊಡಗಿವುದು ಹಲವರನ್ನು ಹುಬ್ಬೆರಿಸುವಂತೆ ಮಾಡಿದೆ.

ಕಳೆದ ಕೆಲವು ದಿನಗಳಲ್ಲಿ ಬಸವರಾಜ ಬಿಸನಕೋಪ್ಪ ಗ್ರಾಮ ವಾಸ್ತ್ಯಮಾಡಿ ಜನರ ಹೆಗ್ಗಳಿಕೆಗೆ ಪಾತ್ರರಾಗಿದ್ದರು ಇಗ ಪತ್ನಿ ಯು ಕುಡಾ ಅದೆ ದಾರಿಯಲ್ಲಿ ಸಾಗುತ್ತಿರುವುದು ಸಂಪೂರ್ಣ ಜನರಲ್ಲಿ ಸಂತಸ ತಂದಿದೆ ಎನ್ನುವುದು.

ಚುನಾವಣಾ ಕಾವು ?



ಅಥಣಿ ಕ್ಷೇತ್ರ ಇಗ ರಾಜ್ಯದ ಪ್ರಭಾವಿ ಹಾಗೂ ಚರ್ಚಿತ ಕ್ಷೇತ್ರ ರಾಜಕೀಯ ಇತಿಹಾಸಕಾರರು ಹೇಳುತ್ತಾರೆ.

ಸೋತವನು ಸುನ್ನಾದರೆ ಗೆದ್ದವನು ಹನ್ನಾಗುತ್ತಾನೆ ಎನ್ನುವ ಮಾತುಗಳು ಕೇಳಿ ಬರುತ್ತಿದೆ.

ಕೋಟ್ಯಂತರ ರು ಸುರಿಯುತ್ತಿರುವ ಅಭ್ಯರ್ಥಿಗಳು ಮುಂದೆ ಎನು ಮಾಡುತ್ತಾರೆ ಕಾದು ನೋಡಬೇಕು.

## ಸ್ಥಳೀಯ ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಸಿದ್ದರಾಮಯ್ಯ ಕರೆ



ಕೂಡ್ಲಿಗಿ (ವಿಜಯನಗರ ಜಿಲ್ಲೆ): ಕೂಡ್ಲಿಗಿ ಕ್ಷೇತ್ರದ ಪಕ್ಷದ ಕಾರ್ಯಕರ್ತರ ಆಶಯದಂತೆ ಈ ಸಲದ ಚುನಾವಣೆಯಲ್ಲಿ ಸ್ಥಳೀಯರಿಗೆ ಅವಕಾಶ ನೀಡಲಾಗಿದ್ದು, ಅವರನ್ನು ಗೆಲ್ಲಿಸಬೇಕು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಹೇಳಿದರು.

ಪಟ್ಟಣ ಮಹಾದೇವ ಮೈಲಾರ ಕ್ರೀಡಾಂಗಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಾ. ಶ್ರೀನಿವಾಸ್ ಎನ್.ಟಿ. ಪರ ಏರ್ಪಡಿಸಿದ್ದ ಚುನಾವಣೆಯ ಬಹಿರಂಗ ಸಭೆಯಲ್ಲಿ ಮಾತನಾಡಿದ ಅವರು, ಕಳೆದ 15 ವರ್ಷಗಳಿಂದ ಕ್ಷೇತ್ರದಲ್ಲಿ ಸ್ಥಳೀಯರು ಶಾಸಕರಾಗಿಲ್ಲ. ಈ ಬಾರಿ ಸ್ಥಳೀಯರಿಗೆ ಟಿಕೆಟ್ ಕೊಡಬೇಕು ಎಂದು ನಿರ್ಧಾರ ಮಾಡಿ, ಶ್ರೀನಿವಾಸ್ ಅವರಿಗೆ ಟಿಕೆಟ್ ನೀಡಲಾಗಿದೆ.

ಅವರದು ರಾಜಕೀಯ ಕುಟುಂಬ. ವೃತ್ತಿಯಲ್ಲಿ ವೈದ್ಯರಾಗಿರುವ ಅವರು ಸಾಕಷ್ಟು ಸಮಾಜ ಸೇವೆ ಮಾಡಿದ್ದಾರೆ. ಇವರನ್ನು ಶಾಸಕರಾಗಿ ಮಾಡಿದರೆ ಕ್ಷೇತ್ರದ ಸಮಸ್ಯೆಗಳಿಗೆ ಪರಿಹಾರ ಕೊಡಿಸುತ್ತಾರೆ ಎಂದರು.

ಡಾ. ಶ್ರೀನಿವಾಸ್ ಎನ್.ಟಿ. ಮಾತನಾಡಿ, ಅನೇಕ ವರ್ಷಗಳಿಂದ ನಾನು ವೈದ್ಯ ವೃತ್ತಿ ಮಾಡುತ್ತಿದ್ದು, ನನ್ನಲ್ಲಿ ಯಾವುದೇ ಜಾತಿ ಭೇದವಿಲ್ಲ.

ಸೇವೆಯಿಂದ ಗುರುತಿಕೊಳ್ಳಬೇಕೆ ಹೊರತು ಜಾತಿಯಿಂದ ಗುರುತಿಸಿಕೊಳ್ಳಬಾರದು ಎನ್ನುವ ಕಾರಣಕ್ಕೆ ನನ್ನ ಹೆಸರನ್ನೇ ಬದಲಾಯಿಸಿ ಕೊಂಡಿದ್ದೇನೆ.

ಯಾವುದೇ ಕಾರಣಕ್ಕೂ ಕ್ಷೇತ್ರದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಲು ಬಿಡುವುದಿಲ್ಲ. 40 ವರ್ಷಗಳಿಂದ ನಮ್ಮ ತಂದೆ ರಾಜಕೀಯ ಮಾಡಿದ್ದು, ಗೆಲುವಿಗಿಂತ ಸೋತಿದ್ದೆ ಹೆಚ್ಚು. ನಮ್ಮ ತಂದೆಯ ಹೆಸರಿನಲ್ಲಿ ನಾನು ಕಣ್ಣೀರು ಹಾಕಿ ಮತ ಕೇಳುವುದಿಲ್ಲ.ಇಲ್ಲಿಯ ಸಾವಿರಾರು ಜನರ ಕಣ್ಣೀರು ಒರೆಸಲು ರಾಜಕೀಯಕ್ಕೆ ಬಂದಿದ್ದೇನೆ. ಎಲ್ಲ ಜಾತಿಯವರನ್ನು ಎಲ್ಲ ವರ್ಗದವರನ್ನು ಒಟ್ಟಿಗೆ ತೆಗೆದುಕೊಂಡು ಹೋಗುತ್ತೇನೆ ಎಂದರು. ಹಡಗಲಿ ಕ್ಷೇತ್ರ ಅಭ್ಯರ್ಥಿ ಪಿ.ಟಿ. ಪರಮೇಶ್ವರ ನಾಯ್ಕ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿರಾಜ್ ಶೇಖ್, ಮುಖಂಡರಾದ ಅಲ್ಲಂ ವೀರಭದ್ರಪ್ಪ, ಉಗ್ರಪ್ಪ, ಗುರುರಾಜ್ ನಾಯಕ, ಜಿ. ನಾಗಮಣಿ, ಎಸ್. ವೆಂಕಟೇಶ್, ರಘು ಗುಜ್ಜಲ್, ಉದಯ ಜನ್ನು, ಕಾವಲ್ಲಿ ಶಿವಪ್ಪ ನಾಯಕ, ಎಂ. ಗುರುಸಿದ್ದನಗೌಡ ಇದ್ದರು.

## ಕಾಲೇಜಿನಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿಯ ಬರ್ಬರ ಹತ್ಯೆ



ಬೆಂಗಳೂರು : ಬೆಂಗಳೂರು ನಗರದ ಬಾಗಲೂರು ಪೊಲೀಸ್ ಠಾಣಾ ವ್ಯಾಪ್ತಿಯ ರೇವಾ ಕಾಲೇಜಿನಲ್ಲಿಯೇ ಮೆಕ್ಯಾನಿಕಲ್ ವಿದ್ಯಾರ್ಥಿಯನ್ನು ಚಾಕುವಿನಿಂದ ಇರಿದು ಬರ್ಬರ ಕೊಲೆ ಮಾಡಿರುವ ಘಟನೆ ನಡೆದಿದೆ.

22 ವರ್ಷದ ಗುಜರಾತ್ ಮೂಲದ ಭಾಸ್ಕರ್ ಜೆಟ್ಟಿ (22) ಸಾವನ್ನಪ್ಪಿದ ದುರ್ದೈವಿ ವಿದ್ಯಾರ್ಥಿ ಎಂದು ತಿಳಿದುಬಂದಿದೆ. ರೇವಾ ಕಾಲೇಜು ಪೆಸ್ಟ್ ವೇಳೆ ಎರಡು ಗುಂಪುಗಳ ನಡುವೆ ಗಲಾಟೆಯಾಗಿದೆ ಎಂದು ತಿಳಿದುಬಂದಿದೆ. ನಿನ್ನೆ ರಾತ್ರಿ 9.30 ಕ್ಕೆ ಈ ವೇಳೆ ಭಾಸ್ಕರ್ ಗೆ ಇನ್ನೊಂದು ಗುಂಪು ಚಾಕುವಿನಿಂದ ಇರಿದಿದ್ದು, ವಿದ್ಯಾರ್ಥಿ ಭಾಸ್ಕರ್ ಜೆಟ್ಟಿ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾನೆ.ಘಟನೆ ಕುರಿತು ಬಾಗಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಕುರಿತು ಪೊಲೀಸರು ಕಾಲೇಜು ಸಿಸಿಟಿವಿ ಪರಿಶೀಲನೆ ನಡೆಸುತ್ತಿದ್ದಾರೆ.

## ಜಾಗೃತಿ ಪಥ ಸಂಚಲನ



ಹುಕ್ಕೇರಿ : ತಾಲೂಕಿನ ಹೊಸೂರ ಗ್ರಾಮದಲ್ಲಿ ಪಿಎಸ್ಐ ಮಂಜುನಾಥ್ ನಾಯಿಕ ಇವರ ನೇತೃತ್ವದಲ್ಲಿ ಗ್ರಾಮದಲ್ಲಿ ಚುನಾವಣೆಯನ್ನು ಶಾಂತಿಯುತ ವಾಗಿ ನಡೇಸಲು ಅರೆ ಸೇನಾ ಪಡೆಯಿಂದ ಜಾಗೃತಿ ಪಥ ಸಂಚಲನ ಜರುಗಿತ್ತು.

ಸಂದರ್ಭದಲ್ಲಿ ಮಾತನಾಡಿದಪಿ ಎಸ್ಆಯ್ ಮಜುನಾಥ ನಾಯಿಕ ಅವರು ಚುನಾವಣೆಯನ್ನು ಶಾಂತಿಯುತ ವಾಗ ನಡೇಸಲು ಚುನಾವನಾ ಆಯೋಗವು ಸುಚಿಸಿದ ಕೆಲವು ಪ್ರದೇಶ ಗಳಲ್ಲಿ ಜಾಗೃತಿ ಪತಥ ಸಂಚಲನ ನಡೇಸುತಿರುವುದಾಗ ತಿಳಿಸಿದರು.

ಈ ಸಂದರ್ಭದಲ್ಲಿ ನೀತಿನಕುಮಾರ. ಮೈಲಾರಿ ಬೇಣ್ಣಿ. ಎಮ್ ಶೇಖ. ಎನ್ ಬಿ ಪೂಜಾರಿ. ಸುನೀಲ್ ಚಂದರಗಿ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬೆಳಗಾವಿ ಉತ್ತರದಲ್ಲಿ ಉತ್ತರಾಧಿಕಾರಿಗಾಗಿ ತೀವ್ರ ಪೈಪೋಟಿ

ಬೆಳಗಾವಿ: ಉತ್ತರ ವಿಧಾನಸಭಾ ಕ್ಷೇತ್ರದಲ್ಲಿ ಅಕ್ಷರಸ್ಥ ಮತದಾರರೇ ಹೆಚ್ಚಿದ್ದು, ಉತ್ತರದ ಚುಕ್ಕಾಣಿ ಹಿಡಿಯಲು ರಾಜಕೀಯ ಪಕ್ಷಗಳು ಚಾಣಾಕ್ಷ ರೀತಿಯಲ್ಲಿ ತಮ್ಮ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದಾರೆ.

ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ರಾಜು ಸೇಠ್, ಕೆಆರ‍ಪಿಪಿಯಿಂದ ಪ್ರವೀಣ ಹಿರೇಮಠ , ಬಿಜೆಪಿಯಿಂದ ಡಾ.ರವಿ ಪಾಟೀಲ, ಆಫ್ ನಿಂದ ರಾಜಕುಮಾರ ಟೊಪ್ಪಣ್ಣವರ ಹಾಗೂ ಜೆಡಿಎಸನಿಂದ ಶಿವಾನಂದ ಮುಗಳಿಹಾಳ ಕಣಕ್ಕಿಳಿದಿದ್ದಾರೆ. ಈ ಕ್ಷೇತ್ರದಲ್ಲಿ ಸರ್ಕಾರಿ ಹಾಗೂ ಖಾಸಗಿ ವಲಯದಲ್ಲಿನ ನೌಕರರೇ ಅಧಿಕವಾಗಿ ವಾಸವಾಗಿದ್ದಾರೆ. ಸಂಪೂರ್ಣವಾಗಿ ನಗರದ ಒಂದು ಭಾಗಕ್ಕೆ ಮಾತ್ರ ಸೀಮಿತವಾದ ಕ್ಷೇತ್ರವಿದು. ಇಂಥಹ ಕ್ಷೇತ್ರದಲ್ಲಿ ಲಿಂಗಾಯತರು, ಮುಸ್ಲಿಮರು ಮತ್ತು ಮರಾಠರು ನಿರ್ಣಾಯಕರಾಗಿದ್ದಾರೆ.

ಕ್ಷೇತ್ರದ ವಿಶೇಷತೆ: ಪ್ರತಿಷ್ಠಿತ ಕೆಎಲ್ಇ ಶಿಕ್ಷಣ ಸಂಸ್ಥೆ, ನಾಗನೂರು




ರುದ್ರಾಕ್ಷಿಮಠ, ಕಿಲ್ಲಾ ಕೋಟೆ ಮತ್ತು ಕೆರೆ, ಕೋಟೆ ಆವರಣದ ಶ್ರೀ ದುರ್ಗಾದೇವಿ ಮಂದಿರ, ಐತಿಹಾಸಿಕ ಕಮಲಬಸ್ತಿ ಶಿಲ್ಪ ಮಂದಿರ, ರಾಮಕೃಷ್ಣ ಮಿಶನ್ ಆಶ್ರಮ, ಅಂಜುಮನ್ ಸಂಸ್ಥೆ ಇರುವುದು ಕೂಡ ಇದೇ ಉತ್ತರ ಕ್ಷೇತ್ರದಲ್ಲಿ. ಕ್ಷೇತ್ರದ ಮತದಾರರ ವಿವಿರ: ಮತದಾರರ ಮಾಹಿತಿ: 1,28,891 ಪುರುಷ, 1,25,676 ಮಹಿಳಾ, 8 ಇತರೆ ಸೇರಿ ಒಟ್ಟು 2,54,575 ಸಾವಿರ ಮತದಾರರು ಉತ್ತರ ಮತ ಕ್ಷೇತ್ರದಲ್ಲಿದ್ದಾರೆ.

ಚುನಾವಣಾ ಹಿನ್ನೋಟ: 1967;ಬಿ.ಬಿ.ಸಾಯನಾಯ್ಕ;ಎಂಇಎಸ್, 1972;ಬಿ.ಬಿ.ಸಾಯನಾಯ್ಕ;ಎಂಇ-



ಎಸ್, 1978;ಬಿ.ಬಿ.ಸಾಯನಾಯ್ಕ;–ಎಂಇಎಸ್, 1983;ಆರ್.ಎಸ್. ಮಾನೆ;ಎಂಇಎಸ್, 1985;ಆರ್. ಎಸ್.ಮಾನೆ;ಎಂಇಎಸ್, 1989;ಬಿ. ಆರ್.ಮುಹಾಗಾಂವಕರ್;ಎಂಇಎಸ್, 1992;ಅರ್ಜುನರಾವ್ ಹಿಶೋಬಕರ;–ಎಂಇಎಸ್, 1994;ಎನ್.ಜಿ.ತರಳೆ;ಎಂಇ–ಎಸ್, 1999;ರಮೇಶ ಕುಡಚಿ;ಕಾಂಗ್ರೆಸ್, 2004;ರಮೇಶ ಕುಡಚಿ;ಕಾಂಗ್ರೆಸ್, 2008;ಫಿರೋಜ್ ಸೇಠ್;ಕಾಂಗ್ರೆಸ್ 2013;ಫಿರೋಜ್ ಸೇಠ್;ಕಾಂಗ್ರೆಸ್, ಫಿರೋಜ್ ಸೇಠ್;ಕಾಂಗ್ರೆಸ್, 2018 ಅನಿಲ್ ಎಸ್. ಬೆನಕೆ –ಬಿಜೆಪಿ ಯಿಂದ ಗೆಲುವು ಸಾಧಿಸಿದರು.

ಉತ್ತರದಲ್ಲಿ 4 ಲಿಂಗಾಯತ ಮುಖಂಡರು ಪೈಪೋಟಿ: ಪ್ರವೀಣ ಹಿರೇಮಠ ಗಾಲಿ ಜನಾರ್ಧನ ರೆಡ್ಡಿ ಅವರ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಭ್ಯರ್ಥಿಯಾಗಿ ಬೆಳಗಾವಿ ಉತ್ತರತಕ್ಕೆ ಇಳಿದಿದ್ದಾರೆ. ಆಫ್ ಅಭ್ಯರ್ಥಿ ರಾಜಕುಮಾರ ಟೊಪ್ಪಣ್ಣವರ ಬಿಜೆಪಿ ತೊರೆದು ಆಮಆದ್ಮಿ ಪಾರ್ಟಿ ವತಿಯಿಂದ ಬೆಳಗಾವಿ ಉತ್ತರದ ಅಖಾಡಾಕ್ಕೆ ಇಳಿದಿದ್ದು ಹಲವು ದಿನಗಳಿಂದ ಬೆಳಗಾವಿಯಲ್ಲಿ ಅನೇಕ ಕಾರ್ಯಗಳ ಮೂಲಕ ಹೆಸರುವಾಸಿಯಾಗಿದ್ದಾರೆ. ಬಿಜೆಪಿ ಅಭ್ಯರ್ಥಿ ಡಾ.ರವಿ ಪಾಟೀಲ ಕೂಡ ಒಬ್ಬ ಪ್ರಬಲ ಲಿಂಗಾಯತ ಅಭ್ಯರ್ಥಿಯಾಗಿದ್ದು ಬಿಜೆಪಿಯಲ್ಲಿ ಹಲವು ದಿನಗಳಿಂದ ದುಡಿದಿದ್ದಾರೆ. ಜೆಡಿಎಸ ಅಭ್ಯರ್ಥಿ ಶಿವಾನಂದ ಮುಗಳಿಹಾಳ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಉತ್ತರ ಕರ್ನಾಟಕ ಅಧ್ಯಕ್ಷ ಜೆಡಿಎಸ ಪಕ್ಷಕ್ಕೆ ಸೇರಿದ್ದು ಒಬ್ಬ ಪ್ರಬಲ ಲಿಂಗಾಯತ ಅಭ್ಯರ್ಥಿಯಾಗಿ ಬೆಳಗಾವಿ ಉತ್ತರದ ಚುಕ್ಕಾಣಿ ಹಿಡಿಯಲು ಸಕಲ ಪ್ರಯತ್ನ ನಡೆಸುತ್ತಿದ್ದಾರೆ.

ಬಿಜೆಪಿ ವರ್ಸಸ್ ಕಾಂಗ್ರೆಸ್: ಸದ್ಯ ಉತ್ತರ ಕ್ಷೇತ್ರದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ನೇರ ಪೈಪೋಟಿ ಏರ್ಪಟ್ಟಿದ್ದು, ಇನ್ನುಳಿದಂತೆ ಆಮ್ ಆದ್ಮಿ, ಜೆಡಿಎಸ್, ಎಂಇಎಸ್ ತಕ್ಕ ಮಟ್ಟಿಗೆ ಪೈಪೋಟಿ ನೀಡುತ್ತಿವೆ. ಡಾ. ರವಿ ಪಾಟೀಲ್ಗೆ ಅನಿಲ ಬೆನಕೆ ಬಲವಿದ್ದರೆ, ರಾಜು ಸೇಠ್ಗೆ ಸಹೋದರ ಮಾಜಿ ಶಾಸಕ ಫಿರೋಜ್ ಸೇಠ್ ಬಲವಿದೆ. ಎಲ್ಲ ಪಕ್ಷಗಳ ಅಭ್ಯರ್ಥಿಗಳು ಮತದಾರರನ್ನು ಸೆಳೆಯಲು ಮನೆ ಮನೆ ಪ್ರಚಾರ ಮಾಡುತ್ತಿದ್ದು, ನಾನಾ ರೀತಿಯ ಕಸರತ್ತು ನಡೆಸುತ್ತಿವೆ. ಬಿಜೆಪಿ ಮತ್ತು ಕಾಂಗ್ರೆಸ್ ರಾಷ್ಟ್ರೀಯ ನಾಯಕರು ಕೂಡ ತಮ್ಮ ಅಭ್ಯರ್ಥಿಗಳ ಪರ ಪ್ರಚಾರಕ್ಕೆ ಧುಮುಕಿದ್ದಾರೆ.

## ದಾಯಾದಿಗಳ ಕೊಲೆಗೈದ ವ್ಯಕ್ತಿಗೆ ಶಿಕ್ಷೆ ಪ್ರಕಟ



ಬೆಳಗಾವಿ: ಜಮೀನು ವಿವಾದದಿಂದ ದಾಯಾದಿಗಳನ್ನೇ ಕೊಲೆ ಮಾಡಿದ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯ ಅಪರಾಧಿಗೆ 2 ಲಕ್ಷ ರೂಪಾಯಿ ದಂಡದ ಜೊತೆಗೆ ಜೀವಾವಧಿ ಶಿಕ್ಷೆ ವಿಧಿಸಿ ತೀಪು ನೀಡಿದೆ.

ಬೈಲಹೊಂಗಲ ತಾಲೂಕು ದೊಡವಾಡ ಗ್ರಾಮದ ಮಹಾದೇವ ಹಾಲನ್ನವರ ಶಿಕ್ಷೆಗೊಳಗಾದ ವ್ಯಕ್ತಿ. ಮಹಾದೇವ ಅವರ ತಂದೆ ಯಲ್ಲಪ್ಪ ಮತ್ತು ಸಹೋದರ ನಡುವೆ ಜಮೀನು ವಿವಾದ ಇತ್ತು.

ಈ ವಿವಾದ ಕಾರಣಕ್ಕೆ ಯಲ್ಲಪ್ಪ ಅವರ ಸಹೋದರರಾದ ಅರ್ಜುನ ಹಾಲನ್ನವರ ಮತ್ತು ಸಿದ್ದಪ್ಪ ಹಾಲನ್ನವರ ಎಂಬುವವರನ್ನು ಕೊಲೆ ಮಾಡಲಾಗಿತ್ತು.

ಇದೀಗ ಪ್ರಕರಣದ ವಿಚಾರಣೆ ನಡೆಸಿದ ಬೆಳಗಾವಿಯ 9ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಗೋಪಾಲಾಚಾರ್ಯ ಶಿರೋಳ ಅವರು ಮಹಾದೇವ ಹಾಲನ್ನವರ ಅವರಿಗೆ ಜೀವಾವಧಿ ಶಿಕ್ಷೆ ಮತ್ತು 2 ಲಕ್ಷ ರೂಪಾಯಿ ದಂಡ ವಿಧಿಸಿ ತೀಪು ನೀಡಿದ್ದಾರೆ. ಸರಕಾರಿ ಅಭಿಯೋಜಕ ಬಿ.ಎಸ್. ಕೂಗುನವರ ವಾದ ಮಂಡಿಸಿದ್ದರು.

## ಸೋಲಾರ್ ಹಗರಣದ ತನಿಖೆ ನಡೆಸಿದ್ದ ನಿವೃತ್ತ ಡಿವೈಎಸ್‌ಪಿ ರೈಲ್ವೆ ಹಳಿ ಮೇಲೆ ಶವವಾಗಿ ಪತ್ತೆ

ಕೇರಳ: ಸೋಲಾರ್ ಹಗರಣ ಪ್ರಕರಣದ ತನಿಖೆ ನಡೆಸಿದ್ದ ನಿವೃತ್ತ ಡಿವೈಎಸ್‌ಪಿ ಕೆ. ಹರಿಕೃಷ್ಣನ್ ಹರಿಪಾಡ್‌ನ ಏವೂರ್‌ನಲ್ಲಿ ರೈಲಿಗೆ ಸಿಲುಕಿ ಸಾವಿಗೀಡಾದ ಘಟನೆ ನಡೆದಿದೆ.

ಕೇರಳದ ರಾಮಪುರಂ ದೇವಾಲಯದ ಪೂರ್ವದ ಲೆವೆಲ್ ಕ್ರಾಸಿಂಗ್ ನಲ್ಲಿ ಹರಿಕೃಷ್ಣನ್ ಶವ ಪತ್ತೆಯಾಗಿದೆ.

ಅಪಘಾತದ ಸ್ಥಳದ ಸಮೀಪ ಅವರ ಕಾರನ್ನು ನಿಲ್ಲಿಸಲಾಗಿದ್ದು, ಆತ್ಮಹತ್ಯೆ ಪತ್ರವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಆದರೆ, ಪೊಲೀಸರು ಈ ಬಗ್ಗೆ ಯಾವುದೇ ಮಾಹಿತಿಯನ್ನು ಬಹಿರಂಗಪಡಿಸಿಲ್ಲ ಎಂದು



ವರದಿಯಾಗಿದೆ.

ಹರಿಕೃಷ್ಣನ್ ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದರು. ಪೆರುಂಬವೂರಿನಲ್ಲಿ ಡಿವೈಎಸ್ಪಿ ಆಗಿದ್ದ ಹರಿಕೃಷ್ಣನ್ ಅವರು ಈ ಹಿಂದೆ ಸೋಲಾರ್ ಪ್ರಕರಣದ ವಿಚಾರಣೆಗೆ ಸಂಬಂಧಿಸಿದಂತೆ ಹಲವಾರು ಟೀಕೆಗೆ ಗುರಿಯಾಗಿದ್ದರು ಎಂದು ಸಂಬಂಧಿಕರು ತಿಳಿಸಿದ್ದಾರೆ ಎಂದು ವರದಿಯಿಂದ ತಿಳಿದು ಬಂದಿದೆ.

ಜುಲೈ 2013 ರಲ್ಲಿ, ಸೋಲಾರ್ ವಂಚನೆ ಪ್ರಕರಣದಲ್ಲಿ ಆರೋಪಿ ಯಾಗಿರುವ ಸರಿತಾ ಎಸ್. ನಾಯರ್ ಅವರನ್ನು ತನಿಖಾಧಿಕಾರಿಯನ್ನು ಸಂಪರ್ಕಿಸದೇ ಏಕ ಪಕ್ಷಿಯವಾಗಿ ಬಂಧಿಸಿ ಹರಿಕೃಷ್ಣನ್ ಸುದ್ದಿಯಾಗಿದ್ದರು.

ಸರಿತಾ ಅವರ ಲ್ಯಾಪ್‌ಟಾಪ್ ಗಳನ್ನು ವಶಪಡಿಸಿಕೊಂಡಿದ್ದು ಸೇರಿದಂತೆ ಹಲವು ವಿವಾದಗಳಿಗೆ ಸಂಬಂಧಿಸಿದಂತೆ ಹರಿಕೃಷ್ಣನ್ ಅನೇಕ ಆರೋಪಗಳಿಗೆ ಗುರಿಯಾಗಿದ್ದರು. ಸೋಲಾರ್ ಪ್ರಕರಣವನ್ನು ಪರಿಶೀಲಿಸಿದ ನ್ಯಾಯಾಂಗ ಆಯೋಗವು ಅವರನ್ನು ಟೀಕಿಸಿತ್ತು.

## ಇನ್ನಷ್ಟು ಪ್ರಗತಿ ಸಾಧಿಸಲು ಬಿಜೆಪಿ ಬೆಂಬಲಿಸಿ: ಮಹಾವೀರ ನಿಲಜಗಿ

ಹುಕ್ಕೇರಿ : ಕ್ಷೇತ್ರದಲ್ಲಿ ದಿ.ಉಮೇಶ ಕತ್ತಿ ಅವರ ದೂರದೃಷ್ಟಿ ಆಲೋಚನೆ, ಜನಪರ ಕಾಳಜಿಯಿಂದ ಈಗಾಗಲೇ ಹಲವು ಮಹತ್ತರ ಯೋಜನೆಗಳನ್ನು ಸಾಕಾರಗೊಳಿಸಲು ಸಾಧ್ಯವಾಗಿದೆ. ಆದರೆ, ಮತ್ತಷ್ಟು ಪ್ರಗತಿ ಸಾಧಿಸಲು ಬಿಜೆಪಿ ಅಭ್ಯರ್ಥಿ ನಿಖಿಲ್ ಕತ್ತಿ ಅವರನ್ನು ಮತದಾರರು ಚುನಾವಣೆಯಲ್ಲಿ ಬೆಂಬಲಿಸಬೇಕು ಎಂದು ಮಹಾವೀರ ಸಮೂಹ ಸಂಸ್ಥೆಗಳ ಅಧ್ಯಕ್ಷರೂ ಆದ ಹಿರಿಯ ಮುಖಂಡ ಮಹಾವೀರ ನಿಲಜಗಿ ಹೇಳಿದರು.

ತಾಲೂಕಿನ ಬಡಕುಂದ್ರಿ, ಯರಗಟ್ಟಿ, ಹುನ್ನೂರ, ಯರನಾಳ, ಹೊಸೂರ, ಇಂಗಳಿ, ನಿರ್ವಾನಟ್ಟಿ, ಲೇಬರ್ ಕ್ಯಾಂಪ್, ಬಸವನಗುಡಿ ಮತ್ತಿತರ ಕಡೆಗಳಲ್ಲಿ ಬಿಜೆಪಿ ಅಭ್ಯರ್ಥಿ ನಿಖಿಲ್ ಕತ್ತಿ ಪರ ಮತಪ್ರಚಾರ ನಡೆಸಿ ಅವರು ಮಾತನಾಡಿದರು.

ಕ್ಷೇತ್ರದ 70 ಹಳ್ಳಿಗಳು, ಹುಕ್ಕೇರಿ ಮತ್ತು ಸಂಕೇಶ್ವರ ಪುರಸಭೆ ವ್ಯಾಪ್ತಿಯಲ್ಲಿ ಅಭಿವೃದ್ಧಿ ಶಕೆ



ನಡೆಯುತ್ತಿದೆ. ದಿ.ಉಮೇಶ ಕತ್ತಿ ಅವರಿಂದ ಸಾಕಷ್ಟು ಅಭಿವೃದ್ಧಿ ಕೆಲಸಗಳಾಗಿದ್ದು ಬಿಜೆಪಿ ಅಭ್ಯರ್ಥಿ ನಿಖಿಲ್ ಕತ್ತಿ ಗೆಲುವಿಗೆ ಶ್ರೀರಕ್ಷೆಯಾಗಲಿದೆ. ದಾಖಲೆ ಮತದ ಗೆಲುವು ನಮ್ಮ ಗುರಿಯಾಗಬೇಕು.

ಇನ್ನಷ್ಟು ಅಭಿವೃದ್ಧಿಗಾಗಿ ನಿಖಿಲ್ ಕತ್ತಿ ಬೇಕು ಎಂಬುದಾಗಿ ಜನ ಬಯಸುತ್ತಿದ್ದಾರೆ.

ಹೀಗಾಗಿ ಹುಕ್ಕೇರಿಯಲ್ಲಿ ಮತ್ತೊಮ್ಮೆ ಬಿಜೆಪಿ ವಿಜಯೋತ್ಸವ ಆಚರಿಸಲಿದೆ ಎಂದು ಅವರು ಹೇಳಿದರು.

ಬಿಜೆಪಿ ಪಕ್ಷದ ಶಾಸಕರಿಂದ ಮಾತ್ರ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿ ಸಾಧ್ಯ. ಸಮಾಜದ ಕಟ್ಟ ಕಡೆ ವ್ಯಕ್ತಿಯ ಅಭಿವೃದ್ಧಿ ಬಿಜೆಪಿಯಿಂದ ಮಾತ್ರ ಸಾಧ್ಯ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಕ್ಷೇತ್ರದ ಜನತೆ ತಕ್ಕ ಪಾಠ ಕಲಿಸಲಿದ್ದಾರೆ.

ಸುಳ್ಳು ಹೇಳಿ ಮತದಾರರನ್ನು ದಿಕ್ಕುತಪ್ಪಿಸುವುದೇ ಕಾಂಗ್ರೆಸ್‌ನವರ ಕೆಲಸವಾಗಿದೆ ಎಂದು ಅವರು ಆರೋಪಿಸಿದರು.

ಇನ್ನು ಬಿರುಬಿಸಿಲಿನ ನಡುವೆಯೂ ಅಭ್ಯರ್ಥಿ ಹಾಗೂ ಮುಖಂಡರು ಮನೆ ಮನೆಗೆ ತೆರಳಿ ಮತಯಾಚಿಸಿದರು. ಅಭ್ಯರ್ಥಿ ನಿಖಿಲ್ ಕತ್ತಿ, ಮುಖಂಡರಾದ ಬಸವರಾಜ ಮಟಗಾರ, ಪ್ರಕಾಶ ಮುತಾಲಿಕ, ಸತ್ಯಪ್ಪಾ ನಾಯಿಕ, ರಾಚಯ್ಯ ಹಿರೇಮಠ, ಬಸವರಾಜ ಮರಡಿ, ರಾಯಪ್ಪಾ ಢೂಗ ಮತ್ತಿತರರು ಉಪಸ್ಥಿತರಿದ್ದರು.

## ಶಿಕ್ಷಕಿ ಬೀನಾ ಅಣ್ಣಪ್ಪಾ ಚೌಗಲಾ ಡಾಕ್ಟರೇಟ್ ಪ್ರಶಸ್ತಿ

ಹುಕ್ಕೇರಿ: ತಾಲೂಕಿನ ಬೆಳವಿ ಗ್ರಾಮದ ಸರಕಾರಿ ಪ್ರೌಢಶಾಲೆಯ ದೈಹಿಕ ಶಿಕ್ಷಣ ಶಿಕ್ಷಕಿ ಬೀನಾ ಅಣ್ಣಪ್ಪಾ ಚೌಗಲಾ ಅವರಿಗೆ ಡಾಕ್ಟರೇಟ್ ಪ್ರಶಸ್ತಿ ಲಭಿಸಿದೆ.

ತಮಿಳು ನಾಡಿನ ಇಚ್ಛಾ ಪೌಂಡೇಶನ್‌ಚಾರಿಟೇಬಲ್ ಟ್ರಸ್ಟ್



ಹಾಗೂ ಏಷಿಯಾ ಇಂಟರ್ ನಾರ್ಷನಲ್ ಕಲ್ಚರ ಅಕಾಡಮಿಆಶ್ರಯದಲ್ಲಿ ಜರುಗಿದ ಏಷಿಯಾ ಇಂಟರ್ ನಾರ್ಷನಲ್ ಕಲ್ಚರ ರೀಸರ್ಚ ಯುನರ್ವಸಿಟಿ ವತಿಯಿಂದ ಬೀನಾ ಅಣ್ಣಪ್ಪಾ ಚೌಗಲಾ ಶಿಕ್ಷಣ ಮತ್ತು ಸಮಾಜ ಸೇವಕಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ಕಾಂಗ್ರೆಸ್ ಬೃಹತ್ ಚುನಾವಣಾ ಪ್ರಚಾರ



ವಿಜಯಪುರ: ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಸನ್ಮಾನ್ಯ ಶ್ರೀ ಸತೀಶ್ ಅಣ್ಣಾ ಜಾರಕಿಹೊಳಿಯವರು ವಿಜಯಪುರ ಜಿಲ್ಲೆ ನಾಗಠಾಣ ಕ್ಷೇತ್ರದ ಕಾಂಗ್ರೆಸ್ ಅಧಿಕೃತ ಅಭ್ಯರ್ಥಿಗಳಾದ ಶ್ರೀ ವಿಠ್ಠಲ ಕಟಕಧೋಡ ಅವರ ನೇತೃತ್ವದಲ್ಲಿ ನಡೆದ ಬೃಹತ್ ಚುನಾವಣಾ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಬಡವರ ಬಾಳು ಸುಗಮವಾಗಲಿದೆ. ಬೆಲೆ ಏರಿಕೆಗಳಿಂದ ತತ್ತರಿಸಿರುವ ಮಧ್ಯಮವರ್ಗ ಹಾಗೂ ಕಡುಬಡವರನ್ನು ಗಮನದಲ್ಲಿಟ್ಟುಕೊಂಡು ಅವರಿಗಾಗಿ ಪಂಚ ಯೋಜನೆಗಳನ್ನು ಕಾಂಗ್ರೆಸ್ ಪಕ್ಷ ಈಗಾಗಲೇ ಘೋಷಿಸಿದೆ. ಬಿಜೆಪಿಯ ಭ್ರಷ್ಟ, ಧರ್ಮಾಧಾರಿತ ಆಡಳಿತ ಮತ್ತು ಬೆಲೆ ಏರಿಕೆ ಬರೆಗೆ ಕಾಂಗ್ರೆಸ್ ಪಕ್ಷ ಒಂದೇ ಪರಿಹಾರವಾಗಿದ್ದು, ನಿಮ್ಮ ಆಯ್ಕೆ ಕೂಡ ಕಾಂಗ್ರೆಸ್ ಆಗಿರಲಿ ಎಂದು ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089